ಸಂಪುಟ: 05 ಸಂಚಿಕೆ: 153 ಪುಟಗಳು: 08 ಶುಕ್ರವಾರ 15 ಆಗಸ್ಟ್ 2025
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5
ಉದಯವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಧರ್ಮಸ್ಥಳ ಪ್ರಕರಣ: ಇದು ದೊಡ್ಡ ಷಡ್ಯಂತ್ರ ಎಂದ ಡಿಕೆ

• **ಉದಯವಾಹಿನಿ, ಬೆಂಗಳೂರು**

ಧರ್ಮಸ್ಥಳದಲ್ಲಿ ಎಸ್‌ಐಟಿ ತನಿಖೆ ನಡೆಯುತ್ತಿರುವ ಸಂದರ್ಭದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮಹತ್ವದ ಹೇಳಿಕೆ ನೀಡಿದ್ದಾರೆ. ವಿಧಾನಸೌಧದಲ್ಲಿ ಗುರುವಾರ ಮಾತನಾಡಿದ ಅವರು, ಇದರಲ್ಲಿ ಬಹಳ ದೊಡ್ಡ ಷಡ್ಯಂತ್ರ ನಡೆದಿದೆ. ವೆಲ್ ಪ್ಲಾನ್ಡ್ ಸ್ಟ್ರಾಟರ್ಜಿ ಮಾಡಿ ಅವರ ಮೇಲೆ ಕಪ್ಪು ಚುಕ್ಕೆ ತರಲು ನೋಡ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಯಾರು ಏನು ಅಂತ ನಾನು ಮಾತಾಡುವುದಕ್ಕೆ ಹೋಗುವುದಿಲ್ಲ. ಯಾರನ್ನೋ ತೇಜೋವಧೆ ಮಾಡೋದು ಇದರ ಉದ್ದೇಶವಾಗಿದೆ. ನೂರಾರು ವರ್ಷದಿಂದ ಬಂದ ಪರಂಪರೆ ಹಾಳು ಮಾಡೋದಕ್ಕೆ ಹೊರಟಿದ್ದಾರೆ ಎಂದು ಆರೋಪ ಮಾಡಿದ್ದಾರೆ. ನಮಗೆಲ್ಲ ನಂಬಿಕೆ ಇದೆ, ಧಾರ್ಮಿಕ ಇಲಾಖೆಯನ್ನು ಸರ್ಕಾರ ನಡೆಸುತ್ತಿದ್ದೇವೆ.

ನಮಗೆಲ್ಲ ಗೌರವ ಇದೆ. ಅವನ್ಯಾರೋ ಒಬ್ಬ ಕೋರ್ಟ್‌ಗೆ ಮುಸುಕು ದಾರಿ ಹೇಳಿಕೆ ಕೊಟ್ಟಿದ್ದಾನೆ. ಸಿಎಲ್ ಪಿ ಸಭೆಯಲ್ಲಿ ಈ ಬಗ್ಗೆ ನಾವು ಮಾತನಾಡಿದ್ದೇವೆ. ಬೇಳೂರು ಗೋಪಾಲಕೃಷ್ಣ, ಅಶೋಕ್ ರೈ ಸಹ ಮಾತಾಡಿದ್ದಾರೆ. ಯಾರು ಏನು ಷಡ್ಯಂತ್ರ ಮಾಡ್ತಾರೆ, ಸುಳ್ಳು ಆರೋಪ ಮಾಡ್ತಾರೆ, ಅವರ ವಿರುದ್ಧ ಪೂರ್ಣ ಪ್ರಮಾಣದ ತನಿಖೆ ಮಾಡಿ ಕಾನೂನು ಕ್ರಮಕ್ಕೆ ಹೇಳಿದ್ದೇವೆ ಎಂದರು.

## ಸಿಂಧೂರ: ಉಗ್ರವಾದ ವಿರುದ್ಧದ ಹೋರಾಟಕ್ಕೆ ನಿದರ್ಶನ ವಾಗಲಿದೆ

• **ಉದಯವಾಹಿನಿ, ನವದೆಹಲಿ**

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ ಪ್ರತಿಯಾಗಿ ದೇಶವು ದಿಟ್ಟ ಉತ್ತರ ನೀಡಿದೆ. ಭಾರತ ಕೈಗೊಂಡ ಆಪರೇಷನ್ ಸಿಂಧೂರ, ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ನಿದರ್ಶನವಾಗಿ ಇತಿಹಾಸದಲ್ಲಿ ಉಳಿಯಲಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಗುರುವಾರ ಹೇಳಿದ್ದಾರೆ. 79ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ರಾಷ್ಟ್ರವನ್ನು ಉದ್ದೇಶಿಸಿ ಅವರು ಮಾತನಾಡಿದರು. ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಹತ್ಯೆ ಹೇಡಿತನದ ಮತ್ತು ಅಮಾನವೀಯ ಕೃತ್ಯ' ಎಂದು ಖಂಡಿಸಿದ ಅವರು, ಪ್ರತೀಕಾರವಾಗಿ ಸಶಸ್ತ್ರ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಉಗ್ರರ ಮೂಲಸೌಕರ್ಯಗಳನ್ನು ನಾಶಪಡಿಸಲಾಯಿತು. ಇದು ದೇಶದಲ್ಲಿನ ಒಗ್ಗಟ್ಟು ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಹೆಚ್ಚುತ್ತಿರುವ ಸ್ವಾವಲಂಬನೆಯನ್ನು ತೋರಿಸುತ್ತದೆ' ಎಂದು ಬಣ್ಣಿಸಿದರು. 'ದೇಶವನ್ನು ವಿಭಜಿಸಲು ಯತ್ನಿಸಿದವರಿಗೆ, ಒಗ್ಗಟ್ಟು ಪ್ರದರ್ಶಿಸುವ ಮೂಲಕ ದೇಶದ ಜನತೆ ತಕ್ಕ ಉತ್ತರ ನೀಡಿದ್ದಾರೆ' ಎಂದರು

## ಶರಣಬಸವೇಶ್ವರ ಸಂಸ್ಥಾನದ 8ನೇ ಪೀಠಾಧಿಪತಿ ಶರಣಬಸವಪ್ಪ ಅಪ್ಪ ಇನ್ನಿಲ್ಲ

• **ಉದಯವಾಹಿನಿ, ಕಲಬುರಗಿ**

ಶರಣಬಸವೇಶ್ವರ ಸಂಸ್ಥಾನದ 8ನೇ ಪೀಠಾಧಿಪತಿ, ಶರಣಬಸವೇಶ್ವರ ವಿಶ್ವವಿದ್ಯಾಲಯದ ಕುಲಾಧಿಪತಿ ಯಾಗಿದ್ದ ಡಾ.ಶರಣಬಸವಪ್ಪ ಅಪ್ಪ (90) ಅವರು ಗುರುವಾರ ರಾತ್ರಿ 9.23ಕ್ಕೆ ನಿಧನರಾದರು. ಅಲ್ಪಕಾಲದ ಅನಾರೋಗ್ಯದಿಂದಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು, ಗುರುವಾರ ಸಂಜೆ ಆಸ್ಪತ್ರೆಯಿಂದ ಅಪ್ಪ ಅವರ ನಿವಾಸ 'ಮಹಾಮನೆ'ಗೆ ಕರೆದೊಯ್ದ ಕೆಲ ಹೊತ್ತಿನಲ್ಲಿ ಕೊನೆಯುಸಿರೆಳೆದರು.

ಅವರಿಗೆ ಪತ್ನಿ ದಾಕ್ಷಾಯಣಿ ಎಸ್. ಅಪ್ಪ, ಏಳು ಜನ ಪುತ್ರಿಯರು, ಪುತ್ರ, ಸಂಸ್ಥಾನದ 9ನೇ ಪೀಠಾಧಿಪತಿ ದೊಡ್ಡಪ್ಪ ಅಪ್ಪ ಇದ್ದಾರೆ. ಧಾರ್ಮಿಕ ಕ್ಷೇತ್ರದಲ್ಲಿ ಗುರುತಿಸಿಕೊಳ್ಳುವುದರ ಜೊತೆಗೆ ಶೈಕ್ಷಣಿಕ ಕ್ರಾಂತಿ ಮಾಡಿದ್ದ ಶರಣಬಸವಪ್ಪ ಅವರು ಶರಣಬಸವೇಶ್ವರ ವಿಶ್ವವಿದ್ಯಾಲಯ, ಶರಣಬಸವೇಶ್ವರ ರೆಸಿಡೆನ್ಸಿಯಲ್ ಪಬ್ಲಿಕ್ ಸ್ಕೂಲ್, ಅಪ್ಪ ಪಬ್ಲಿಕ್ ಸ್ಕೂಲ್, ಗೋದುತಾಯಿ ಮಹಿಳಾ ಕಾಲೇಜು, ಎಂಜಿನಿಯರಿಂಗ್, ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಕಾಲೇಜುಗಳನ್ನು ಆರಂಭಿಸಿ ಹೊಸ ಎತ್ತರಕ್ಕೆ ಕೊಂಡೊಯ್ದರು.

## ಎಲ್‌ಕೆಜಿ ಪ್ರವೇಶ ನಿರಾಕರಣೆ: ಹಕ್ಕಿನ ಉಲ್ಲಂಘನೆ

• **ಉದಯವಾಹಿನಿ, ಬೆಂಗಳೂರು**

ಖಾಸಗಿ ಅನುದಾನರಹಿತ ಶಾಲೆಯಲ್ಲಿ ವಿದ್ಯಾರ್ಥಿಗೆ ಪ್ರವೇಶ ನಿರಾಕರಣೆ ಮಾಡಿದರೆ ಅದು ಸಂವಿಧಾನದ 21ನೇ (ಜೀವಿಸುವ ಮತ್ತು ಸ್ವಾತಂತ್ರ್ಯದ ಮೂಲಭೂತ ಹಕ್ಕು) ವಿಧಿಯ ಉಲ್ಲಂಘನೆ ಆಗುವುದಿಲ್ಲ' ಎಂದು ಹೈಕೋರ್ಟ್ ಪ್ರಕರಣವೊಂದರಲ್ಲಿ ಸ್ಪಷ್ಟಪಡಿಸಿದೆ. 'ನನ್ನ ಮಗನಿಗೆ ಎಲ್‌ಕೆಜಿ ಪ್ರವೇಶಾತಿ ನಿರಾಕರಿಸಲಾಗಿದೆ' ಎಂದು ಆಕ್ಷೇಪಿಸಿ ಬೆಳಗಾವಿ ಕ್ಯಾಂಪ್ ಪ್ರದೇಶದ 'ಸೆಂಟ್ ಪಾಲ್ಸ್ ಹೈಸ್ಕೂಲ್' ಆಡಳಿತ ಮಂಡಳಿಯ ಕ್ರಮವನ್ನು ಪ್ರಶ್ನಿಸಿ ಬೆಳಗಾವಿಯ ಶ್ರೀನಗರ ನಿವಾಸಿ ಮುಜಮ್ಮಿಲ್ ಖಾಜಿ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ನ್ಯಾಯಪೀಠ (ಧಾರವಾಡ) ಈ ಕುರಿತಂತೆ ಆದೇಶಿಸಿದೆ. ಅರ್ಜಿಯನ್ನು ವಜಾಗೊಳಿಸಿರುವ ನ್ಯಾಯಪೀಠ ಅರ್ಜಿದಾರರ ಮಗುವಿಗೆ ಪ್ರವೇಶ ನಿರಾಕರಿಸಿರುವುದು ಸಂವಿಧಾನ ಉಲ್ಲಂಘನೆ ಆಗದು. ಅರ್ಜಿದಾರರು ಬೇರೆ ಶಾಲೆಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆದುಕೊಳ್ಳಬಹುದು' ಎಂದು ಸೂಚಿಸಿದೆ

ನಟ ದರ್ಶನ್ ಸೇರಿ 7 ಆರೋಪಿಗಳ ಜಾಮೀನು ರದ್ದು..!

ಸುಪ್ರೀಂ ಕೋರ್ಟ್ ಮಹತ್ವದ ಆದೇಶ

ನಟ ದರ್ಶನ್, ಪವಿತ್ರಾಗೌಡ ಬಂಧನ

7 ಆರೋಪಿಗಳನ್ನು ಬಂಧಿಸಿದ ಪೊಲೀಸರು

# ದರ್ಶನ್‌ಗೆ ಗ್ರಹಚಾರ ಮತ್ತೆ ಪರಪ್ಪನ ಅಗ್ರಹಾರ



## ಮೂರನೇ ಬಾರಿಗೆ ಪರಪ್ಪನ ಅಗ್ರಹಾರ ಜೈಲು ಸೇರಿದ ದರ್ಶನ್



**ಹೈಕೋರ್ಟ್ ಜಾಮೀನು ನೀಡುವಾಗ ಸೂಕ್ತ ಮಾನದಂಡ ಅನುಸರಿಸಿಲ್ಲ**

**ಆರೋಪಿ ಎಷ್ಟೇ ದೊಡ್ಡವನಾಗಿದ್ದರೂ, ಅವನು ಅಥವಾ ಅವಳು ಕಾನೂನಿಗಿಂತ ಮೇಲಲ್ಲ ಎಂಬ ಸಂದೇಶ**

**ಮಾದರಿ ತೀರ್ಪು ನೀಡಿದ ಸುಪ್ರೀಂ**

• **ಉದಯವಾಹಿನಿ, ಬೆಂಗಳೂರು**

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಆರೋಪಿಗಳ ಜಾಮೀನು ರದ್ದಾಗುತ್ತಿದ್ದಂತೆ ಎಲ್ಲಾ ಆರೋಪಿಗಳನ್ನು ಬಂಧಿಸಿ ಪೊಲೀಸರು ಪರಪ್ಪನ ಅಗ್ರಹಾರಕ್ಕೆ ಕಳುಹಿಸಿದ್ದಾರೆ. ನಟ ದರ್ಶನ್, ಪವಿತ್ರಗೌಡ ,ಪ್ರದೂಷ್, ನಾಗರಾಜ್ ಹಾಗೂ ಲಕ್ಷ್ಮಣನನ್ನು ಬಂಧಿಸಿ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಗೆ ಕರೆತಂದರು. ಅಲ್ಲಿ ಆರೋಗ್ಯ ತಪಾಸಣೆ ಮಾಡಿಸಿ, ಕೋರಮಂಗಲದಲ್ಲಿರುವ 64ನೇ ಸಿಸಿಹೆಚ್ ಕೋರ್ಟ್‌ನ ನ್ಯಾಯಾಧೀಶರ ಮನೆಗೆ ಕರೆದೊಯ್ದು, ಜಡ್ಜ್ ಮುಂದೆ ಹಾಜರುಪಡಿಸಿದರು. ಈ ವೇಳೆ ಸುಪ್ರೀಂ ಕೋರ್ಟ್ ಜಾಮೀನು ರದ್ದು ಪಡಿಸಿದ ಆದೇಶ ಪ್ರತಿ ನ್ಯಾಯಾಧೀಶರಿಗೆ ಪೊಲೀಸರು ಸಲ್ಲಿಸಿ, ಆದೇಶ ಪಾಲಿಸಲಾಗಿದೆ ಎಂದು ಮಾಹಿತಿ ನೀಡಿದರು. ಬಳಿಕ ಆರೋಪಿಗಳ ಸರ್ಕಾರಿ ದಾಖಲೆಯನ್ನು ಜಡ್ಜ್ ಕೇಳಿ, ಪರಿಶೀಲಿಸಿದರು. ಈ ಪ್ರಕ್ರಿಯೆ ಮುಗಿದ ಬಳಿಕ ಎಲ್ಲಾ ಆರೋಪಿಗಳು ಪರಪ್ಪನ ಅಗ್ರಹಾರ ಜೈಲಿಗೆ ಕಳಿಸಿದರು. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಪವಿತ್ರಾ, ಗೌಡ ಸೇರಿದಂತೆ ಎಲ್ಲಾ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಜಾಮೀನನ್ನು ಗುರುವಾರ ಸುಪ್ರೀಂ ಕೋರ್ಟ್ ರದ್ದುಗೊಳಿಸಿತ್ತು. ಜಾಮೀನು ರದ್ದು ಮಾಡುವಾಗ ನ್ಯಾಯಾಲಯ, ಎಲ್ಲರೂ ಸರೆಂಡರ್ ಆಗಬೇಕು.

ಆರೋಪಿ ಎಷ್ಟೇ ದೊಡ್ಡವನಾಗಿದ್ದರೂ, ಅವನು ಅಥವಾ ಅವಳು ಕಾನೂನಿಗಿಂತ ಮೇಲಲ್ಲ ಎಂಬ ಸಂದೇಶ ರವಾನಿಸಿತ್ತು. ಇನ್ನೂ ಆರೋಪಿಗಳ ಪರ ವಕೀಲರು ಸಮಯ ಕೇಳದ ಕಾರಣ ಇಂದೇ ಆರೋಪಿಗಳು ಶರಣಾಗ ಬೇಕಿತ್ತು.

**2011ರಲ್ಲಿ ದರ್ಶನ್ ಜೈಲು ಪಾಲು:** ಈ ಹಿಂದೆ ಸಹ ದರ್ಶನ್ ಎರಡು ಬಾರಿ ಪರಪ್ಪನ ಅಗ್ರಹಾರ ಜೈಲು ಸೇರಿದ್ದರು. ಮೊದಲನೆ ಬಾರಿ 2011ರಲ್ಲಿ ತಮ್ಮ ಪತ್ನಿ ವಿಜಯಲಕ್ಷ್ಮಿಯವರ ಮೇಲೆ ಹಲ್ಲೆ ಮಾಡಿ ದರ್ಶನ್ ಸ್ವಲ್ಪ ದಿನಗಳ ಕಾಲ ಜೈಲು ಪಾಲಾಗಿದ್ದರು. ಬಲ್ಲ ಮೂಲಗಳ ಪ್ರಕಾರ, ಅಂದು ಹಿರಿಯ ನಟ ಅಂಬರೀಶ್ ಮಧ್ಯಪ್ರವೇಶಿಸಿ ದರ್ಶನ್ ಹಾಗೂ ವಿಜಯಲಕ್ಷ್ಮೀ ಮಧ್ಯೆ ರಾಜಿ ಮಾಡಿಸಿದ್ದರು ಎನ್ನಲಾಗಿತ್ತು. ಇನ್ನೂ ಎರಡನೇ ಬಾರಿ ರೇಣುಕಾಸ್ವಾಮಿ ಹತ್ಯೆ ಕೇಸ್‌ನಲ್ಲಿ ಮೊದಲು ಬಂಧನವಾದ ಬಳಿಕ ಪರಪ್ಪನ ಅಗ್ರಹಾರದಲ್ಲಿ ಇರಿಸಲಾಗಿತ್ತು. ಈ ಜೈಲಿನಲ್ಲಿ ರಾಜಾತಿಥ್ಯದ ಆರೋಪ ಕೇಳಿ ಬಂದ ಬೆನ್ನಲ್ಲೇ ಅವರನ್ನು ಬಳ್ಳಾರಿ ಜೈಲಿಗೆ ರವಾನಿಸಲಾಗಿತ್ತು. ಬಳಿಕ ದರ್ಶನ್ ಅಂಡ್ ಗ್ಯಾಂಗ್ ಹೈಕೋರ್ಟ್‌ನಿಂದ ಜಾಮೀನು ಪಡೆದು ಹೊರಗೆ ಬಂದಿದ್ದರು. ಇದೀಗ ಜಾಮೀನು ರದ್ದಾದ ಬೆನ್ನಲ್ಲೇ ಮೂರನೇ ಬಾರಿಗೆ ದರ್ಶನ್ ಪರಪ್ಪನ ಅಗ್ರಹಾರ ಜೈಲು ಸೇರಿದ್ದಾರೆ.

1. ನಟ ದರ್ಶನ್‌ಗೆ ಜಾಮೀನು ರದ್ದು ಮಾಡಿ ಸುಪ್ರೀಂ ಕೋರ್ಟ್
2. ಪರಪ್ಪನ ಅಗ್ರಹಾರ ಸೇರಿದ ನಟ ದರ್ಶನ್
3. ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಕರ್ನಾಟಕ ಹೈಕೋರ್ಟ್ ಡಿ.ನಲ್ಲಿ ಜಾಮೀನು ನೀಡಿತ್ತು.

ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ( ಪವಿತ್ರಾಗೌಡ ಸೇರಿ 7 ಆರೋಪಿಗಳ ಜಾಮೀನು ರದ್ದು ಮಾಡಿ ಸುಪ್ರೀಂಕೋರ್ಟ್ ಆದೇಶ ಹೊರಡಿಸಿದೆ. ಹೈಕೋರ್ಟ್ ಆದೇಶಗಳ ಲೋಪವನ್ನು ಸುಪ್ರೀಂ ಎತ್ತಿ ತೋರಿಸಿದೆ. ಆ ಮೂಲಕ ಇನ್ನು ಮುಂದೆ ಆರೋಪಿಗಳು ಜೈಲಿನಲ್ಲಿ ಸಿಗರೇಟ್ ಸೇದಿದ ಅಥವಾ ರಾಜ್ಯಾತಿಥ್ಯದ ಯಾವುದೇ ಫೋಟೋ ಕಂಡು ಬಂದರೆ ಜೈಲು ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವಂತೆ ಸುಪ್ರೀಂಕೋರ್ಟ್ ಎಚ್ಚರಿಕೆ ನೀಡಿದೆ.



ಸುಪ್ರೀಂಕೋರ್ಟ್‌ನ ನ್ಯಾ. ಜೆ.ಬಿ.ಪರ್ದಿವಾಲಾ, ನ್ಯಾ.ಆರ್.ಮಹಾದೇವನ್ ಅವರಿದ್ದ ದ್ವಿಸದಸ್ಯ ಪೀಠ ಪ್ರಕರಣ ವಿಚಾರಣೆ ಮಾಡಿದ್ದು, ಆರೋಪಿ ಎಷ್ಟೇ ದೊಡ್ಡವರಿದ್ದರೂ ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ, ಯಾರೂ ಚಿಕ್ಕವರಲ್ಲ. ಆರೋಪಿಗಳಿಗೆ 5 ಸ್ಟಾರ್ ಟ್ರೀಟ್‌ಮೆಂಟ್ ನೀಡಲಾಗಿದೆ. ಜೈಲು ಅಧಿಕಾರಿಗಳನ್ನು ಸಸ್ಪೆಂಡ್ ಮಾಡಬೇಕಿತ್ತು ಎಂದು ಹೇಳಿದರು.ಇನ್ನು ಮುಂದೆ ರಾಜ್ಯಾತಿಥ್ಯದ ಯಾವುದೇ ಫೋಟೋ, ವಿಡಿಯೋ ಕಂಡು ಬಂದರೆ, ಆರೋಪಿ ಜೈಲಿನ ಲಾನ್‌ನಲ್ಲಿ ಕುಳಿತು ಸಿಗರೇಟ್ ಸೇದಿದರೆ ಜೈಲು ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗುವುದು. ಇದು ಲ್ಯಾಂಡ್ ಮಾರ್ಕ್ ತೀರ್ಪು. ಈ ತೀರ್ಪಿನ ಪ್ರತಿ ಎಲ್ಲಾ ಹೈಕೋರ್ಟ್‌ಗಳಿಗೆ ಮತ್ತು ಜೈಲುಗಳಿಗೂ ಕಳುಹಿಸುವಂತೆ ಸುಪ್ರೀಂಕೋರ್ಟ್ ಖಡಕ್ ಸೂಚನೆ ನೀಡಿದೆ.

**ಜೈಲಲ್ಲಿ ಸಿಗರೇಟ್ ಸೇದುವ ಹಾಗಿಲ್ಲ**

**ಏನಿದು ಕೇಸ್...** 2024 ಜೂನ್ 8ರಂದು ಚಿತ್ರದುರ್ಗದ ರೇಣುಕಸ್ವಾಮಿ ಅವರನ್ನು ಅಪಹರಿಸಿ ಕೊಲೆ ಮಾಡಿದ್ದಾರೆ ಎಂಬ ಆರೋಪದಡಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ 17 ಮಂದಿಯನ್ನು ಬೆಂಗಳೂರು ಪೊಲೀಸರು ಬಂಧನ ಮಾಡಿದ್ದರು. ನ್ಯಾಯಾಂಗ ಬಂಧನದಲ್ಲಿದ್ದ ಆರೋಪಿಗಳಿಗೆ ಡಿಸೆಂಬರ್ ವೇಳೆಗೆ ಕರ್ನಾಟಕ ಹೈಕೋರ್ಟ್ ಜಾಮೀನು ನೀಡಿತ್ತು.

### ನ್ಯಾಯದ ಮೇಲೆ ನಂಬಿಕೆ ಬಂತು

ನಾನು ಲಿಂಗಕ್ಕೆ ಪೂಜೆ ಮಾಡಲು ಆರಂಭಿಸಿದಾಗ ಈ ಸುದ್ದಿ ಸಿಕ್ಕಿದೆ. ನನ್ನ ಪೂಜಾ ಫಲಸಿಕ್ಕಿದೆ ಎಂದು ಭಾವುಕರಾದರು.ಹೈಕೋರ್ಟ್ ಜಾಮೀನು ಕೊಟ್ಟಾಗ ಆತಂಕ ಆಗಿತ್ತು. ಆದ್ರೆ, ಸರ್ಕಾರದಿಂದ ಮೇಲ್ಮನವಿ ಸಲ್ಲಿಸಿದ ಕಾರಣ ಅವರ ಜಾಮೀನು ರದ್ದಾಗಿದೆ. ಇದರಿಂದ ಯಾವುದೇ ಅಪರಾಧಿ ಕಾನೂನಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಅನ್ನೋದನ್ನ ಸುಪ್ರೀಂ ಕೋರ್ಟ್ ತಿಳಿಸಿಕೊಟ್ಟಿದೆ. ಇದರಿಂದ ನಮಗೆ ಸಮಾಧಾನ ಇದೆ. ಸರ್ಕಾರ, ನ್ಯಾಯಾಂಗದ ಬಗ್ಗೆ ನಮಗೆ ನಂಬಿಕೆ ಹೆಚ್ಚಾಗಿ ಬಂದಿದೆ ಎಂದರು.

### ಕಾನೂನಿನ ಪ್ರಕಾರ ಶಿಕ್ಷೆ ಆಗಲಿ

ರೇಣುಕಾಸ್ವಾಮಿ ಪತ್ನಿ ಸಹನಾ ಪ್ರತಿಕ್ರಿಯೆ ನೀಡಿದ್ದು, ಯಾರು ತಪ್ಪು ಮಾಡಿದ್ದಾರೋ ಅವರಿಗೆ ಶಿಕ್ಷೆ ಆಗಿದೆ. ಕಾನೂನಿನಲ್ಲಿ ಎಲ್ಲರೂ ಸಮಾನರು ಎಂದು ಗೊತ್ತಾಗಿದೆ. ಯಾರೇ ತಪ್ಪು ಮಾಡಿದ್ದರೂ ಅವರಿಗೆ ಶಿಕ್ಷೆಯಾಗಲಿ. ಕಾನೂನಿನಲ್ಲಿ ಯಾವ ರೀತಿ ಶಿಕ್ಷೆ ಆಗಬೇಕು ಅದನ್ನು ಕೊಡಲಿ ಅನ್ನೋದಷ್ಟೇ ನಮ್ಮ ಪ್ರಾರ್ಥನೆ ಎಂದು ಹೇಳಿದರು. ರೇಣುಕಾಸ್ವಾಮಿ ತಾಯಿ ರತ್ನಪ್ರಭ ಮಾತನಾಡಿ, ಕೋರ್ಟಿಗೆ ತಲೆ ಬಾಗಲೇ ಬೇಕು, ನಮಗೆ ನ್ಯಾಯ ಸಿಕ್ಕಿದೆ. ನಮ್ಮ ಮನೆಯವರು ಪೂಜೆಗೆ ಕೂತಾಗ ಹೇಳಿದ್ದೇನೆ. ನಮಗೆ ಇದೀಗ ಸಂತೋಷವಾಗಿದೆ ಎಂದರು.

# ಆರ್‌ಟಿಸಿಯಲ್ಲೂ ಕೋರ್ಟ್ ತಡೆಯಾಜ್ಞೆ ದಾಖಲು

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಯಾವುದೇ ಆಸ್ತಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ತಡೆಯಾಜ್ಞೆಯಿದ್ದರೆ ಅದೂ ಆರ್‌ಟಿಸಿಯಲ್ಲಿ ದಾಖಲಾಗಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಭೂಮಿಯ ಸ್ವಾಧೀನಪಡಿಸಿಕೊಂಡಿರುವ ಹಾಗೂ ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಿರುವ ಜಮೀನುಗಳ ಆರ್‌ಟಿಸಿಗಳಲ್ಲಿ ಈ ಎಲ್ಲದರ ವಿವರವನ್ನು ನಮೂದಿಸುವ ಅಧಿಕಾರವನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಇದೀಗ ನೀಡಲಾಗಿದೆ. ಇದರಿಂದ ಸಮಸ್ಯಾತ್ಮಕ ಆಸ್ತಿಗಳ ವಹಿವಾಟಿಗೆ ಕಡಿವಾಣ ಬೀಳಲಿದೆ, ಎಂದು ಸದನಕ್ಕೆ ಮಾಹಿತಿ ನೀಡಿದರು.

ಸರಕಾರಿ ವ್ಯವಸ್ಥೆಯಲ್ಲಿ ಒಳ್ಳೆಯ ಮಾತಿಗೆ ಗೌರವವೇ ಇಲ್ಲ. ನಾನಾ ಇಲಾಖೆಗಳ ಅಧಿಕಾರಿಗಳು ಭೂದಾಖಲೆಗಳ ಡಿಜಿಟಲೀಕರಣಕ್ಕೆ 8 ತಿಂಗಳು ಸತಾಯಿಸಿದರು. ಆಸ್ತಿಗಳ ನೋಂದಣಿಗೆ ಇ-ಖಾತಾ ಕಡ್ಡಾಯವೆಂಬ ಕಬ್ಬಿಣದ ತಡೆಗೋಡೆ ಹಾಕಿದ್ದರಿಂದ ಸಾಕಷ್ಟು ಟೀಕೆ-ಟಿಪ್ಪಣಿಗೆ ಒಳಗಾದೆ. ಅದಾದ ಬಳಿಕ ದಾಖಲೆಗಳ ಡಿಜಿಟಲೀಕರಣ ಪ್ರಕ್ರಿಯೆ ಶುರುವಾಯಿತು. ಟೀಕೆಗೆ ಗುರಿಯಾಗದಿದ್ದರೆ ಬದಲಾವಣೆ ತರುವುದು ಅಸಾಧ್ಯ, ಎಂದು ಹೇಳಿದರು. ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿದ್ದ 2025ನೇ ಸಾಲಿನ 'ನೋಂದಣಿ ವಿಧೇಯಕದ ಮೇಲೆ ಪರಿಷತ್‌ನಲ್ಲಿ ಗುರುವಾರ ನಡೆದ ಚರ್ಚೆಗೆ ಉತ್ತರಿಸಿದ ಅವರು, ವ್ಯವಸ್ಥೆಯಲ್ಲಿನ ಲೋಪಗಳ ಕುರಿತು ಮಾತನಾಡಿದರು. ಈ ವಿಧೇಯಕವನ್ನು ಪಕ್ಷಾತೀತವಾಗಿ ಎಲ್ಲಾ ಸದಸ್ಯರು

**ಸಮಸ್ಯಾತ್ಮಕ ಆಸ್ತಿ ವಹಿವಾಟಿಗೆ ಕಡಿವಾಣ**




ಸ್ವಾಗತಿಸಿ, ಸರ್ವಾನುಮತದಿಂದ ಒಪ್ಪಿಗೆ ನೀಡಿದರು.

ಹಕ್ಕುಪತ್ರಗಳ ನೋಂದಣಿ, ಜಿಪಿಎ ನೋಂದಣಿ, ಕೃಷಿ ಸಾಲದ ಋಣಮುಕ್ತ ಪ್ರಮಾಣಪತ್ರ ಸೇರಿದಂತೆ ಕಂದಾಯ ದಾಖಲೆಗಳಿಗೆ ನಾಗರಿಕರು ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ನೋಂದಣಿ (ಕರ್ನಾಟಕ ತಿದ್ದುಪಡಿ) ವಿಧೇಯಕಕ್ಕೆ ತಿದ್ದುಪಡಿ ತರಲಾಗಿದೆ. ಇಂದಿನ ಡಿಜಿಟಲ್ ಯುಗದಲ್ಲಿ ಸೈಬರ್ ಖದೀಮರು ಏನು ಬೇಕಾದರೂ ಮಾಡಬಲ್ಲರು. ಹೀಗಾಗಿ ಈ ಬಗ್ಗೆ ಎಚ್ಚರಿಕೆ ವಹಿಸಲಾಗುವುದು. ಸರ್ವರ್ ಸಮಸ್ಯೆ ನಿವಾರಣೆ, ಸಾಮರ್ಥ್ಯ ವೃದ್ಧಿ, ಉಪನೋಂದಣಾಧಿಕಾರಿಗಳ ಕಚೇರಿಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು, ಎಂದರು. ಹಕ್ಕುಪತ್ರ ನೋಂದಣಿ ಕಡ್ಡಾಯಗೊಳಿಸಿರುವುದರಿಂದ ನಿವೇಶನಗಳಿಗೆ ಮಾಲೀಕರು ಯಾರೆಂಬುದು ಸ್ಪಷ್ಟವಾಗಲಿದೆ. ಇದರಿಂದ ನಕಲಿ ಹಕ್ಕುಪತ್ರಗಳ ಮೂಲಕ ನಿವೇಶನ ಮಾಲೀಕತ್ವದ ಹಕ್ಕು ಸಾಧಿಸುವವರಿಗೆ ಕಡಿವಾಣ ಬೀಳಲಿದೆ ಎಂದರು.

# ಮುಗಿಯದ ಒಳಮೀಸಲು ಗೊಂದಲ, ಎಡಗೈ-ಬಲಗೈ ಸಂಘರ್ಷ

## ■ ರಾಜ್ಯ ಸರಕಾರಕ್ಕೆ ಸಾಮಾಜಿಕ ನ್ಯಾಯ ಸಂಕಟ, ಸಚಿವ ಸಂಪುಟ ಸಭೆಯೂ ಮುಂದೂಡಿಕೆ

• **ಉದಯವಾಹಿನಿ, ಬೆಂಗಳೂರು**

ದಲಿತರ ಒಳ ಮೀಸಲು ಸಂಬಂಧದಲ್ಲಿ ಗಂಭೀರ ಹೆಜ್ಜೆಯಿರಿಸಿ ಹೊಸದಾಗಿ ಸಮೀಕ್ಷೆ ಕೈಗೊಂಡು ವರದಿ ಪಡೆದುಕೊಂಡ ಬಳಿಕವೂ ರಾಜ್ಯ ಸರಕಾರಕ್ಕೆ ಈ ವಿಚಾರದಲ್ಲಿ ಇಕ್ಕಟ್ಟು ಎದುರಾಗಿದೆ. ಪರಿಶಿಷ್ಟರಲ್ಲಿ ಬಲಗೈ ಸಮುದಾಯ ನ್ಯಾ. ನಾಗಮೋಹನ್ ದಾಸ್ ಆಯೋಗದ ವರದಿ ಅನುಸಾರ ಮುಂದುವರಿಯುವ ಸರಕಾರದ ನಿಲುವಿಗೆ ಆಕ್ಷೇಪವೆತ್ತಿರುವುದು ಸೇರಿ ನಾನಾ ಸವಾಲುಗಳಿವೆ.

ಸ್ಪೃಶ್ಯ ಜಾತಿಗಳಾದ ಲಂಬಾಣಿ, ಭೋವಿ, ಕೊರಮ, ಕೊರಚ ಸಮಾಜಗಳಿಗೆ ನಾಗಮೋಹನ್ ದಾಸ್ ವರದಿಯಲ್ಲಿ ಶೇ. 4ರಷ್ಟು ಮೀಸಲಿಗೆ ಶಿಫಾರಸು ಮಾಡಲಾಗಿದೆ. ಈ ಮೂಲಕ ತಮ್ಮನ್ನು ಕಡೆಗಣಿಸಲಾಗಿದೆ ಎಂದು ಈ ಸಮುದಾಯಗಳು ಸಿಟ್ಟಾಗಿವೆ.

ದಲಿತರಲ್ಲಿ ಎಡಗೈ (ಮಾದಿಗರು) ಸಮುದಾಯ ಮೂರೂವರೆ ದಶಕದಿಂದ ಒಳ ಮೀಸಲಿಗೆ ಹೋರಾಟ ಮಾಡುತ್ತ ಬಂದಿತ್ತು. ಎಡಗೈನವರಿಗೆ ಈ ವರದಿಯಲ್ಲಿ ಶೇ. 6ರಷ್ಟು ಮೀಸಲು ಶಿಫಾರಸು ಮಾಡಲಾಗಿದೆ. ಇದು ತೃಪ್ತಿ ನೀಡದಿದ್ದರೂ ಮಾದಿಗ ಸಮಾಜ ಆದಷ್ಟು ಶೀಘ್ರ ನಾಗಮೋಹನ್ ದಾಸ್ ವರದಿ ಜಾರಿಗೆ ಒತ್ತಾಯಿಸುತ್ತಿದೆ. ಈ ಸಮಾಜದ ಸಂಘಟನೆಯವರು ರಾಜ್ಯಾದ್ಯಂತ ಪ್ರತಿಭಟನೆಯನ್ನೂ ನಡೆಸುತ್ತಿದ್ದಾರೆ.

ಇಂಥ ಬೆಳವಣಿಗೆ ಬೆನ್ನಿಗೇ ಒಳ ಮೀಸಲು ವರದಿ ಕುರಿತ



**ವಿಶೇಷ ಸಂಪುಟ ಸಭೆ ಮುಂದೂಡಿಕೆ**

ವಿಸ್ತೃತ ಚರ್ಚೆಗೆ ಇದೇ ಶನಿವಾರ(ಆಗಸ್ಟ್ 16) ನಿಗದಿಯಾಗಿದ್ದ ವಿಶೇಷ ಸಚಿವ ಸಂಪುಟ ಸಭೆಯನ್ನು ಮುಂದಿನ ಮಂಗಳವಾರಕ್ಕೆ (ಆಗಸ್ಟ್ 19) ಮುಂದೂಡಲಾಗಿದೆ.

ಮತ್ತೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಸಾಹಿತಿ ದೇವನೂರು ಮಹಾದೇವ, ಒಳ ಮೀಸಲು ಕುರಿತ ನ್ಯಾ. ನಾಗಮೋಹನ್ ದಾಸ್ ವರದಿಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಆದರೆ, ವರದಿ ಬಗ್ಗೆ ಬಂದಿರುವ ಆಕ್ಷೇಪಣೆಗಳನ್ನು ತಳ್ಳಿ ಹಾಕುವಂತಿಲ್ಲ ಎಂದೂ ಹೇಳಿರುವುದು ಗಮನಾರ್ಹ.

ಜತೆಗೆ ಪರಿಶಿಷ್ಟ ಜಾತಿಗೆ ಶೇ. 18 ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ. 7.50ರಷ್ಟು ಮೀಸಲು ಹಂಚಿಕೆ ಮಾಡಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗಕ್ಕೆ ಹೆಚ್ಚಿನ ಕಾರ್ಯವ್ಯಾಪ್ತಿ ಹಾಗೂ ಅಧಿಕಾರ ಘೋಷಣೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

**ಪರಿಶಿಷ್ಟ ಪ್ರತಿನಿಧಿಗಳ ಸಭೆ ಅಪೂರ್ಣ**

ಒಳ ಮೀಸಲು ವಿಚಾರಕ್ಕೆ ಒಗ್ಗಟ್ಟು ಕಾಯ್ದುಕೊಳ್ಳುವ ಬಗ್ಗೆ ಪರಿಶಿಷ್ಟ ಜಾತಿಯ ಸಚಿವರುಗಳ ಸಭೆ ಈ ಹಿಂದೆ ನಡೆದಿತ್ತು. ಆಗಿನ್ನೂ ವರದಿ ಬಂದಿರಲಿಲ್ಲ. ಹಾಗಾಗಿ ವರದಿ ಸಲ್ಲಿಕೆ ಬಳಿಕ ಮತ್ತೊಮ್ಮೆ ಚರ್ಚಿಸುವ ನಿರ್ಧಾರಕ್ಕೆ ಬರಲಾಗಿತ್ತು. ಅದರಂತೆ ಬುಧವಾರ ರಾತ್ರಿ ಗೃಹ ಸಚಿವ ಡಾ.ಜಿ. ಪರಮೇಶ್ವರ ನಿವಾಸದಲ್ಲಿ ಸಭೆ ಸೇರಲಾಯಿತು. ಸಚಿವರಾದ ಡಾ.ಎಚ್.ಸಿ. ಮಹದೇವಪ್ಪ, ಕೆ.ಎಚ್. ಮುನಿಯಪ್ಪ, ಶಿವರಾಜ ತಂಗಡಗಿ, ಶಾಸಕರಾದ ಪ್ರಸಾದ್ ಅಬ್ಬಯ್ಯ, ಸುಧಾಮ ದಾಸ್ ಸೇರಿದಂತೆ ದಲಿತ ಸಮುದಾಯದ ಕೆಲವೇ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಯಾವುದೇ ತೀರ್ಮಾನವಿಲ್ಲದೇ ಈ ಸಭೆಯೂ ಮುಕ್ತಾಯಗೊಂಡಿತ್ತು. ಇದರ ನಡುವೆಯೇ ವಿಶೇಷ ಸಂಪುಟ ಸಭೆಯನ್ನು ಮುಂದೂಡುವ ನಿರ್ಧಾರವನ್ನು ಸರಕಾರ ಗುರುವಾರ ಪ್ರಕಟಿಸಿದೆ. ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಜಿಲ್ಲೆಗಳಿಗೆ ತೆರಳಲಿರುವ ಸಚಿವರು ಅದರ ಮರು ದಿನವೇ ಬೆಂಗಳೂರಿಗೆ ವಾಪಸಾಗಬೇಕಾಗುತ್ತದೆ. ವಾರಾಂತ್ಯವೂ ಇದೆ ಎಂಬ ಕಾರಣದಿಂದಲೂ ಈ ಸಭೆಯನ್ನು ಮುಂದಿನ ವಾರಕ್ಕೆ ಮುಂದೂಡಲಾಗಿದೆ. ಅದೇನಿದ್ದರೂ ಈ ವರದಿ ಬಗ್ಗೆ ಪರಿಶಿಷ್ಟರಲ್ಲೇ ಅಭಿಪ್ರಾಯ ಭೇದ ಹೆಚ್ಚುತ್ತಿರುವುದರಿಂದ ಸಂಧಾನ ಪ್ರಕ್ರಿಯೆಗೆ ಸಮಯ ಹೊಂದಿಸಲು ಸರಕಾರ ಸಂಪುಟ ಸಭೆಯನ್ನು ಮುಂದೂಡಿದೆ ಎಂದು ಹೇಳಲಾಗುತ್ತಿದೆ.

**ಸಂಪುಟದಲ್ಲೇ ವಿರೋಧಿಸಿದ್ದರು:** ಕಳೆದ ವಾರ ಆಗಸ್ಟ್ 7ರಂದು ನಡೆದ ಸಚಿ ಸಂಪುಟ ಸಭೆಯಲ್ಲಿ ನಾಗಮೋಹನ್ ದಾಸ್ ವರದಿ ಮಂಡಿಸಲಾಗಿದೆ. ಈ ಬಗ್ಗೆ ಪ್ರಸ್ತಾಪವಾದಾಗ ಬಲಗೈ ಸಮುದಾಯದ ಕೆಲವು ಸಚಿವರು, ವರದಿ ಅನುಷ್ಠಾನಕ್ಕೆ ಆತುರ ಬೇಡ. ಇನ್ನಷ್ಟು ಪರಾಮರ್ಶೆ ಅಗತ್ಯ ಎಂದಿದ್ದರು. ಪ್ರಮುಖವಾಗಿ ಬಲಗೈ ಪಂಗಡಕ್ಕೆ ಸೇರಿದ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರೇ ತಮ್ಮ ಅಭಿಪ್ರಾಯವನ್ನು ಸಂಪುಟದ ಮುಂದಿಟ್ಟಿದ್ದರು ಎಂದು ಹೇಳಲಾಗಿತ್ತು.

**ನೇಮಕಕ್ಕೂ ತಡೆ:** ಒಳ ಮೀಸಲು ವಿಚಾರ ಇತ್ಯರ್ಥವಾಗುವ ವರೆಗೆ ಸರಕಾರದ ಎಲ್ಲಾ ನೇಮಕ ಸ್ಥಗಿತಗೊಳಿಸಲು ತೀರ್ಮಾನಿಸಲಾಗಿದೆ. ಹಾಗಾಗಿ ಈ ವರದಿ ಜಾರಿಯಾಗದ ಹೊರತೂ ನಾನಾ ಇಲಾಖೆಗಳಲ್ಲಿ ನೇಮಕ ಪ್ರಕ್ರಿಯೆ ಸಾಧ್ಯವಾಗುವುದಿಲ್ಲ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,135/Gram24ct ₹9,290/Gram22ct | ಬೆಳ್ಳಿ: ₹116.00/Gram

## ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಲೋಗೋ ಬಿಡುಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆಂಗೇರಿ ಉಪನಗರ

ಶ್ರೀ ಗುರು ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವದ ಅಂಗವಾಗಿ ಸುಜ್ಞಾನೇಂದ್ರ ತೀರ್ಥರ ಆರಾಧನೆಯ ದಿನದಂದು ಕೆಂಗೇರಿ ಉಪನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಗಾನಸಿದ್ಧ ಗಂಗಾ ಕಲ್ಚರಲ್ ಟ್ರಸ್ಟಿನ ಲೋಗೋ ವನ್ನ ಅಂತರಾಷ್ಟ್ರೀಯ ಜನಪದ ಹಾಡುಗಾರ ಜೋಗಿಲ ಸಿದ್ದರಾಜು ಬಿಡುಗಡೆಗೊಳಿಸಿದರು. ಅತ್ಯುತ್ತಮವಾದ ಲೋಗೋ ವಿನ್ಯಾಸವನ್ನ ಜೋಗಿಲಾ ಸಿದ್ದರಾಜು ಪ್ರಶಂಶಿಸಿ ಉತ್ತಮವಾದ ಕಾರ್ಯಗಳು ಆಗುವ ಮೂಲಕ ಸಮಾಜಕ್ಕೆ ಒಳಿತನ್ನುಂಟು ಮಾಡಿ ಎಂದು ಶುಭ ಹಾರೈಸಿದರು. ಗಾನ ಸಿದ್ದಗಂಗಾ ಕಲ್ಚರಲ್ ಟ್ರಸ್ಟಿನ ಅಧ್ಯಕ್ಷೆ ಸಂಗೀತ ವಿದುಶಿ ಶ್ರೀಮತಿ ಗೀತಾ ಭತ್ತದ್ ನೇತೃತ್ವದಲ್ಲಿ ಸಂಗೀತ ಕಾರ್ಯಕ್ರಮ ನಡೆಯಿತು ಅವರು ಸಂಗೀತ ಕಾರ್ಯಕ್ರಮದಲ್ಲಿಯೇ ಲೋಗೋ ಬಿಡುಗಡೆಗೆ ಮುಂದಾಗಿದ್ದರು.

ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಅಧ್ಯಕ್ಷ ಹೆಚ್.ಎಸ್. ಸುಧೀಂದ್ರ ಕುಮಾರ್ ಲೋಗೋ ಬಿಡುಗಡೆ ಮಾಡುವ ಮೂಲಕ ಶ್ರೀ ರಾಯರ ಆಶೀರ್ವಾದ ಇದ್ದು ಉತ್ತಮ ಬೆಳವಣಿಗೆಯಾಗಲಿ ಎಂದು ಆಶೀರ್ವದಿಸಿದರು. ಸ್ಥಳೀಯ ಮುಖಂಡರಾದ ವಿ.ವಿ. ಸತ್ಯನಾರಾಯಣ, ಮಲ್ಲಿಕಾರ್ಜುನ ಮಹಾಮನೆ, ಪ್ರಶಾಂತ್ ರಮ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು

# ಮ್ಯಾನ್‌ಹೋಲ್ ಸ್ವಚ್ಛತೆಗೆ ಬಂತು ರೋಬೋಟಿಕ್ ತಂತ್ರಜ್ಞಾನ

## ಒಳಚರಂಡಿ ಸ್ವಚ್ಛತೆಗೂ ರೋಬೋಟಿಕ್ ತಂತ್ರಜ್ಞಾನ, ದೇಶ ಕೆಲವು ರಾಜ್ಯಗಳಲ್ಲಿ ಈಗಾಗಲೇ ಬಳಕೆ

• ಉದಯವಾಹಿನಿ ಬೆಂಗಳೂರು

ರಾಜಧಾನಿಯಲ್ಲಿ ಮ್ಯಾನ್‌ಹೋಲ್ ಉಕ್ಕಿ ಹರಿಯುವ ಸಂಬಂಧ ಸಲ್ಲಿಕೆಯಾಗುವ ದೂರುಗಳನ್ನು ಶೀಘ್ರ ಬಗೆಹರಿಸಲು ಮತ್ತು ಸ್ವಚ್ಛತೆಯಲ್ಲಿ ಹಸ್ತಚಾಲಿತ ಯಂತ್ರಗಳ ಬಳಕೆ ಕಡಿಮೆ ಮಾಡಲು ಬೆಂಗಳೂರು ಜಲಮಂಡಳಿ, ಒಳಚರಂಡಿ ಸ್ವಚ್ಛತೆಗೆ ಅತ್ಯಾಧುನಿಕ ರೋಬೋಟಿಕ್ ತಂತ್ರಜ್ಞಾನ' ಅಳವಡಿಸಿಕೊಳ್ಳಲು ಮುಂದಾಗಿದೆ.

ವೇಗದ ಬೆಳವಣಿಗೆಗೆ ತೆರೆದುಕೊಂಡಿರುವ ನಗರಗಳಲ್ಲಿ ಒಳಚರಂಡಿ ವ್ಯವಸ್ಥೆಯ ನಿರ್ವಹಣೆ ತ್ರಾಸದಾಯಕವಾಗಿದೆ. ಈ ಹಿನ್ನೆಲೆಯಲ್ಲಿ 2023ರಿಂದ ದೇಶದ ಕೆಲವು ನಗರಗಳು ಒಳಚರಂಡಿ ಸ್ವಚ್ಛತೆಗೆ ರೋಬೋಟಿಕ್ ತಂತ್ರಜ್ಞಾನ ಬಳಕೆ ಮಾಡುತ್ತಿವೆ. ಭಾರತದಲ್ಲಿ ಪ್ರಥಮವಾಗಿ ತಿರುವನಂತಪುರಂನಲ್ಲಿ ಈ ತಂತ್ರಜ್ಞಾನದ ಬಳಕೆಯಾಗಿದೆ. ಚೆನ್ನೈ, ಗುವಾಹಟಿ, ಗುರು ಗ್ರಾಮ..., ಕೊಯಮತ್ತೂರು, ನವ ರಾಯ್ಪುರ, ಹೈದರಾಬಾದ್‌ನಲ್ಲೂ ಅಳವಡಿಸಿಕೊಳ್ಳಲಾಗಿದೆ. ಈಗ ಅದೇ ಹಾದಿಯಲ್ಲಿಬೆಂಗಳೂರು ಜಲಮಂಡಳಿ ಕೂಡ ಹೆಜ್ಜೆಯಿಡಲು ಸಿದ್ಧತೆ ನಡೆಸಿದೆ. 11 ಲಕ್ಷಕ್ಕೂ ಹೆಚ್ಚು ಸಂಪರ್ಕಗಳಿಗೆ ನೀರು ಪೂರೈಕೆ ಮತ್ತು ಸ್ಯಾನಿಟರಿ ಸೇವಾ ಸಂಪರ್ಕ ನೀಡುತ್ತಿರುವ ಜಲಮಂಡಳಿ, 11,894 ಕಿ.ಮೀ.ಉದ್ದದ ಒಳಚರಂಡಿ ಜಾಲ ಮತ್ತು 3.19 ಲಕ್ಷ ಮ್ಯಾನ್‌ಹೋಲ್‌ಗಳನ್ನು ಒಳಗೊಂಡಿದೆ. ಇದರ ಸ್ವಚ್ಛತೆ ಮತ್ತು ನಿರ್ವಹಣೆ ಸವಾಲಿನ ಕೆಲಸವಾಗಿದೆ. ನಿರಂತರ ಬೆಳವಣಿಗೆ ಮತ್ತು ಅಭಿವೃದ್ಧಿಗೆ ತೆರೆದುಕೊಂಡಿರುವ ನಗರದಲ್ಲಿ ಹೊಸ ಬಡಾವಣೆಗಳು ಮತ್ತು ಹೊಸ ಸಂಪರ್ಕಗಳು


ಉದಯವಾಹಿನಿ ಚಿತ್ರ

ಹೆಚ್ಚುತ್ತಿವೆ. ಅಲ್ಲದೆ, ಅಕ್ರಮ ಯುಜಿ ಸಂಪರ್ಕ, ಮಳೆ ನೀರನ್ನು ಒಳಚರಂಡಿಗೆ ಹರಿಬಿಡುವುದು ಮತ್ತು ಹೆಚ್ಚು ವಾಹನಗಳ ಸಂಚಾರ ಮ್ಯಾನ್‌ಹೋಲ್‌ಗಳ ಮೇಲಿನ ಒತ್ತಡ ಹೆಚ್ಚಿಸುತ್ತಿವೆ. ಪರಿಣಾಮ, ಮ್ಯಾನ್‌ಹೋಲ್ ಉಕ್ಕಿ ಹರಿಯುವ ಮೂಲಕ ನಗರದಲ್ಲಿ ವಾತಾವರಣ ಕಲುಷಿತಗೊಳಿಸುವ ಮೂಲಕ ಅವಾಂತರ ಸೃಷ್ಟಿಸುತ್ತವೆ.

ಒಳಚರಂಡಿ ಸ್ವಚ್ಛತೆಗೆ ಜೆಟ್ಟಿಂಗ್, ಸಕ್ಕಿಂಗ್, ಹೂಳೆತ್ತುವ ಯಂತ್ರಗಳಿದ್ದರೂ, ಅವುಗಳಿಂದ ಶೀಘ್ರ ಕೆಲಸ ಅಸಾಧ್ಯ ಮತ್ತು ಕಿರಿದಾದ ಜಾಗಗಳಲ್ಲಿಕೆಲಸ ಮಾಡುವುದು ಕಷ್ಟಕರ. ಇವುಗಳಿಂದ ವಾಹನ ಸಂಚಾರಕ್ಕೆ ಅಡಚಣೆಯೂ ಉಂಟಾಗುತ್ತದೆ. ಹೀಗಾಗಿ, ಮಂಡಳಿ ರೋಬೋಟಿಕ್ ತಂತ್ರಜ್ಞಾನದ ಮೊರೆ ಹೋಗಲು ನಿರ್ಧರಿಸಿದೆ.

**ಕಂಪ್ಯೂಟರ್ ಮೂಲಕ ಮೇಲ್ವಿಚಾರಣೆ:** ಮ್ಯಾನ್ ಹೋಲ್ ಒಳಭಾಗದ ಕಡಿಮೆ ಬೆಳಕಿನಲ್ಲಿಯೂ, ಅಲ್ಲಿನ ಸ್ಪಷ್ಟ ಚಿತ್ರಣವನ್ನು ರೋಬೋಟ್‌ಗಳ ಕ್ಯಾಮೆರಾಗಳು ನಿರ್ವಾಹಕರಿಗೆ ಒದಗಿಸಲಿವೆ. ಇದಕ್ಕೆ ಎಐ ತಂತ್ರಜ್ಞಾನದ ನೆಧಿರಧಿವು ಬಳಕೆ ಮಾಡಲಾಗಿರುತ್ತದೆ. ಇದರಿಂದ ಹಸ್ತಚಾಲಿತ ಯಂತ್ರಗಳು ಸಾಗಲು ಅಸಾಧ್ಯವೆನಿಸುವ ಜಾಗಗಳಲ್ಲಿಯೂ ವೇಗವಾಗಿ ಮತ್ತು ಸಂಪೂರ್ಣ ಸ್ವಚ್ಛತೆ ಸಾಧ್ಯವಾಗಲಿದೆ. ಮ್ಯಾನ್‌ಹೋಲ್ ಒಳಗಿನ ಸಮಸ್ಯೆಗಳನ್ನು ಕಲೆ ಹಾಕಲಿದೆ. ಇದಕ್ಕೆ ಆರಂಭಿಕ ಹೂಡಿಕೆ ಹೆಚ್ಚಾದರೂ ಮಾನವ ಸಂಪನ್ಮೂಲ ಮತ್ತು ಸಂಭಾವ್ಯ ಅಪಾಯಗಳನ್ನು ತಪ್ಪಿಸಬಹುದು. ದೀರ್ಘಾವಧಿಯ ವೆಚ್ಚಗಳಿಗೆ ಕಡಿವಾಣ ಹಾಕಬಹುದು. ಅಧಿಲ್ಲಧಿದೆ, ಹೇಗೆ ಕೆಲಸ ಮಾಡಿದೆ ಎಂಬುದನ್ನು ಕಂಪ್ಯೂಟರ್‌ನಲ್ಲಿಮೇಲ್ವಿಚಾರಣೆ ನಡೆಸಬಹುದು.

**ಡಿಐ ಪ್ರೆಶರ್ ಮ್ಯಾನ್‌ಹೋಲ್ ಮುಚ್ಚಳ ಬಳಕೆ:** ರೋಬೋಟಿಕ್ ತಂತ್ರಜ್ಞಾನದ ಜತೆಗೆ ಮ್ಯಾನ್‌ಹೋಲ್‌ಗಳಲ್ಲಿ ಮಲಿನ ನೀರು ಉಕ್ಕಿ ಹರಿಯುವುದನ್ನು ಪರಿಣಾಮಕಾರಿಯಾಗಿ ತಡೆಯಲು ಡಕ್ಟೈಲ್ ಐರನ್ (ಡಿಐ) ಪ್ರೆಶರ್ ಮ್ಯಾನ್‌ಹೋಲ್ ಮುಚ್ಚಳಗಳನ್ನು ಅಳವಡಿಸಲು ಜಧಿಲಧಿಮಂಡಳಿ ನಿರ್ಧರಿಸಿದೆ.

ಕಬ್ಬಿಣದ ಈ ಮುಚ್ಚಳಗಳು ಸಂಚರಿಸುವ ವಾಹನಗಳ ಭಾರ ತಡೆಯಲಿವೆ. ಅಲ್ಲದೆ, ಪಾದಚಾರಿಗಳ ಸುರಕ್ಷತೆಗೂ ಅನುಕೂಲಕರವಾಗಿವೆ. ಸದ್ಯ ಮೊದಲ ಹಂತದಲ್ಲಿ ನಗರದ ಇಳಿಜಾರು ಪ್ರದೇಶಗಳಲ್ಲಿರುವ ಸುಮಾರು 1,500 ಮ್ಯಾನ್ ಹೋಲ್‌ಗಳಿಗೆ ಮ್ಯಾನ್‌ಹೋಲ್ ಮುಚ್ಚಳಗಳನ್ನು ಅಳವಡಿಸಲು ಮಂಡಳಿ ನಿರ್ಧರಿಸಿದೆ. ಇವು ಹೆಚ್ಚು ಕಾಲ ಬಾಳಿಕೆ ಬರುವುದರಿಂದ ದೀರ್ಘಾವಧಿಯ ವೆಚ್ಚ ಕೂಡ ಕಡಿಮೆ ಮಾಡಬಹುದು. ಅಲ್ಲದೆ, ಮರುಬಳಕೆ ಕೂಡ ಮಾಡಬಹುದು.

### ಶೀಘ್ರವೇ ಪ್ರಾಯೋಗಿಕ ಸೇವೆ

**ಏಕಾಏಕಿ ಒಂದೇ ಬಾರಿ ದುಬಾರಿ ವೆಚ್ಚದ ರೋಬೋಟಿಕ್ ಉಪಕರಣಗಳನ್ನು ಖರೀದಿಸುವ ಬದಲು, ಮೊದಲು ಕಂಪನಿಗಳಿಂದ ಸೇವೆ ಪಡೆಯಲು ತಿರ್ಮಾನಿಸಲಾಗಿದೆ. ಟೆಂಡರ್ ಮೂಲಕ ಸೇವೆ ಪಡೆದು ನಂತರ ರೋಬೋಟಿಕ್ ಉಪಕರಣಗಳ ಖರೀದಿ ಬಗ್ಗೆ ಮಂಡಳಿ ಚಿಂತಿಸಲಿದೆ. ಈ ಮೂಲಕ ಒಳಚರಂಡಿ ಉಕ್ಕಿ ಹರಿಯುವ ದೂರುಗಳಿಧಿಗೆ 12 ಗಂಟೆಗಳಲ್ಲಿಪರಿಹಾರ ಒದಗಿಸಲು ನಿರ್ಧರಿಸಿದೆ. 15 ದಿನಗಳಲ್ಲಿ 5 ಲಕ್ಷ ರೂ.ವೆಚ್ಚದಲ್ಲಿಪ್ರಾಯೋಗಿಕ ಸೇವೆಗೆ ಟೆಂಡರ್ ಆಹ್ವಾನಿಸಲಿದೆ.**

- ಒಟ್ಟು ಒಳಚರಂಡಿ ವ್ಯವಸ್ಥೆಯ ಉದ್ದ- 11,894 ಕಿ.ಮೀ.
- ಸ್ಯಾನಿಟರಿ ಸೇವಾ ಸಂಪರ್ಕ- 11.50 ಲಕ್ಷ
- ಮ್ಯಾನ್‌ಹೋಲ್ ಸಂಖ್ಯೆ- 3,19,214
- ಜೆಟ್ಟಿಂಗ್-ಸಕ್ಕಿಂಗ್ ಮಿಷನ್‌ಗಳ ಸಂಖ್ಯೆ-176
- ಹೂಳೆತ್ತುವ ಯಂತ್ರಗಳು- 40

## ಬಿಎಂಟಿಸಿ ಬಸ್ ಚಕ್ರ ಹರಿದು ಸ್ಕೂಟರ್ ಸವಾರ ಸ್ಥಳದಲ್ಲೇ ಸಾವು

• ಉದಯವಾಹಿನಿ ಬೆಂಗಳೂರು

ನಗರದ ಹೊಸೂರು ಮುಖ್ಯರಸ್ತೆಯ ರೂಪೇನ ಅಗ್ರಹಾರ ಬಸ್ ನಿಲ್ದಾಣ ಬಳಿ ಬಿಎಂಟಿಸಿ ಬಸ್, ಸ್ಕೂಟರ್ ನಡುವೆ ಮಧ್ಯಾಹ್ನ ಸಂಭವಿಸಿದ ಅಪಘಾತದಲ್ಲಿ ಸ್ಕೂಟರ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ.ಸೈಯದ್ ಜಾಫರ್ ಹುಸೇನ್ (33) ಮೃತಪಟ್ಟ ಸವಾರ. ಹೊಸೂರು ಮುಖ್ಯರಸ್ತೆಯ ಎಲೆಕ್ಟ್ರಾನಿಕ್ ಸಿಟಿ ಕಡೆಯಿಂದ ಸಿಲ್ಕ್ ಬೋರ್ಡ್ ಮೇಲ್ವೇತುವೆ ಜಂಕ್ಷನ್ ಕಡೆಗೆ ವೇಗವಾಗಿ ಸಂಚರಿಸುತ್ತಿದ್ದ ಬಿಎಂಟಿಸಿ ಬಸ್‌ವೊಂದು ಸ್ಕೂಟರ್‌ಗೆ ಡಿಕ್ಕಿಯಾದ ಪರಿಣಾಮ ಸವಾರ ರಸ್ತೆಯ ಮೇಲೆ ಬಿದ್ದಿದ್ದರು. ಅವರ ಮೇಲೆ ಬಿಎಂಟಿಸಿ ಬಸ್‌ನ ಚಕ್ರಗಳು ಹರಿದ ಪರಿಣಾಮ ಸೈಯದ್ ಜಾಫರ್ ಹುಸೇನ್ ಅವರು ಸ್ಥಳದಲ್ಲಿಯೇ ಮೃತಪಟ್ಟರು ಎಂದು ಸಂಚಾರ ಪೊಲೀಸರು ಹೇಳಿದರು.

ಬಿಎಂಟಿಸಿ ಬಸ್ ಚಾಲಕ ಆರ್. ಜಯರಾಮಯ್ಯ ಅವರ ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣ ಎಂಬುದು ಕಂಡುಬಂದಿದೆ. ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದರು. ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಮಡಿವಾಳ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶ್ರೀ ಕೃಷ್ಣ ಜನ್ಮಾಷ್ಟಮಿ: ಆ.16ರಂದು ನಗರದಾದ್ಯಂತ ಮಾಂಸ ಮಾರಾಟ ನಿಷೇಧ

• ಉದಯವಾಹಿನಿ ಬೆಂಗಳೂರು

ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಆ.16ರಂದು ಕಸಾಯಿಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಬಿಬಿಎಂಪಿ ಆದೇಶ ಹೊರಡಿಸಿದೆ. ಈ ಸಂಬಂಧ ಬಿಬಿಎಂಪಿ ಪಶು ಪಾಲನೆ ವಿಭಾಗದ ಜಂಟಿ ಆಯುಕ್ತರು ಆದೇಶ ಹೊರಡಿಸಿದ್ದಾರೆ. ಆದೇಶದಲ್ಲಿ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಆ.16ರಂದು ಕಸಾಯಿಖಾನೆಯಲ್ಲಿ ಪ್ರಾಣಿವಧೆ ಹಾಗೂ ಮಳಿಗೆಗಳಲ್ಲಿ ಮಾಂಸ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ. ಕೃಷ್ಣ ಜನ್ಮಾಷ್ಟಮಿ ದಿನದಂದು ಮಾಂಸ ಮಾರಾಟ ನಿಷೇಧಿಸಿ ಆದೇಶ ಹೊರಡಿಸಲಾಗಿದ್ದು, ಆ ದಿನ ಯಾರೂ ಯಾವುದೇ ರೀತಿಯ ಮಾಂಸ ಹಾಗೂ ಹಸಿ ಮೀನು ಮಾರಾಟ ಮಾಡಬಾರದು ಎಂದು ಹೇಳಿದ್ದಾರೆ. ನಗರದ ಯಾವುದೇ ಮಾಂಸ ಮಾರಾಟದ ಅಂಗಡಿಗಳು, ಕೋಳಿ ಅಂಗಡಿಗಳು, ಮೀನುಮಾರಾಟ ಮಾಡಬಾರದು. ಆದೇಶ ಮೀರಿ ಮಾರಾಟ ಮಾಡಿದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದೆಂದು ಎಚ್ಚರಿಸಿದ್ದಾರೆ.

## ಬೆಂಗಳೂರಿನಲ್ಲಿ ವಾರಾಂತ್ಯದವರೆಗೂ ಭಾರೀ ಮಳೆ: ಎಲ್ಲೋ ಅಲರ್ಟ್ ಘೋಷಣೆ

• ಉದಯವಾಹಿನಿ ಬೆಂಗಳೂರು

ದಿನವಿಡೀ ಸುರಿದ ಮಳೆಯಿಂದಾಗಿ ನಗರದಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿತ್ತು. ಇಂದೂ ಕೂಡ ಮೋಡ ಕವಿದ ವಾತಾವರಣ ಮುಂದುವರೆದಿದ್ದು, ವಾರಾಂತ್ಯದವರೆಗೂ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ನಗರದಲ್ಲಿ ಸುರಿದ ಮಳೆಗೆ ಹಲವಾರು ಪ್ರದೇಶಗಳು ಜಲಾವೃತಗೊಂಡಿದ್ದವು. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿತ್ತು.

ಮಳೆ, ನೀರು ತುಂಬಿದ್ದ ಪರಿಣಾಮ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚಾರ ನಿಧಾನವಾಗಿತ್ತು. ನೀರಿನಿಂದ ತುಂಬಿದ ಅಂಡರ್‌ಪಾಸ್‌ಗಳಲ್ಲಿ ಸಂಚರಿಸಲು ಸವಾರರು ಹೆಣಗಾಡುವಂತಾಗಿತ್ತು. ಪಾದಚಾರಿಗಳೂ ಕೂಡ ಓಡಾಡಲು ಸಮಸ್ಯೆಗಳನ್ನು ಎದುರಿಸಿದರು. ಮುಂದಿನ 36 ಗಂಟೆಗಳ ಕಾಲ ಭಾರೀ ಮಳೆ ಮುಂದುವರಿಯುವ ಸಾಧ್ಯತೆಯಿದ್ದು, ಇದು ವಾರಾಂತ್ಯದವರೆಗೆ ಮುಂದುವರೆಯಲಿದೆ ಎಂದು ಭಾರತ ಹವಾಮಾನ ಇಲಾಖೆ (ಐಎಂಡಿ) ಹೇಳಿದ್ದು, ಎಲ್ಲೋ ಅಲರ್ಟ್ ಘೋಷಿಸಿದೆ. ಬಂಗಾಳಕೊಲ್ಲಿಯ ಪಶ್ಚಿಮ-ಮಧ್ಯ, ಅದಕ್ಕೆ ಹೊಂದಿಕೊಂಡಿರುವ ವಾಯುವ್ಯ ಭಾಗದಲ್ಲಿ ವಾಯುಭಾರ ಕುಸಿತ ಅಥವಾ ಕಡಿಮೆ ತೀವ್ರತೆ ಎದುರಾಗಿದೆ. ಇದರ ಪರಿಣಾಮವಾಗಿ ದಕ್ಷಿಣ ಭಾರತದ ವಿವಿಧ ರಾಜ್ಯಗಳಲ್ಲಿ ಧಾರಾಕಾರ ಮಳೆ ಆಗುತ್ತಿದ್ದು. ಬೆಂಗಳೂರಿನಲ್ಲಿ ಮುಂದಿನ ಮೂರು ದಿನಗಳ ಅವಧಿಗೆ ಮಳೆ ಆರ್ಭಟ ಇರಲಿದೆ ಎಂದು ತಿಳಿಸಿದೆ. ಬೆಂಗಳೂರಿನಲ್ಲಿ ಗುರುವಾರ ಮತ್ತು ಶುಕ್ರವಾರ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದ್ದು, ಗಾಳಿಯ ವೇಗವು ಪ್ರತಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಇರಲಿದೆ. ಕನಿಷ್ಠ ತಾಪಮಾನವು 28 ಡಿಗ್ರಿ ಸೆಲ್ಸಿಯಸ್ ಹಾಗೂ ಗರಿಷ್ಠ ತಾಪಮಾನವು 20 ಡಿಗ್ರಿ ಸೆಲ್ಸಿಯಸ್ ಇರಲಿದೆ ಎಂದು ಮಾಹಿತಿ ನೀಡಿದೆ.

## ಶೀಘ್ರದಲ್ಲೇ ಜಿಲ್ಲಾ-ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ: ಪ್ರಿಯಾಂಕ್ ಖರ್ಗೆ

ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರದಲ್ಲೇ ಚುನಾವಣೆ ನಡೆಯಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ವಿಧಾನಪರಿಷತ್‌ನಲ್ಲಿ ಗಮನ ಸೆಳೆಯುವ ಸೂಚನೆಯಡಿ ಕಾಂಗ್ರೆಸ್‌ನ ಮಂಜುನಾಥ ಭಂಡಾರಿ ಹಾಗೂ ಬಿಜೆಪಿಯ ಡಿ.ಎಸ್. ಅರುಣ್ ಅವರ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರ ಚುನಾವಣೆ ನಡೆಸುವ ವಿಷಯದ ಬಗ್ಗೆ ಅವರು ಉತ್ತರ ನೀಡಿದರು.

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ಶಿವಮೊಗ್ಗ ಹಾಗೂ ಕೊಡಗು ಸೇರಿದಂತೆ ರಾಜ್ಯದ ಎಲ್ಲಾ ಕ್ಷೇತ್ರಗಳ ಸೀಮಾ ಗಡಿ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್ ಸದಸ್ಯರ ಸಂಖ್ಯೆ ನಿಗದಿ ಪಡಿಸುವ ಸಂಬಂಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮಕ್ಕೆ ತಿದ್ದುಪಡಿ ತರಲಾಗಿದೆ. ಜೊತೆಗೆ ಕ್ಷೇತ್ರಗಳ ಸೀಮಾ ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿದೆ ಎಂದರು.

## ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣಗಳು ನೀಡಿ



ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆ.ಆರ್.ಪುರ

ಶಿಕ್ಷಕರು ಹೊಸಹೊಸ ಬೋದನಾ ಕೌಶಲ್ಯಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಸಾಧ್ಯ ಎಂದು ಬೆಂ.ಉತ್ತರ ವಿಶ್ವವಿದ್ಯಾಲಯದ ಮೌಲ್ಯಮಾಪನ ಸಚಿವರಾದ ಡಾ. ಎನ್. ಲೋಕನಾಥ್ ತಿಳಿಸಿದರು.

ಮಹದೇವಪುರ ಕ್ಷೇತ್ರದ ಮಾರತ್ತಹಳ್ಳಿ ಅಶ್ವಥ್ ನಗರದ ಹಿಂದೂಸ್ತಾನ್ ಬಿಸಿನೆಸ್ ಸ್ಕೂಲ್‌ನಲ್ಲಿ ಆಯೋಜಿಸಿದ ಒಂದು ದಿನದ ಬಿಬಿಎ ಮೂರನೇ ಸೆಮಿಸ್ಟರ್ ಎಸ್ ಇಪಿ ಪಠ್ಯಕ್ರಮ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಸಮಾಜ ಮತ್ತು ತಂತ್ರಜ್ಞಾನವನ್ನು ಅರ್ಥಮಾಡಿಕೊಳ್ಳುವಂತಹ ಶಿಕ್ಷಣ ಮೌಲ್ಯಗಳನ್ನು ಶಿಕ್ಷಕರು ಕಲಿಸುವ ಮೂಲಕ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರಿಂದ ದೇಶದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು. ಸಂಸ್ಥೆ ಸಂಸ್ಥಾಪಕರಾದ ಡಾ. ಕೆ.ಸಿ ಸಾಮ್ಯುಲ್ ರವರು ಮಾತನಾಡಿ, 1986 ರಲ್ಲಿ ಕರ್ನಾಟಕದಲ್ಲಿ ಮೊಟ್ಟಮೊದಲ ಬಾರಿಗೆ ಬಿಬಿಎ ಏವಿಯೇಷನ್ ಎಂಬ ಕೋರ್ಸ್‌ನ್ನು ಸ್ಥಾಪಿಸಿ ಹಲವಾರು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಸಾಧನೆ ಮಾಡಲು ನಮ್ಮ ಸಂಸ್ಥೆ ಮೊದಲ ಬುನಾದಿಯಾಗಿದೆ ಎಂದು ನುಡಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಮಿತ ಕೆ ಕಾರ್ಯಾಗಾರವು ಉತ್ತಮ ಬೋಧನಾ ನವೀನತೆಗಳು ಹಾಗೂ ಕಲಿಕೆ ಫಲಿತಾಂಶವನ್ನು ಹೆಚ್ಚಿಸುವ ಆಲೋಚನೆಗಳನ್ನು ಹಂಚಿಕೊಳ್ಳಲು ಉದ್ದೇಶಿಸಲಾಗಿದೆ ಎಂದರು.

ಇದೇ ವೇಳೆ ನಗರದ ವಿವಿಧ ಕಾಲೇಜಿನ ಉಪನ್ಯಾಸಕರು ಸಹ ಭಾಗವಹಿಸಿ ಕಾರ್ಯಾಗಾರದ ಪ್ರಯೋಜನ ಪಡೆದುಕೊಂಡರು. ಅಥಿತಿಗಳಾದ ವಾಣಿಜ್ಯ ವಿಭಾದ ಡೀನ್ ಡಾ.ಎಸ್ ಮುರಳಿಧರ್, ಬಿವಿಎ ಬಿಓಇ ಅಧ್ಯಕ್ಷೆ ಡಾ. ಕೆ.ಎಸ್ ಶೈಲಜಾ ಸೇರಿದಂತೆ ಉಪನ್ಯಾಸಕ ವೃಂದದವರು ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಕಬ್ಬನ್ ರಸ್ತೆ ಸುತ್ತಮುತ್ತ ವಾಹನ ಸಂಚಾರ ನಿರ್ಬಂಧ

• ಉದಯವಾಹಿನಿ ಬೆಂಗಳೂರು

ಕಬ್ಬನ್ ರಸ್ತೆಯಲ್ಲಿರುವ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಕವಾಯತು ಮೈದಾನದಲ್ಲಿ (ಶುಕ್ರವಾರ) 79ನೇ ಸ್ವಾತಂತ್ರ್ಯ ದಿನಾಚರಣೆ ನಡೆಯಲಿದ್ದು ಬೆಂಗಳೂರು ನಗರ ಜಿಲ್ಲಾಡಳಿತ, ಬಿಬಿಎಂಪಿ, ನಗರ ಪೊಲೀಸ್ ಇಲಾಖೆಯಿಂದ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ.

ಆ.15ರ ಬೆಳಗ್ಗೆ 8ರಿಂದ 11 ಗಂಟೆವರೆಗೆ ನಗರದ ಕಬ್ಬನ್ ರಸ್ತೆಯ ಬಿ.ಆರ್.ವಿ ಜಂಕ್ಷನ್‌ನಿಂದ ಕಾಮರಾಜ ರಸ್ತೆ ಜಂಕ್ಷನ್‌ವರೆಗೆ ವಾಹನಗಳ ಸಂಚಾರ ನಿರ್ಬಂಧಿಸಲಾಗಿದೆ. ಈ ಮಾರ್ಗಗಳಲ್ಲಿ ಸಂಚರಿಸುವ ವಾಹನಗಳಿಗೆ ಪರ್ಯಾಯ ಮಾರ್ಗ ಕಲ್ಪಿಸಲಾಗಿದೆ.

**ಪರ್ಯಾಯ ಮಾರ್ಗ ಯಾವುದು:** ಇನ್‌ಫೆಂಟ್ರಿ ರಸ್ತೆಯಲ್ಲಿ ಮಣಿಪಾಲ್ ಸೆಂಟರ್ ಕಡೆಗೆ ಸಂಚರಿಸುವ ವಾಹನಗಳು ಸಫೀನಾ ಪ್ಲಾಜಾ, ಮೈನ್ ಗಾರ್ಡ್ ರಸ್ತೆ, ಆಲೀಸ್ ವೃತ್ತ-ಡಿಸ್ಪೆನ್ಸರಿ ರಸ್ತೆ, ಡಿಕನ್ಸನ್ ಜಂಕ್ಷನ್‌ನಿಂದ ಕಬ್ಬನ್ ರಸ್ತೆ ಮಾರ್ಗದ ಮೂಲಕ ಸಾಗಬಹುದು. ಮಣಿಪಾಲ್ ಸೆಂಟರ್‌ನಿಂದ ಬಿ.ಆರ್.ವಿ. ಜಂಕ್ಷನ್ ಕಡೆಗೆ ಹೋಗುವ ವಾಹನಗಳು,


ಉದಯವಾಹಿನಿ ಚಿತ್ರ

**79ನೇ ಸ್ವಾತಂತ್ರ್ಯ ದಿನಾಚರಣೆ**

ವೆಬ್ಸ್ ಜಂಕ್ಷನ್, ಎಂಜಿ ರಸ್ತೆ, ಮೆಯೋ ಹಾಲ್, ಕಾವೇರಿ ಎಂಪೋರಿಯಂನಿಂದ ಅನಿಲ್ ಕುಂಬ್ಳೆ ವೃತ್ತದಿಂದ ಮುಂದೆ ಸಾಗಬಹುದು. ಅನಿಲ್ ಕುಂಬ್ಳೆ ವೃತ್ತದಿಂದ ಕಬ್ಬನ್ ರಸ್ತೆ ಕಡೆಗೆ ಬರುವ ವಾಹನಗಳು ಸೆಂಟ್ರಲ್ ಸ್ಟ್ರೀಟ್, ಇನ್‌ಫೆಂಟ್ರಿ ರಸ್ತೆ, ಸಫೀನಾ ಪ್ಲಾಜಾ, ಮೈನ್‌ಗಾರ್ಡ್ ರಸ್ತೆಯಿಂದ ಡಿಕನ್ಸನ್ ರಸ್ತೆ ಜಂಕ್ಷನ್ ಮೂಲಕ ಕಬ್ಬನ್ ರಸ್ತೆಯಿಂದ ಮಣಿಪಾಲ್ ಸೆಂಟರ್ ಕಡೆಗೆ ಸಾಗಬಹುದು.

### ಮೈದಾನದ ಸುತ್ತ ಬಿಗಿ ಬಂದೋಬಸ್ತ್

**ಆ.15ರ ಅಂದು ಬೆಳಿಗ್ಗೆ 9ಕ್ಕೆ ಸಿಎಂ ಅವರು ಧ್ವಜಾ ರೋಹಣ ನೆರವೇರಿಸಲಿದ್ದು, ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಡೆಯುವ ವಿಶೇಷ ಕವಾಯತು ವೀಕ್ಷಣೆ ಮಾಡಲಿದ್ದಾರೆ. ಇದೇ ವೇಳೆ ಸಾಂಸ್ಕೃತಿಕ ಕಾರ್ಯಕ್ರಮಗಳೂ ಮೆರುಗು ನೀಡಲಿವೆ. ಮೈದಾನದಲ್ಲಿ ಸಿದ್ಧತೆ ಪರಿಶೀಲಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಿ.ಜಗದೀಶ್, ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ. ಕಾನೂನು ಸುವ್ಯವಸ್ಥೆ, ಸಂಚಾರ ನಿರ್ವಹಣೆಗೆ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಮೈದಾನದ ಸುತ್ತಮುತ್ತ ನಿಗಾವಹಿಸಲು ಸಿಸಿಟಿವಿ ಕ್ಯಾಮೆರಾ, ಬ್ಯಾಗೇಜ್ ಸ್ಕ್ಯಾನರ್ ಅಳವಡಿಸಲಾಗಿದೆ ಎಂದು ಹೇಳಿದ್ದಾರೆ.**

## ಹೆಬ್ಬಾಳ ಫ್ಲೈ ಓವರ್ ವಿಸ್ತರಣೆ ಕಾಮಗಾರಿ ಪೂರ್ಣ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸುಮಾರು ಎರಡು ವರ್ಷಗಳಿಂದ ನಡೆಸುತ್ತಿದ್ದ ಹೆಬ್ಬಾಳ ಫ್ಲೈ ಓವರ್ (ಕೆ.ಆರ್ ಪುರ ರಸ್ತೆ ಮಾರ್ಗದಿಂದ ಮೇಖ್ರಿ ವೃತ್ತದ ಕಡೆಗೆ) ವಿಸ್ತರಣೆ ಕಾಮಗಾರಿ ಪೂರ್ಣಗೊಂಡಿದ್ದು, ಉದ್ಘಾಟನೆಗೆ ಸಜ್ಜಾಗಿದೆ.

ಸೀಮಿತ ವಾಹನಗಳ ಪ್ರಾಯೋಗಿಕ ಸಂಚಾರವೂ ಆರಂಭವಾಗಿದೆ. ಬರೋಬ್ಬರಿ 700 ಮೀಟರ್ ಉದ್ದದ ಈ ಮೇಲು ರಸ್ತೆ ವಿಸ್ತರಣೆ ಕಾಮಗಾರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸುಮಾರು 80 ಕೋಟಿ ರೂ. ವೆಚ್ಚ ಮಾಡಿದೆ. 2023ರಲ್ಲಿ ಅಡಿಗಲ್ಲು ಹಾಕಿ ಕಾಮಗಾರಿ ಆರಂಭಿಸಲಾಗಿತ್ತು. ಇದೀಗ ಕಾಮಗಾರಿ ಪೂರ್ಣಗೊಂಡಿದೆ. ವಿಮಾನ ನಿಲ್ದಾಣದ ಕಡೆಯಿಂದ ಹೆಬ್ಬಾಳ ಮೇಲ್ಸೇತುವೆ ಮಾರ್ಗವಾಗಿ ಬ್ಯಾಪ್ಟಿಸ್ಟ್ ಆಸ್ಪತ್ರೆ ಕಡೆಗೆ ಬರುವ ಮಾರ್ಗದಲ್ಲಿ ಎರಡು ಪಥದ ರಸ್ತೆಯಿದ್ದು, ಇದನ್ನು ನಾಲ್ಕು ಪಥದ ರಸ್ತೆಯನ್ನಾಗಿ

**ಹೆಬ್ಬಾಳ ಫ್ಲೈ ಓವರ್ ಉದ್ಘಾಟನೆ**


ಉದಯವಾಹಿನಿ ಚಿತ್ರ

ವಿಸ್ತರಿಸಲಾಗಿದೆ. ಇದರಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಕಡೆಯಿಂದ ಮೇಖ್ರಿ ವೃತ್ತದ ಕಡೆಗೆ ಪ್ರಯಾಣಿಸುವವರಿಗೆ ಅನುಕೂಲವಾಗಲಿದೆ.

ಬ್ಯಾಪ್ಟಿಸ್ಟ್ ಆಸ್ಪತ್ರೆ ಕಡೆಯಿಂದ ರಾಂಪ್ ಕಾಮಗಾರಿಯನ್ನು ಪೂರ್ಣಗೊಳಿಸಿ ಕೆ.ಆರ್.ಪುರ ಕಡೆಯಿಂದ ಮೇಖ್ರಿ ವೃತ್ತದ ಕಡೆಗೆ ಹೋಗುವ ವಾಹನಗಳಿಗೆ ಅನುಕೂಲ ಮಾಡಿಕೊಡಲು ಈ ಕಾಮಗಾರಿ ಕೈಗೊಳ್ಳಲಾಗಿದೆ. ವಿಮಾನ ನಿಲ್ದಾಣ ಕಡೆಯಿಂದ ಮೇಖ್ರಿ ವೃತ್ತದ ಕಡೆಗೆ ಬರುವುದಕ್ಕೆ ದ್ವಿಪಥ ರಸ್ತೆ ಮಾತ್ರ ಇದೆ. ಕೆ.ಆರ್.ಪುರ ಕಡೆಯಿಂದ ಬರುವ ರಸ್ತೆ ಇದನ್ನು ಸೇರಿಕೊಳ್ಳುತ್ತದೆ. ವಿಮಾನ ನಿಲ್ದಾಣ ಕಡೆಯಿಂದ ನಗರದ ಕಡೆಗೆ ಪ್ರಯಾಣಿಸುವ ವಾಹನಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತದೆ. ಈ ಸಂಚಾರ ದಟ್ಟಣೆ ನಿವಾರಿಸಲು ರಸ್ತೆಯನ್ನು ವಿಸ್ತರಿಸಲಾಗುತ್ತಿದೆ.

ಹೆಬ್ಬಾಳ ಫ್ಲೈಓವರ್ ಬಳ್ಳಾರಿ ರಸ್ತೆ, ವಿಮಾನ ನಿಲ್ದಾಣ ಮತ್ತು ಹೊರ ಜಿಲ್ಲೆಮತ್ತು ಹೊರ ರಾಜ್ಯಗಳಿಗೆ ಸಂಪರ್ಕ ಕಲ್ಪಿಸುತ್ತದೆ. ಹೀಗಾಗಿ, ಹೆಚ್ಚು ಸಂಚಾರ ದಟ್ಟಣೆ ಉಂಟಾಗುತ್ತದೆ. ರಸ್ತೆಯು ಸಂಚಾರಕ್ಕೆ ಮುಕ್ತಗೊಂಡ ನಂತರ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಯಾಗಲಿದೆ.

### ಆ.15ರ ಸ್ವಾತಂತ್ರ್ಯೋತ್ಸವಕ್ಕೆ ಉದ್ಘಾಟನೆ

**ಹೆಬ್ಬಾಳ ಫ್ಲೈ ಓವರ್ ಕಾಮಗಾರಿ ಪೂರ್ಣಗೊಂಡಿದೆ. ಆಗಸ್ಟ್ 15ರ ಸ್ವಾತಂತ್ರ್ಯೋತ್ಸವಕ್ಕೆ ಉದ್ಘಾಟನೆ ಮಾಡುವ ಯೋಜನೆಯಿತ್ತು. ಆದರೆ, ಇದೀಗ ಅಧಿವೇಶನ ನಡೆಯುತ್ತಿರುವುದರಿಂದ ಸ್ವಲ್ಪ ತಡವಾಗಿದೆ. ವಿಸ್ತರಿತ ಹೆಬ್ಬಾಳ ಫ್ಲೈ ಓವರ್ ಅನ್ನು ಶೀಘ್ರದಲ್ಲೇ ಲೋಕಾರ್ಪಣೆಗೊಳಿಸಲಾಗುವುದು ಎಂದಿದ್ದಾರೆ**

**ಪಿ. ಮಣಿವಣ್ಣನ್, ಬಿಡಿಎ ಆಯುಕ್ತರು**

# ವಿವಿ ವಿದ್ಯಾರ್ಥಿನಿಯರ ಮೇಲೆ ಬೀದಿ ನಾಯಿಗಳ ದಾಳಿ

## ಬಿಬಿಎಂಪಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕಲು ಕ್ರಮ

• ಉದಯವಾಹಿನಿ ಬೆಂಗಳೂರು

ರಾಜಧಾನಿಯಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದೆ. ಪದೇ ಪದೇ ದಾಳಿ ಪ್ರಕರಣಗಳು ವರದಿಯಾಗುತ್ತಲೇ ಇರುತ್ತದೆ. ಬೀದಿ ನಾಯಿಗಳ ದಾಳಿಯಿಂದ ಇಬ್ಬರು ವಿದ್ಯಾರ್ಥಿನಿಯರು ಗಾಯಗೊಂಡಿದ್ದಾರೆ. ಅವರಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದೆ. ಬೆಂಗಳೂರು ವಿಶ್ವವಿದ್ಯಾಲಯದ ಆವರಣದಲ್ಲಿ ಈ ಘಟನೆ ಸಂಭವಿಸಿದೆ.

ಹಾವೇರಿಯ ಸೌಜನ್ಯ ಜಿ.ಜೆ. ಮತ್ತು ತೆಲಂಗಾಣದ ರೇಗಾ ನಿಕ್ಷಿತಾ ಎಂಬ ಇಬ್ಬರು ವಿದ್ಯಾರ್ಥಿನಿಯರು ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯದಲ್ಲಿ ಇಂಟಿಗ್ರೇಟೆಡ್ ಎಂ.ಎಸ್ಸಿ ಅರ್ಥಶಾಸ್ತ್ರದ ಮೂರನೇ ವರ್ಷದ ವಿದ್ಯಾರ್ಥಿಗಳು. ಸೌಜನ್ಯ ತೀವ್ರ ಗಾಯಗೊಂಡಿದ್ದು, ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ರೇಗಾ ಗಾಯಗಳಿಗೆ ಚಿಕಿತ್ಸೆ ಪಡೆಯುತ್ತಿದ್ದಾರೆ.

ಬೀದಿ ನಾಯಿಗಳನ್ನು ಹಿಡಿದು, ಸಂತಾನಹರಣ ಮಾಡಿ, ಶಾಶ್ವತವಾಗಿ ಆಶ್ರಯ ನೀಡುವಂತೆ ದೆಹಲಿ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದ ನಾಗರಿಕ ಅಧಿಕಾರಿಗಳಿಗೆ ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದ ಒಂದು ದಿನದ ನಂತರ ಈ ದಾಳಿ ನಡೆದಿದೆ. ಈ ಪ್ರಕ್ರಿಯೆಗೆ ಯಾವುದೇ ವಿರೋಧ ವ್ಯಕ್ತವಾದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನ್ಯಾಯಾಲಯ ಎಚ್ಚರಿಸಿದೆ. ನಾಯಿ ಕಡಿತ ಮತ್ತು ರೇಬೀಸ್ ಹಾವಳಿಯನ್ನು ತಡೆಯಲು ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ರವಿಕುಮಾರ್ ಅವರ ಪ್ರಶ್ನೆಗೆ ಉತ್ತರಿಸಲು ಸದನದಲ್ಲಿ ಸಂಬಂಧ ಪಟ್ಟ ಸಚಿವರು ಇರಲಿಲ್ಲ. ಹಾಗಾಗಿ, ಸಭಾನಾಯಕ ಬೋಸರಾಜ್ ಅವರು ಸಂಬಂಧಪಟ್ಟ ಸಚಿವರಿಂದ ಉತ್ತರ ಕೊಡಿಸುವ ಭರವಸೆ ನೀಡಿದರು. ಸುಪ್ರೀಂ ಕೋರ್ಟ್ ದೆಹಲಿ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ಬೀದಿ ನಾಯಿಗಳ ಹಾವಳಿ ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ. ಬೀದಿ ನಾಯಿಗಳನ್ನು ಹಿಡಿದು ಸಂತಾನಹರಣ ಮಾಡಬೇಕು. ಅವುಗಳಿಗೆ ಶಾಶ್ವತ ಆಶ್ರಯ ನೀಡಬೇಕು ಎಂದು ಹೇಳಿದೆ. ಈ ಆದೇಶಕ್ಕೆ ವಿರೋಧ ವ್ಯಕ್ತಪಡಿಸಿದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದೆ.


ಉದಯವಾಹಿನಿ ಚಿತ್ರ

**ಕೆಲವು ತಿಂಗಳ ಹಿಂದೆ ಪಾಲಿಕೆ ವ್ಯಾಪ್ತಿಯ ಕೊಡಿಗೇಹಳ್ಳಿಯಲ್ಲಿ ಸೀತಪ್ಪ ಎಂಬ ವ್ಯಕ್ತಿಯ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿವೆ. ಇದರಿಂದ ಗಂಭೀರವಾಗಿ ಗಾಯಗೊಂಡ ಸೀತಪ್ಪ ಸಾವನ್ನಪ್ಪಿದ್ದಾರೆ. ಜ್ಞಾನಭಾರತಿ ವ್ಯಾಪ್ತಿಯಲ್ಲಿ ಕೂಡ ಬೀದಿನಾಯಿ ದಾಳಿಯಿಂದ ಸೌಜನ್ಯಾ ಎಂಬುವವರು ಸಾವನ್ನಪ್ಪಿದ್ದಾರೆ. 2025ರಲ್ಲಿಈವರೆಗೂ ರಾಜ್ಯ ವ್ಯಾಪಿ 19 ಮಂದಿ ರೇಬಿಸ್ ರೋಗದಿಂದ ಮೃತಪಟ್ಟಿದ್ದಾರೆ. ಇದರಲ್ಲಿಬೆಂಗಳೂರಿನಲ್ಲಿಯೇ 9 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಸಂಬಂಧ ಸರಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.**

### ಬೀದಿ ನಾಯಿಗಳ ಶೆಲ್ಟರ್ ಸ್ಥಾಪನೆಗೆ ಆಗ್ರಹ

**ಬಿಬಿಎಂಪಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಬೇಕು. ಅದಕ್ಕಾಗಿ ನಾಯಿಗಳ ಶೆಲ್ಟರ್ ಸ್ಥಾಪನೆಗೆ ಮುಂದಾಗಬೇಕು ಎಂದು ಬಿಜೆಪಿ ಸದಸ್ಯ ರವಿಕುಮಾರ್ ಸರಕಾರವನ್ನು ಒತ್ತಾಯಿಸಿದರು. ವಿಧಾನ ಪರಿಷತ್‌ನಲ್ಲಿ ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ಆ ಹಿನ್ನೆಲೆಯಲ್ಲಿ ಸಾರ್ವಜನಿಕರು ಭಯದಿಂದ ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ವೃದ್ಧರು, ಪುಟಾಣಿಗಳ ಮೇಲೆ ಬೀದಿ ನಾಯಿಗಳು ದಾಳಿ ನಡೆಸಿವೆ. ಈ ಸಂಬಂಧ ಸರಕಾರ ಎಚ್ಚರಿಕೆ ವಹಿಸಬೇಕು. ಕೂಡಲೇ ಬೀದಿ ನಾಯಿಗಳ ನಿಯಂತ್ರಣಕ್ಕೆ ನಾಯಿ ಶೆಲ್ಟರ್ ಸ್ಥಾಪನೆಗೆ ಮುಂದಾಗಬೇಕು, ಎಂದು ಆಗ್ರಹಿಸಿದರು.**

**ಬಿಜೆಪಿ ಸದಸ್ಯ ರವಿಕುಮಾರ್ ಸರಕಾರ ಒತ್ತಾಯಿ**

## ನ್ಯಾ. ಕುನ್ಹಾ ವರದಿ ಬಹಿರಂಗಪಡಿಸಲ್ಲ; ಹೈಕೋರ್ಟ್‌ಗೆ ರಾಜ್ಯ ಸರ್ಕಾರ

• ಉದಯವಾಹಿನಿ ಬೆಂಗಳೂರು

ಜೂನ್ 4 ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣ ಕುರಿತ ನ್ಯಾಯಮೂರ್ತಿ ಜಾನ್ ಮೈಕೆಲ್ ಡಿ'ಕುನ್ಹಾ ನೇತೃತ್ವದ ವಿಚಾರಣಾ ಆಯೋಗ ಸಲ್ಲಿಸಿದ ವರದಿಯನ್ನುಕ ಬಹಿರಂಗಪಡಿಸುವುದಿಲ್ಲ ಎಂದು ಹೈಕೋರ್ಟ್‌ಗೆ ರಾಜ್ ಸರ್ಕಾರ ಭರವಸೆ ನೀಡಿದೆ. ಮುಂದಿನ ವಿಚಾರಣೆಯ ದಿನಾಂಕವಾದ ಸೆಪ್ಟೆಂಬರ್ 4 ರವರೆಗೆ ವರದಿಯನ್ನು ಪ್ರಕಟಿಸುವುದಿಲ್ಲ ಅಥವಾ ಪ್ರಸಾರ ಮಾಡುವುದಿಲ್ಲ ಎಂದು ಅಡ್ವೋಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಸಲ್ಲಿಸಿದ ಅರ್ಜಿಯನ್ನು ದಾಖಲಿಸಿಕೊಂಡ ನ್ಯಾಯಮೂರ್ತಿ ಜಯಂತ್ ಬ್ಯಾನರ್ಜಿ ಮತ್ತು ನ್ಯಾಯಮೂರ್ತಿ ಉಮೇಶ್ ಎಂ ಅಡಿಗ ಅವರಿದ್ದ ವಿಭಾಗೀಯ ಪೀಠವು ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್‌ವರ್ಕ್ಸ್ ಪ್ರೈವೇಟ್ ಲಿಮಿಟೆಡ್ ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ಸೆಪ್ಟೆಂಬರ್ 4 ಕ್ಕೆ ಮುಂದೂಡಿದೆ.

ವಿಚಾರಣೆ ವೇಳೆ ನ್ಯಾ. ಕುನ್ಹಾ ಅವರ ಆಯೋಗವು ಅರ್ಜಿದಾರರ ವಾದ ಆಲಿಸದೆ ಮತ್ತು ಪ್ರಕರಣದ ಸಾಕ್ಷಿಗಳನ್ನು ಪಾಟೀ ಸವಾಲು ನಡೆಸಲು ತಮಗೆ ಅವಕಾಶ ನೀಡದೆ ಏಪಕ್ಷೀಯವಾಗಿ ವರದಿ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿದೆ. ವರದಿಯ ಪ್ರತಿಯನ್ನು ಅರ್ಜಿದಾರರಿಗೆ ನೀಡಿಲ್ಲ. ಆದರೆ, ವರದಿ ಮಾಧ್ಯಮಗಳಿಗೆ ಸೋರಿಕೆಯಾಗಿದೆ. ವರದಿಯಲ್ಲಿ ಉಲ್ಲೇಖಿಸಿರುವ ಅಂಶಗಳಿಂದ ಅರ್ಜಿದಾರರ ಘನತೆಗೆ ಧಕ್ಕೆಯಾಗಿದೆ ಎಂದು ಡಿಎನ್‌ಎ ಆರೋಪಿಸಿತ್ತು. ಇದಕ್ಕೆ ಪ್ರತಿಕ್ರಿಯಿಸಿದ ಪೀಠವು ಅರ್ಜಿದಾರರೇನು ಕ್ರಿಮಿನಲ್‌ಗಳಲ್ಲ.

ವರದಿಯಲ್ಲಿನ ಅಭಿಪ್ರಾಯ ಆಘಾತಕಾರಿಯಾಗಿದೆ ಎಂದು ಹೇಳಿತು. ಈ ವೇಳೆ ವಾದ ಮಂಡಿಸಿದ ಸರ್ಕಾರದ ಪರ ವಕೀಲರು, ಸದ್ಯಕ್ಕೆ ನ್ಯಾ. ಜಾನ್ ಮೈಕೆಲ್ ಕುನ್ಹಾ ವರದಿ ಬಹಿರಂಗಪಡಿಸುವುದಿಲ್ಲ. ಹೀಗಾಗಿ, ವರದಿ ಬಗ್ಗೆ ನ್ಯಾಯಾಲಯವು ಯಾವುದೇ ಅಭಿಪ್ರಾಯ ವ್ಯಕ್ತಪಡಿಸಬಾರದು ಎಂದು ಮನವಿ ಮಾಡಿದರು.

# ದಸರಾ ಗಜಪಡೆಯಿಂದ ಮೈಸೂರಲ್ಲಿ ಮನೆ ಮನೆಯಲ್ಲೂ ಹರ್ ಘರ್ ತಿರಂಗಾ

• **ಉದಯವಾಹಿನಿ, ಮೈಸೂರು**


ಉದಯವಾಹಿನಿ ಚಿತ್ರ

79 ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನಲೆ, ದಸರಾ ಗಜಪಡೆಯಿಂದ ಮನೆ ಮನೆಯಲ್ಲೂ ಹರ್ ಘರ್ ತಿರಂಗಾ , ಮನೆ ಮನೆಯಲ್ಲೂ ಸ್ವಚ್ಚತೆ ಅರಿವು ಅಭಿಯಾನ ನಡೆಸಲಾಯಿತು. ಮೈಸೂರು ಮಹಾನಗರಪಾಲಿಕೆ ವತಿಯಿಂದ ವಿನೂತನ ಕಾರ್ಯಕ್ರಮ ನಡೆಸಲಾಯಿತು. ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 9 ಆನೆಗಳು, ದಸರಾ ಗಜಪಡೆಯ ಮಾವುತರು, ಕಾವಾಡಿಗಳು, ಮಹಾನಗರ ಪಾಲಿಕೆ ಸಿಬ್ಬಂದಿ ವರ್ಗ ಹಾಗೂ ಪೌರಕಾರ್ಮಿಕರು ಭಾಗಿಯಾದರು. ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ಸೇರಿದಂತೆ ಪಾಲಿಕೆಯ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾದರು. ಅರಮನೆ ಆವರಣದಿಂದ ಆಯುರ್ವೇದಿಕ್ ಆಸ್ಪತ್ರೆ ವೃತ್ತದವರೆಗೆ ರಾಷ್ಟ್ರಧ್ವಜ ಹಿಡಿದು ದಸರಾ ಗಜಪಡೆಯ ಮಾವುತರು ಕಾವಾಡಿಗಳು ಹೆಜ್ಜೆ ಹಾಕಿದ್ದು, ಅಭಿಯಾನ ಸಾರ್ವಜನಿಕರ ಗಮನ ಸೆಳೆಯಿತು. ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್ ಮಾತನಾಡಿ, 79ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಮನೆ ಮನೆಯಲ್ಲೂ ತ್ರಿವರ್ಣ ಧ್ವಜ ಅಭಿಯಾನಕ್ಕೆ ಕರೆ ನೀಡಲಾಗಿದೆ. ಹಾಗಾಗಿ ಇಂದು ತ್ರಿವರ್ಣ ಧ್ವಜದ ಅಭಿಯಾನದ ಜೊತೆಗೆ ಸ್ವಚ್ಚತಾ ಅರಿವು ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ದಸರಾ ಗಜಪಡೆಯೊಂದಿಗೆ ಪಾರಂಪರಿಕ ನಡಿಗೆಯ ಮೂಲಕ ಅಭಿಯಾನ ನಡೆಸಲಾಗಿದೆ. ಈ ಮೂಲಕ ಮನೆ ಮನೆಯಲ್ಲೂ ತ್ರಿವರ್ಣ ಧ್ವಜ, ಮನೆ ಮನೆಯಲ್ಲೂ ಸ್ವಚ್ಚತೆ ಎಂಬ ಸಂದೇಶ ರವಾನಿಸಲಾಗಿದೆ. ಜನರು ಸ್ವಚ್ಚತೆ ಕಾಪಾಡಿಕೊಳ್ಳುವಂತೆ ಅರಿವು ಮೂಡಿಸಲಾಗಿದೆ. ಈ ಒಂದು ಅಭಿಯಾನದಲ್ಲಿ ಮೈಸೂರು ಮಹಾನಗರ ಪಾಲಿಕೆಯ ಸಿಬ್ಬಂದಿ ವರ್ಗ, ಪೌರ ಕಾರ್ಮಿಕರು, ಅರಣ್ಯ ಇಲಾಖೆಯ ಸಿಬ್ಬಂದಿಗಳ ಜೊತೆಗೆ ಪೊಲೀಸರು ಕೂಡ ಭಾಗಿಯಾಗಿದ್ದಾರೆ. ಮನೆ ಮನೆಯಲ್ಲೂ ತ್ರಿವರ್ಣ ಧ್ವಜ, ಮನೆ ಮನೆಯಲ್ಲೂ ಸ್ವಚ್ಚತಾ ಅಭಿಯಾನ ಯಶಸ್ವಿಯಾಗಿ ನಡೆದಿದೆ ಎಂದರು. ಮೈಸೂರಿನಲ್ಲಿ ಗುಂಡಿ ಬಿದ್ದಿರುವ ರಸ್ತೆಗಳನ್ನು ಶೀಘ್ರದಲ್ಲೇ ಮುಚ್ಚಲಾಗುವುದು.

ರಸ್ತೆಗಳನ್ನು ದುರಸ್ತಿ ಮಾಡಲು ಈಗಾಗಲೇ ಟೆಂಡರ್ ಪ್ರಕ್ರಿಯೆ ಮುಗಿದು, ವರ್ಕ್ ಆರ್ಡರ್ ಕೂಡ ಆಗಿದೆ. ಮುಂದಿನ ಕೆಲವೇ ದಿನಗಳಲ್ಲಿ ಕಾಮಗಾರಿ ಆರಂಭವಾಗಲಿದೆ. ಆದಷ್ಟು ಬೇಗ ರಸ್ತೆಗಳನ್ನು ದುರಸ್ತಿ ಮಾಡಲಾಗುವುದು. ಇದರ ಜೊತೆಗೆ 18 ಪಾರ್ಕ್‌ಗಳ ಅಭಿವೃದ್ಧಿ ಮಾಡಲಾಗುತ್ತದೆ. ಕುಡಿಯುವ ನೀರು ಪೂರೈಕೆ, ಶೌಚಾಲಯಗಳ ನಿರ್ಮಾಣಕ್ಕೂ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು.

## ದಲ್ಲಾಳಿಗಳಿಗೆ ಕಡಿವಾಣ ಹಾಕಿ: ಲೋಕಾಯುಕ್ತ ಡಿವೈಎಸ್ಪಿ ಗಜೇಂದ್ರಪ್ರಸಾದ್ ಸೂಚನೆ

• **ಉದಯವಾಹಿನಿ, ಗುಂಡ್ಲುಪೇಟೆ**

ಸರ್ಕಾರಿ ಕಚೇರಿಗಳಲ್ಲಿ ದಲ್ಲಾಳಿಗಳಿಗೆ ಕಡಿವಾಣ ಹಾಕಬೇಕೆಂದು ಲೋಕಾಯುಕ್ತ ಡಿವೈಎಸ್ಪಿ ಗಜೇಂದ್ರಪ್ರಸಾದ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕ ಕುಂದುಕೊರತೆ, ದೂರು ಸ್ವೀಕಾರ ಕಾರ್ಯಕ್ರಮದಲ್ಲಿ ದೂರುದಾರರ ಸಮಸ್ಯೆ ಆಲಿಸಿ ಮಾತನಾಡಿದರು. ಅಧಿಕಾರಿಗಳು ಸಾರ್ವಜನಿಕರನ್ನು ವಿನಾಕಾರಣ ಕಚೇರಿಗಳಿಗೆ ಅಲೆಸಬಾರದು. ಕಾಲ ಮಿತಿಯೊಳಗೆ ಸಾರ್ವಜನಿಕರ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ಜನರಿಂದ ಹಣಕ್ಕೆ ಬೇಡಿಕೆ ಇಡುವುದು, ಭ್ರಷ್ಟಾಚಾರ ಕಂಡುಬಂದರೆ ಕೂಡಲೇ ಸಾರ್ವಜನಿಕರು ಲೋಕಾಯುಕ್ತರಿಗೆ ದೂರು ನೀಡಬೇಕೆಂದು ತಿಳಿಸಿದರು. ಪಟ್ಟಣದ ಜನತಾ ಕಾಲೊನಿ ನಿವಾಸಿ ಮಹದೇವಮ್ಮ, ಮನೆಯ ಮೇಲೆ ಹೈ ಟೆನ್ಷನ್ ವಿದ್ಯುತ್ ತಂತಿ ಹಾದು ಹೋಗಿದ್ದು, ಇದನ್ನು ತೆರವುಗೊಳಿಸುವಂತೆ 2019ರಿಂದಲೂ ಸೆಸ್ಕ್‌ಗೆ ಹಲವಾರು ಬಾರಿ ಅರ್ಜಿ ಸಲ್ಲಿಸಿದರೂ ಯಾವುದೇ ರೀತಿಯ ಕ್ರಮ ತೆಗೆದುಕೊಂಡಿಲ್ಲ ಎಂದು ದೂರು ನೀಡಿದರು. ಈ ಸಂಬಂಧ ಸಮಸ್ಯೆ ಆಲಿಸಿದ ಲೋಕಾಯುಕ್ತ ಅಧಿಕಾರಿಗಳು, ದೂರುದಾರರು ಬಡವರಾಗಿದ್ದಾರೆ. ಸರ್ಕಾರ ನೀಡಿರುವ ನಿವೇಶನದಲ್ಲಿ ಮನೆ ನಿರ್ಮಾಣ ಮಾಡುತ್ತಿದ್ದಾರೆ. ಸ್ವಂತ ಖರ್ಚಿನಲ್ಲಿ ವಿದ್ಯುತ್ ತಂತಿ ಸ್ಥಳಾಂತರಿಸಲು ಅಶಕ್ತರಾಗಿದ್ದು, ಪುರಸಭೆ ಮತ್ತು ಸೆಸ್ಕ್ ಇಲಾಖೆಯವರು ಜಂಟಿಯಾಗಿ ವಿದ್ಯುತ್ ಲೈನ್ ಸ್ಥಳಾಂತರ ಮಾಡುವಂತೆ ಸೂಚಿದರು.

ಅಗತಗೌಡನಹಳ್ಳಿ ಗ್ರಾಮದ ನಟರಾಜು ಎಂಬುವವರು ಮನೆಗೆ ಜಲವಿಷನ್ ಕುಡಿಯುವ ನೀರಿನ ಸಂಪರ್ಕ ನೀಡಲು ಅಧಿಕಾರಿಗಳು ಅಲೆದಾಡಿಸುತಿದ್ದು, ಸಮಸ್ಯೆ ಬಗೆಹರಿಸಿಕೊಡುವಂತೆ ದೂರು ನೀಡಿದರು. ಹಂಗಳ ಗ್ರಾಮದ ಸಿದ್ದರಾಜು ಪುತ್ತನಪುರ ಗ್ರಾಮದ ಸರ್ವೆ ನಂಬರ್ 112ರಲ್ಲಿ 1.30 ಎಕರೆ ಜಮೀನಿಗೆ ಸಾಗುವಳಿ ಮಂಜೂರಾಗಿದ್ದು, ಖಾತೆ ಮಾಡಿಕೊಡುವಂತೆ ಅಗತ್ಯ ದಾಖಲೆಗಳನ್ನು ನೀಡಿ ತಹಶೀಲ್ದಾರ್‌ಗೆ ಅರ್ಜಿ ಸಲ್ಲಿಸಿದ್ದರು ಖಾತೆ ಮಾಡುತಿಲ್ಲ ಎಂದು ದೂರು ನೀಡಿದರು. ಕುಡಿಯುವ ನೀರು ಪೂರೈಕೆ ಮಾಡುವುದು ಜಲಜೀವನ್ ಮಿಷನ್ ಯೋಜನೆಯ ಪ್ರಮುಖ ಉದ್ದೇಶವಾಗಿದ್ದುಮ, ಯಾವುದೇ ಕಾರಣ ನೀಡದೆ ವಾರದೊಳಗೆ ದೂರುದಾರರ ಮನೆಗೆ ನಲ್ಲಿ ಸಂಪರ್ಕ ನೀಡುವಂತೆ ಜಲಜೀವನ್ ಮಿಷನ್ ಅಧಿಕಾರಿಗಳಿಗೆ ಸೂಚಿಸಿದರು.

# ರಾಜಣ್ಣ ವಜಾಗೆ ಕಾಂಗ್ರೆಸ್ಸಿನಲ್ಲಿ ಹೆಚ್ಚಿದ ಅಸಮಾಧಾನ

## ವಾಲ್ಮೀಕಿ ಸಮುದಾಯದ ಇಬ್ಬರನ್ನು ಸಂಪುಟದಿಂದ ಕೈಬಿಡಲಾಗಿದೆ

• **ಉದಯವಾಹಿನಿ, ಕೋಲಾರ**


ಉದಯವಾಹಿನಿ ಚಿತ್ರ

**ಕೆಎನ್ ರಾಜಣ್ಣನವರಂತಹ ನಾಯಕರನ್ನು ಪಕ್ಷ ನಡೆಸಿಕೊಂಡಿದ್ದು ಸರಿಯಲ್ಲ, ಈ ಬಗ್ಗೆ ನನಗೆ ಬಹಳ ಅಸಮಾಧಾನವಿದೆ. ಅವರು ಸತ್ಯವನ್ನು ಹೇಳಿದ್ದರೂ, ಸತ್ಯವನ್ನು ಹೇಳಬಾರದಿತ್ತು.**
**-ಕೊತ್ತೂರು.ಜಿ.ಮಂಜುನಾಥ್**
**ಕೋಲಾರ ಕಾಂಗ್ರೆಸ್ ಶಾಸಕ**

**ಹೈ ಕಮಾಂಡಿಗೆ ಕೈ ಶಾಸಕ ರಿವರ್ಸ್**

ಸಹಕಾರ ಸಚಿವರಾಗಿದ್ದ ಹಿರಿಯ ಕಾಂಗ್ರೆಸ್ ನಾಯಕ ಕೆಎನ್ ರಾಜಣ್ಣನವರನ್ನು ಸಂಪುಟದಿಂದ ಹೊರಹಾಕಿದ್ದು ಸರಿಯಾದ ನಿರ್ಧಾರವಲ್ಲ. ಅವರನ್ನು ಕರೆದು ಮಾತನಾಡಿಸಬೇಕಿತ್ತು ಎಂದು ಕೋಲಾರದ ಕಾಂಗ್ರೆಸ್ ಶಾಸಕ ಕೊತ್ತೂರು.ಜಿ.ಮಂಜುನಾಥ್ ಅಭಿಪ್ರಾಯಪಟ್ಟಿದ್ದಾರೆ. ಮತಗಳ್ಳತನ ನಡೆಯುತ್ತಿದೆ ಎಂದು ಆರೋಪಿಸಿ ರಾಹುಲ್ ಗಾಂಧಿ ನೇತೃತ್ವದಲ್ಲಿ ದೊಡ್ಡ ಮಟ್ಟದ ಪ್ರತಿಭಟನೆ ದೇಶವ್ಯಾಪಿ ನಡೆಸಲು ಇಂಡಿಯಾ ಮೈತ್ರಿಕೂಟದ ಸದಸ್ಯರು ಪ್ಲ್ಯಾನ್ ಮಾಡಿಕೊಂಡಿದ್ದಾರೆ.

ಈಗಾಗಲೇ, ದೆಹಲಿ ಮತ್ತು ಬೆಂಗಳೂರಿನಲ್ಲಿ ಪ್ರತಿಭಟನೆ ನಡೆದಿದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ, ವಾಲ್ಮೀಕಿ ಸಮುದಾಯದ ಪ್ರಮುಖ ನಾಯಕ ಕೆಎನ್ ರಾಜಣ್ಣ, ತಮ್ಮ ಸರ್ಕಾರದ ಅವಧಿಯಲ್ಲೇ ಸಮಸ್ಯೆಯಾಗಿರುವುದು ಎನ್ನುವ ಹೇಳಿಕೆಯನ್ನು ನೀಡಿದ್ದರು. ಇದು, ಕಾಂಗ್ರೆಸ್ ಹೈಕಮಾಂಡ್ ತೀವ್ರ ಆಕ್ರೋಶಕ್ಕೆ ಕಾರಣವಾಗಿ, ಸಂಪುಟದಿಂದ ಕೈಬಿಡಬೇಕೆಂದು ಸೂಚನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನೀಡಿತ್ತು.

ಈ ಬಗ್ಗೆ ವಾಲ್ಮೀಕಿ ಸಮುದಾಯದ ನಾಯಕರುಗಳು ಒಬ್ಬೊಬ್ಬರಾಗಿ ಅಸಮಾಧಾನವನ್ನು ಹೊರಹಾಕಲು ಆರಂಭಿಸಿದ್ದಾರೆ. ವಾಲ್ಮೀಕಿ ನಿಗಮದ ಕೇಸಿನಲ್ಲಿ ಬಿ.ನಾಗೇಂದ್ರ ಅವರ ತಲೆದಂಡವೂ ಆಗಿತ್ತು. ಈಗ, ಕೆಎನ್ ರಾಜಣ್ಣ ಸರದಿ. ರಾಜಣ್ಣನವರನ್ನು ಸಂಪುಟದಿಂದ ತೆಗೆದು ಹಾಕಿದ್ದಕ್ಕೆ ಕೋಲಾರ ಶಾಸಕರು ಬೇಸರ ವ್ಯಕ್ತ ಪಡಿಸಿದ್ದಾರೆ. ಮತಗಳ್ಳತನದ ವಿಚಾರದಲ್ಲಿ ಕೆಎನ್ ರಾಜಣ್ಣ ಅವರು ನೀಡಿದ್ದ ಹೇಳಿಕೆಯಲ್ಲಿ ಸತ್ಯವಿತ್ತು, ಆದರೂ ಅವರು ಸತ್ಯವನ್ನು ಹೇಳಬಾರದಾಗಿತ್ತು. ನಮ್ಮ ನಾಯಕರು ಯಾವುದೇ ಒಂದು ವಿಚಾರವನ್ನು ಕೈಗೆತ್ತಿಕೊಂಡಾಗ, ನಾವೆಲ್ಲರೂ ಬದ್ದವಾಗಿರಬೇಕು ಎಂದು ಕೊತ್ತೂರು ಮಂಜುನಾಥ್ ಹೇಳಿದ್ದಾರೆ.

ಜಿಲ್ಲೆಯ ವೇಮಗಲ್‌ನಲ್ಲಿ ಮಾತನಾಡುತ್ತಿದ್ದ ಮಂಜುನಾಥ್, ನಮ್ಮ ನಾಯಕರ ನಿರ್ಧಾರದ ಬಗ್ಗೆ ಬೇಸರವಿದ್ದರೆ, ಅದರಿಂದ ದೂರವಿರಬೇಕು. ಆದರೂ, ಯಾವ ಕಾರಣಕ್ಕಾಗಿ ರಾಜಣ್ಣನವರನ್ನು ಸಂಪುಟದಿಂದ ತೆಗೆದು ಹಾಕಲಾಯಿತು ಎನ್ನುವ ಸ್ಪಷ್ಟ ಮಾಹಿತಿ ನಮಗಿಲ್ಲ ಎಂದು ಅವರು ಹೇಳಿದ್ದಾರೆ.

ರಾಜಣ್ಣನವರು ಸಮುದಾಯದ ದೊಡ್ಡ ನಾಯಕರು, ಅವರನ್ನು ಸಂಪುಟದಿಂದ ಏಕಾಏಕಿ ತೆಗೆದು ಹಾಕಿದ್ದಕ್ಕೆ ನನ್ನ ಸಹಮತವಿಲ್ಲ. ಈ ಬಗ್ಗೆ ನನಗೆ ಬೇಸರವಿದೆ, ಅವರು ತಪ್ಪು ಮಾಡಿದ್ದೇ ಆದಲ್ಲಿ, ಅವರನ್ನು ಕರೆಸಿ ಮಾತನಾಡಬಹುದಿತ್ತು. ಮಗು ತಾಯಿಯ ಹಾಲನ್ನು ಕುಡಿಯುವ ವೇಳೆ ಕಚ್ಚಿದರೆ, ಮಗುವಿಗೆ ಹೊಡೆಯುವುದು ತಪ್ಪಲ್ಲವೇ ಎಂದು ಕೊತ್ತೂರು ಮಂಜುನಾಥ್ ಅಭಿಪ್ರಾಯ ವ್ಯಕ್ತ ಪಡಿಸಿದ್ದಾರೆ. ವಾಲ್ಮೀಕಿ ಸಮುದಾಯಕ್ಕೆ ಗದಾಪ್ರಹಾರವಾಗುತ್ತಿದೆ, ಹಿಂದೆ ನಾಗೇಂದ್ರ ಅವರಿಗೆ ಆಯಿತು, ಈಗ ರಾಜಣ್ಣನವರ ಸರದಿ. ಕರ್ನಾಟಕದಲ್ಲಿ ನಮ್ಮ ಪಾರ್ಟಿ ಅಧಿಕಾರಕ್ಕೆ ಬರಲು, ನಮ್ಮ ಸಮುದಾಯದ ಪಾತ್ರವೂ ದೊಡ್ಡದಿದೆ. ಇದನ್ನು ಅರ್ಥ ಮಾಡಿಕೊಂಡರೆ ಒಳ್ಳೆಯದು ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಆ ಮೂಲಕ, ಅವರೂ ಅಸಮಾಧಾನವನ್ನು ಹೊರಹಾಕಿದ್ದಾರೆ. ಮತಗಳ್ಳತನದ ಬಗ್ಗೆ ಆರೋಪ ಮಾಡಿದ್ದ ರಾಹುಲ್ ಗಾಂಧಿ, ಅದಕ್ಕಾಗಿ ಬೆಂಗಳೂರು ಸೆಂಟ್ರಲ್ ಲೋಕಸಭಾ ಕ್ಷೇತ್ರದ ಮಹದೇವಪುರ ಅಸೆಂಬ್ಲಿ ಕ್ಷೇತ್ರದ ಉದಾಹರಣೆಯನ್ನು ತೆಗೆದುಕೊಂಡಿದ್ದರು. ಅದಕ್ಕೆ ಪ್ರತಿಕ್ರಿಯಿಸಿದ್ದ ಕೆಎನ್ ರಾಜಣ್ಣ, ಮತದಾರರ ಪಟ್ಟಿ ರೆಡಿ ಆಗಿದ್ದೇ ನಮ್ಮ ಅವಧಿಯಲ್ಲಿ, ತಪ್ಪು ನಮ್ಮದೂ ಇದೆ ಎಂದು ಕೆಎನ್ ರಾಜಣ್ಣ ಹೇಳಿದ್ದರು.

## ಅವಧಿ ವಿಸ್ತರಿಸಿದರೆ ಮತ್ತೆ ಬಿ-ಖಾತೆ: ನಗರಸಭೆ ಅಧ್ಯಕ್ಷ

• **ಉದಯವಾಹಿನಿ, ರಾಮನಗರ**


ಉದಯವಾಹಿನಿ ಚಿತ್ರ

**ಭೂ ಪರಿವರ್ತನೆಯಾಗದ ಮತ್ತು ಸಕ್ಷಮ ಪ್ರಾಧಿಕಾರದಿಂದ ನಕ್ಷೆ ಅನುಮೋದ ಇಲ್ಲದ ಕಂದಾಯ ನಿವೇಶನಗಳಲ್ಲಿ ಮನೆ ಮತ್ತು ಕಟ್ಟಡ ನಿರ್ಮಿಸಿದವರಿಗೆ ಬಿ-ಖಾತೆ ಮಾಡಿ ಕೊಡುವ ಸಲುವಾಗಿ ಸರ್ಕಾರ ಅಭಿಯಾನ ಆರಂಭಿಸಿತ್ತು. ಮೊದಲು ನಿಗದಿಪಡಿಸಿದ್ದ ಸಮಯವು ಕಡಿಮೆಯಾಯಿತು ಎಂದು ಎರಡು ಸಲ ವಿಸ್ತರಣೆ ಮಾಡಿತ್ತು ಎಂದು ತಿಳಿಸಿದರು.**

ಅನಧಿಕೃತ ಆಸ್ತಿಗಳನ್ನು ಅಧಿಕೃತಗೊಳಿಸಲು ರಾಜ್ಯ ಸರ್ಕಾರ ಶುರು ಮಾಡಿದ್ದ ಐತಿಹಾಸಿಕವಾದ ಬಿ-ಖಾತೆ ಅಭಿಯಾನದ ಕಾಲಾವಧಿ ಮುಗಿದಿದೆ. ಸರ್ಕಾರ ಮತ್ತೇ ದಿನಾಂಕವನ್ನು ವಿಸ್ತರಣೆ ಮಾಡಿದರೆ ಅರ್ಜಿಗಳನ್ನು ಪಡೆದು ಖಾತೆ ಮಾಡಿಕೊಡಲಾಗುವುದು ಎಂದು ನಗರಸಭೆ ಅಧ್ಯಕ್ಷ ಕೆ. ಶೇಷಾದ್ರಿ, ಶಶಿ ಹೇಳಿದರು.

ನಗರದ ಜಾಲಮಂಗಲ ರಸ್ತೆಯಲ್ಲಿರುವ ಮಂಜುನಾಥ ಕಲ್ಯಾಣ ಮಂಟಪದಲ್ಲಿ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ನಿಮ್ಮ ಆಸ್ತಿ-ನಿಮ್ಮ ಹಕ್ಕು ಮನೆ ಮನೆಗೆ ಇ-ಖಾತೆ ಅಭಿಯಾನದ 4ನೇ ಕಾರ್ಯಕ್ರಮದಲ್ಲಿ ಅರ್ಜಿದಾರರಿಗೆ ಇ-ಖಾತೆಗಳನ್ನು ವಿತರಿಸಿ ಅವರು ಮಾತನಾಡಿದರು. ಬಿ-ಖಾತೆ ಅಭಿಯಾನದಡಿ ಆ. 10ರವರೆಗೆ ಖಾತೆ ಮಾಡಿಕೊಡಲು ಸರ್ಕಾರ ಅವಕಾಶ ನೀಡಿತ್ತು. ಅದರಂತೆ, ರಾಮನಗರ ನಗರಸಭೆಯಲ್ಲಿ 1700ಕ್ಕೂ ಅಧಿಕ ಬಿ-ಖಾತೆಗಳನ್ನು ವಿತರಿಸಲಾಗಿದೆ. ಇನ್ನೂ 300 ಅರ್ಜಿಗಳಿಗೆ ಖಾತೆ ವಿತರಣೆ ಬಾಕಿ ಇದೆ. ಆದರೆ, ಸುಮಾರು 3 ಸಾವಿರ ಆಸ್ತಿ ಮಾಲೀಕರು ಬಿ-ಖಾತೆ ಪಡೆಯಲು ಅರ್ಜಿಯನ್ನೇ ಸಲ್ಲಿಸಿಲ್ಲ ಎಂದರು.

ನಮೂನೆ-3 ವಿತರಣೆಯು ಮುಂದಿನ ದಿನಗಳಲ್ಲಿ ನಿರಂತರವಾಗಿ ಮುಂದುವರೆಯಲಿದೆ. ಈವರೆಗೆ ಮೂರು ಅಭಿಯಾನದ ಮೂಲಕ ವಾರ್ಡ್‌ಳಿಗೆ ತೆರಳಿ ಖಾತೆ ವಿತರಿಸಿದ್ದೇವೆ. ಇದರಿಂದ ನೂರಾರು ಮಂದಿ ಪ್ರಯೋಜನ ಪಡೆದುಕೊಂಡಿದ್ದಾರೆ. ಇದೀಗ ನಡೆಯುತ್ತಿರುವ ಅಭಿಯಾನದಲ್ಲಿ 25, 26ನೇ ವಾರ್ಡ್‌ಗೆ ಸಂಬಂಧಿಸಿದ ಆಸ್ತಿಗಳಿಗೆ ಖಾತೆ ವಿತರಣೆ ಮಾಡಲಾಗಿದೆ ಎಂದರು. ಅಭಿಯಾನದ ಅಂಗವಾಗಿ ನಗರಸಭೆಯ ಕಂದಾಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ, ಬೆಳಿಗ್ಗೆಯಿಂದ ಸಂಜೆವರೆಗೆ ಮಂಜುನಾಥ ಕಲ್ಯಾಣ ಮಂಟಪದಲ್ಲಿ ಬೀಡು ಬಿಟ್ಟರು. ಸ್ಥಳದಲ್ಲೇ ಅರ್ಜಿ ಸ್ವೀಕರಿಸಿ ಇ-ಖಾತೆ ಸೃಜಿಸಿದರು. ಸುಮಾರು 50 ಮಂದಿ ಅರ್ಜಿ ಸಲ್ಲಿಸಿದರು. ಸ್ಥಳದಲ್ಲೇ 25ಕ್ಕೂ ಅಧಿಕ ಮಂದಿಗೆ ಇ-ಖಾತೆಗಳನ್ನು ಅಧ್ಯಕ್ಷ ಶೇಷಾದ್ರಿ, ಉಪಾಧ್ಯಕ್ಷೆ ಅಯೇಷಾ ಬಾನು ಹಾಗೂ ಪೌರಾಯುಕ್ತ ಡಾ. ಜಯಣ್ಣ ವಿತರಿಸಿದರು.

## ಸಿಎಂಗೆ ನಿಂದನೆ: ಕಿಡಿಗೇಡಿಗಳ ಗಡೀಪಾರಿಗೆ ಆಗ್ರಹ

• **ಉದಯವಾಹಿನಿ, ಮಂಡ್ಯ**


ಉದಯವಾಹಿನಿ ಚಿತ್ರ

ಕುರುಬ ಸಮುದಾಯ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿರುವ ವ್ಯಕ್ತಿಗಳನ್ನು ಗಡಿಪಾರು ಮಾಡಬೇಕು ಎಂದು ಆಗ್ರಹಿಸಿ ಕುರುಬರ ಸಂಘ ಮತ್ತು ಕಾಂಗ್ರೆಸ್ ಮುಖಂಡರು ಬುಧವಾರ ಕರೆ ನೀಡಿದ್ದ ಬಸರಾಳು ಬಂದ್ ಪ್ರತಿಭಟನೆಗೆ ಸೀಮಿತವಾಗಿತ್ತು.

ಬಸರಾಳು ಗ್ರಾಮದಲ್ಲಿ ಬಾರ್, ಹೋಟೆಲ್‌ಗಳು, ದಿನಸಿ ಅಂಗಡಿಗಳು ಎಂದಿನಂತೆ ತೆರೆದಿದ್ದವು. ಶಾಲಾ-ಕಾಲೇಜು, ಸರ್ಕಾರಿ ಕಚೇರಿಗಳು ಎಂದಿನಂತೆ ತೆರೆದಿದ್ದವು. ಬಂದ್, ಪ್ರತಿಭಟನೆಯಿಂದಾಗಿ ನಾಗಮಂಗಲ- ಮಂಡ್ಯ ಹೆದ್ದಾರಿ ಸಂಚಾರ ಕೆಲಕಾಲ ಅಸ್ತವ್ಯಸ್ತಗೊಂಡಿತು. ಪ್ರತಿಭಟನಾ ಮೆರವಣಿಗೆ ಹೊರಡುವ ರಸ್ತೆ ಸಮೀಪದ ಕೆಲವು ಅಂಗಡಿ ಮುಂಗಟ್ಟುಗಳನ್ನು ಮಾಲೀಕರು ಸ್ವಯಂಪ್ರೇರಿತರಾಗಿ ಬಂದ್ ಮಾಡಿದರು. ಮೆರವಣಿಗೆ ಹೋದ ಮೇಲೆ ಅಂಗಡಿ ಬಾಗಿಲು ತೆರೆಯಲಾಯಿತು. ಮೊದಲಿಗೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಕುರುಬ ಸಮುದಾಯದವರು ಬಸರಾಳು ವೃತ್ತದಲ್ಲಿ ಜಮಾವಣೆಗೊಂಡು ಘೋಷಣೆ ಕೂಗಿದರು. ನಂತರ ಪೊಲೀಸ್ ಠಾಣೆವರೆಗೂ ಮೆರವಣಿಗೆ ನಡೆಸಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಿಮ್ಮಯ್ಯ ಅವರಿಗೆ ಮನವಿ ಸಲ್ಲಿಸಿದರು. ತಾಲ್ಲೂಕಿನ ಬೆನ್ನಟ್ಟಿ ಗ್ರಾಮದ ಕುಮಾರ್ ಮತ್ತು ಶ್ಯಾನಭೋಗನಹಳ್ಳಿ ಗ್ರಾಮದ ಮಹೇಶ್ ಎಂಬ ಆರೋಪಿಗಳು ಕುರುಬ ಸಮುದಾಯ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ ಎಂಬ ಕಾರಣಕ್ಕೆ ಕುರುಬ ಸಮುದಾಯದ ಮುಖಂಡರು ಸಿಡಿದೆದ್ದು, ಈ ವ್ಯಕ್ತಿಗಳನ್ನು ಬಂಧಿಸುವಂತೆ ಕಳೆದ ಮೂರು ದಿನಗಳಿಂದಲೂ ಒತ್ತಾಯ ಕೇಳಿ ಬರುತ್ತಲೇ ಇತ್ತು. ಇವರ ವಿರುದ್ಧ ಬಸರಾಳು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಕುಮಾರ್, ಮಹೇಶ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.

## ಕಾಂಗ್ರೆಸ್ ಹೆಸರಿಗೆ ಜಾಗ ನೋಂದಣಿ ವಿವಾದ

• **ಉದಯವಾಹಿನಿ, ತುಮಕೂರು**

**ಕಾಂಗ್ರೆಸ್ ಬಿಜೆಪಿ ಜಟಾಪಟಿ**

ನಗರದ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಕಾಂಗ್ರೆಸ್, ಬಿಜೆಪಿ ನಾಯಕರ ಮಧ್ಯೆ ಜಟಾಪಟಿ ನಡೆಯಿತು. ಕಾಂಗ್ರೆಸ್ ಭವನ ನಿರ್ಮಾಣಕ್ಕೆ 2 ಎಕರೆ ಜಾಗ ನೋಂದಣಿ ವಿಚಾರ ಗಲಾಟೆ, ಗದ್ದಲಕ್ಕೆ ಕಾರಣವಾಯಿತು. ಬಿಜೆಪಿ ಮುಖಂಡರ ವಿರೋಧದ ಮಧ್ಯೆ ಕಾಂಗ್ರೆಸ್ ಭವನ ಟ್ರಸ್ಟ್ ಹೆಸರಿಗೆ ಜಾಗ ನೋಂದಣಿ ಮಾಡಿ ಕೊಡಲಾಯಿತು. ನಗರದ ಮರಳೂರು ಸರ್ವೆ ನಂಬರ್ 87/2ರಲ್ಲಿ ಕಾಂಗ್ರೆಸ್ ಭವನ ನಿರ್ಮಾಣಕ್ಕೆ ಜಾಗ ಕಾಯ್ದಿರಿಸಿ ಸರ್ಕಾರ ಮಂಜೂರಾತಿ ಪತ್ರ ನೀಡಿತ್ತು. ಇದಕ್ಕೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿತ್ತು. ಅದರಂತೆ ಜಾಗ ನೋಂದಣಿ ಮಾಡಿಸಲು ಕಾಂಗ್ರೆಸ್ ನಾಯಕರು ಬುಧವಾರ ಉಪನೋಂದಣಾಧಿಕಾರಿ ಕಚೇರಿಗೆ ಬಂದಿದ್ದರು.

ಈ ಮಾಹಿತಿ ತಿಳಿದ ಬಿಜೆಪಿ ನಾಯಕರು ಕಚೇರಿಗೆ ಮುತ್ತಿಗೆ ಹಾಕಿದರು. ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಎಸ್.ರವಿಶಂಕರ್, ನಗರ ಅಧ್ಯಕ್ಷ ಕೆ.ಧನುಶ್, ಮುಖಂಡರಾದ ನವಚೇತನ್, ಹನುಮಂತರಾಜು ಅವರನ್ನು ಪೊಲೀಸರು ಕಚೇರಿಯಿಂದ ಹೊರಗಡೆ ಕಳುಹಿಸಿದರು. ನಂತರ ಕಾಂಗ್ರೆಸ್ ಮುಖಂಡರ ಕಾರು ತಡೆದು ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಚಂದ್ರಶೇಖರ್‌ಗೌಡ ಹಾಗೂ ಬಿಜೆಪಿ ಮುಖಂಡರ ನಡುವೆ ಕೆಲ ಸಮಯ ವಾಗ್ವಾದ ನಡೆಯಿತು. ಇದರಿಂದ ಕಚೇರಿ ಬಳಿ ಗೊಂದಲ ವಾತಾವರಣ ನಿರ್ಮಾಣವಾಗಿತ್ತು.

ಕಾಂಗ್ರೆಸ್‌ಗೆ ನೀಡಿರುವ ಜಾಗ ರೈತ ಸತೀಶ್ ಎಂಬುವರಿಗೆ ಸೇರಿದ್ದು, ಕೋರ್ಟ್‌ನಲ್ಲಿ ಪ್ರಕರಣ ವಿಚಾರಣೆ ಹಂತದಲ್ಲಿದೆ. ಕಳೆದ 15 ವರ್ಷದಿಂದ ಜಾಗದ ವಿಚಾರವಾಗಿ ವಾದ ಪ್ರತಿವಾದ ನಡೆಯುತ್ತಿದೆ. ಇದರ ಮಧ್ಯೆ ಸದರಿ ಜಾಗಕ್ಕೆ ಅನಧಿಕೃತವಾಗಿ ಇ-ಖಾತೆ ಸೃಷ್ಟಿಸಿ, ನೋಂದಣಿಗೆ ಮುಂದಾಗಿದ್ದಾರೆ ಎಂದು ಎಚ್.ಎಸ್. ರವಿಶಂಕರ್ ಆರೋಪಿಸಿದರು.

ಘಟನೆ ನಂತರ ಸುದ್ದಿಗಾರರ ಜತೆ ಮಾತನಾಡಿ, ಕಾನೂನು ಬಾಹಿರವಾಗಿ ನೋಂದಣಿಗೆ ಕೈಹಾಕಿದ್ದಾರೆ. ಕಂದಾಯ ಜಾಗವನ್ನು ಕಾಂಗ್ರೆಸ್ ಪಡೆದುಕೊಂಡಿದೆ. ಕಾನೂನು ಹೋರಾಟ ಮುಂದುವರಿಸಲಾಗುವುದು ಎಂದರು. ಬಿಜೆಪಿ ಮುಖಂಡರು ಮಹಾನಗರ ಪಾಲಿಕೆ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು. ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಯಾವುದೇ ಕಾರಣಕ್ಕೂ ಜಾಗ ನೀಡಬಾರದು ಎಂದು ಆಗ್ರಹಿಸಿದರು.

## ಆನೆ ಕಾರ್ಯಪಡೆ ಶ್ರೇಯಸ್‌ಗೆ ಕಂಬನಿಯ ವಿದಾಯ

• **ಉದಯವಾಹಿನಿ, ಚನ್ನಪಟ್ಟಣ**


ಉದಯವಾಹಿನಿ ಚಿತ್ರ

**ಅರಣ್ಯ ಮತ್ತು ಗ್ರಾಮಗಳ ಸುರಕ್ಷತೆಗಾಗಿ ತಮ್ಮ ಪ್ರಾಣ ತ್ಯಾಗ ಮಾಡಿದ ಶ್ರೇಯಸ್ ಅವರ ಸೇವೆ ಧೈರ್ಯ ಮತ್ತು ಸಮರ್ಪಣೆ ಸ್ಮರಣೀಯ. ಅವರ ಆತ್ಮಕ್ಕೆ ಶಾಂತಿ ದೊರಕಿ ಕುಟುಂಬದವರಿಗೆ ದುಃಖ ಸಹಿಸುವ ಶಕ್ತಿ ದೇವರು ನೀಡಲಿ ಎಂದು ಪ್ರಾರ್ಥಿಸುವೆ.**
**- ಡಾ. ಸಿ.ಎನ್. ಮಂಜುನಾಥ್**
**ಬೆಂಗಳೂರು ಗ್ರಾಮಾಂತರ ಸಂಸದ**

**ಆನೆ ಕಾರ್ಯಪಡೆ ಸಿಬ್ಬಂದಿ ಶ್ರೇಯಸ್ ಅವರ ಅಗಲಿಕೆ ತುಂಬಾ ನೋವು ತಂದಿದೆ. ಯೌವನದಲ್ಲಿಯೇ ಕರ್ತವ್ಯ ನಿರ್ವಹಿಸುತ್ತಾ ಜೀವ ತ್ಯಾಗ ಮಾಡಿದ ಅವರ ಸೇವೆಯನ್ನು ನಾವು ಸದಾ ಸ್ಮರಿಸಿಕೊಳ್ಳುತ್ತೇವೆ. ಶ್ರೇಯಸ್ ಅವರ ಆತ್ಮಕ್ಕೆ ಶಾಂತಿ ಸಿಗಲಿ.**
**-ಸಿ.ಪಿ. ಯೋಗೇಶ್ವರ್, ಶಾಸಕ**

ಕನಕಪುರ ತಾಲ್ಲೂಕಿನ ಕಬ್ಬಾಳು ಅರಣ್ಯ ಪ್ರದೇಶದಲ್ಲಿ ಮಂಗಳವಾರ ಕಾಡಾನೆಗಳನ್ನು ಕಾಡಿಗೆ ಓಡಿಸುವ ಕಾರ್ಯಾಚರಣೆ ವೇಳೆ ಆನೆ ದಾಳಿಯಿಂದ ಮೃತಪಟ್ಟ ಆನೆ ಕಾರ್ಯಪಡೆಯ ಸಿಬ್ಬಂದಿ ಚನ್ನಪಟ್ಟಣದ ಎಲೆಕೇರಿಯ ಶ್ರೇಯಸ್ ಸಿ. (20) ಅವರ ಅಂತ್ಯಕ್ರಿಯೆ ಎಲೆಕೇರಿಯ ರುದ್ರಭೂಮಿಯಲ್ಲಿ ಜರುಗಿತು.

ಹಾರೋಹಳ್ಳಿಯ ದಯಾನಂದ ಸಾಗರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ಬಳಿಕ ಮಧ್ಯಾಹ್ನ ಶವವನ್ನು ರಾಮನಗರದಲ್ಲಿರುವ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಗೆ ತರಲಾಯಿತು. ಅಲ್ಲಿ ಜಿಲ್ಲಾಡಳಿತ ಮತ್ತು ಅರಣ್ಯ ಇಲಾಖೆಯಿಂದ ಸರ್ಕಾರಿ ಗೌರವ ಸಲ್ಲಿಸಲಾಯಿತು.

**ಏಕಾಏಕಿ ದಾಳಿ:** ಕಬ್ಬಾಳು ಅರಣ್ಯ ಪ್ರದೇಶದಲ್ಲಿ ರೈತರ ಜಮೀನಿನ ಮೇಲೆ ದಾಳಿ ನಡೆಸಿದ್ದ ಐದಾರು ಕಾಡಾನೆಗಳನ್ನು ಕಾಡಿಗೆ ವಾಪಸ್ ಓಡಿಸುವ ಕಾರ್ಯಾಚರಣೆಯನ್ನು ಆನೆ ಕಾರ್ಯಪಡೆ ಕೈಗೊಂಡಿತ್ತು. ನಾಲ್ಕು ಆನೆಗಳನ್ನು ಕಾಡಿಗೆಓಡಿಸುತ್ತಿದ್ದಾಗ, ಪೊದೆಗಳ ಹಿಂದೆ ಅಡಗಿದ್ದ ಮತ್ತೊಂದು ಆನೆ ಏಕಾಏಕಿ ಶ್ರೇಯಸ್ ಅವರತ್ತ ನುಗ್ಗಿ ದಾಳಿ ನಡೆಸಿತ್ತು. ನೆಲಕ್ಕೆ ಕುಸಿದ ಶ್ರೇಯಸ್ ಅವರನನ್ನು ಸಿಬ್ಬಂದಿ ಕೂಡಲೇ ಸಾತನೂರು ಸರ್ಕಾರಿ ಆಸ್ಪತ್ರೆಗೆ ಕರೆತಂದು ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಹಾರೋಹಳ್ಳಿ ಸಮೀಪದ ದಯಾನಂದ ಸಾಗರ್ ಆಸ್ಪತ್ರೆಗೆ ಕರೆತರುವಾಗ ಮಾರ್ಗಮಧ್ಯೆಯೇ ಕೊನೆಯುಸಿರೆಳೆದಿದ್ದರು.

**10 ಲಕ್ಷದ ಚೆಕ್ ವಿತರಣೆ:** ರಾಮನಗರದ ಡಿಸಿಎಫ್ ಕಚೇರಿ ಬಳಿ ಶ್ರೇಯಸ್ ಅವರ ಮೃತದೇಹಕ್ಕೆ ಗೌರವ ಸಲ್ಲಿಸಿದ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಇದೇ ಸಂದರ್ಭದಲ್ಲಿ ಶ್ರೇಯಸ್ ಅವರ ತಾಯಿ ತ್ರಿವೇಣಿ ಅವರಿಗೆ 10 ಲಕ್ಷ ಪರಿಹಾರದ ಚೆಕ್ ವಿತರಣೆ ಮಾಡಿದರು. ಈ ವೇಳೆ ತಾಯಿ ನನಗೆ ಹಣ ಬೇಡ. ಆತನನ್ನು ವಾಪ್ ಕೊಡಿ ಎಂದು ಕಣ್ಣೀರು ಹಾಕಿದರು.ಆಗ ಡಿ.ಸಿ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು ತಾಯಿಯನ್ನು ಸಮಾಧಾನಪಡಿಸಿ ಚೆಕ್ ಹಸ್ತಾಂತರಿಸಿದರು. ಕರ್ತವ್ಯದಲ್ಲಿರುವ ಸಿಬ್ಬಂದಿ ಮೃತಪಟ್ಟರೆ ಇಲಾಖೆಯಿಂದ 25 ಲಕ್ಷ ಪರಿಹಾರ ನೀಡಲಾಗುತ್ತದೆ. ಮೊದಲ ಹಂತದಲ್ಲಿ ಶ್ರೇಯಸ್ ಅವರ ಕುಟುಂಬಕ್ಕೆ ಇಂದು 10 ಲಕ್ಷದ ಚೆಕ್ ವಿತರಿಸಲಾಗಿದೆ. ಉಳಿದ ಮೊತ್ತವನ್ನು ಶೀಘ್ರ ನೀಡಲಾಗುವುದು. ಜೊತೆಗೆ ತಂದೆ, ತಾಯಿ ಒಬ್ಬರಿಗೆ ಐದು ಪಿಂಚಣಿ ಸಹ ನೀಡಲಾಗುವುದು ಎಂದು ಅರಣ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದರು.

# ಚಳಿ, ಮಳೆಯನ್ನು ಲೆಕ್ಕಿಸದೆ ಆಶಾ ಕಾರ್ಯಕರ್ತೆಯರು ಪ್ರತಿಭಟನೆ

## ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆಯ ರಾಜ್ಯ ಕಾರ್ಯದರ್ಶಿ ಮಂಡಳಿಯ ಸದಸ್ಯೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**


ಉದಯವಾಹಿನಿ ಚಿತ್ರ

**ಸರಕಾರದ ಗಮನಕ್ಕೆ ತರುವುದಾಗಿ ಆಶ್ವಾಸನೆ**

ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಆಶಾ ಕಾರ್ಯಕರ್ತೆಯರು ಮಳೆ ನಡುವೆಯೂ ಜಿಲ್ಲಾಧಿಕಾರಿಗಳ ಕಚೇರಿ ಎದುರು ಅಹೋರಾತ್ರಿ ಧರಣಿ ಮುಂದುವರಿಸಿದ್ದಾರೆ. ಆಶಾ ಕಾರ್ಯ ಕರ್ತೆಯರ ರಾಜ್ಯ ವ್ಯಾಪಿ ಅಹೋರಾತ್ರಿ ಧರಣಿ ಎರಡನೇ ದಿನವೂ ಮುಂದುವರಿದಿದೆ. ಮುಂಜಾನೆಯಿಂದ ಮಳೆ ಸುರಿಯುತ್ತಿದ್ದರೂ ಆಶಾ ಕಾರ್ಯಕರ್ತೆಯರು ಪ್ರತಿಭಟನೆಯನ್ನು ಮುಂದುವರಿಸಿದರು. ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆಯ ರಾಜ್ಯ ಕಾರ್ಯದರ್ಶಿ ಮಂಡಳಿಯ ಸದಸ್ಯೆ ಎಚ್.ಎಲ್.ನಿರ್ಮಲಾ ಮಾತನಾಡಿ, ತಾನು ಸದಾ ಮಹಿಳಾ ಪರ ಎನ್ನುವ ರಾಜ್ಯ ಸರಕಾರ ತಾಯಿ, ಮಗುವಿನ ಜೀವನ್ಮರಣದ ಹೋರಾಟದಲ್ಲಿ ಆಸರೆಯಾಗಿ ನಿಂತಿರುವ ಸಾವಿರಾರು ಅಶಾಗಳನ್ನು ನಿರಾಸೆಗೊಳಿಸಿದೆ ಎಂದರು.

ಕಳೆದ ಜನವರಿಯಲ್ಲಿ ಏಪ್ರಿಲ್ ತಿಂಗಳಿನಿಂದ ಮಾಸಿಕ ವೇತನ 10,000 ನಿಗದಿಪಡಿಸಲಾಗುವುದು ಎಂದು ಹೇಳಿ 8 ತಿಂಗಳಾಗಿದೆ. ಅಷ್ಟೇ ಅಲ್ಲದೆ ಕೊಟ್ಟ ಮಾತನ್ನು ಸಂಪೂರ್ಣವಾಗಿ ಮರೆತಿರುವುದು ಖಂಡನೀಯ. ಇದು ನಿಜವಾಗಿಯೂ ಒಂದು ಜವಾಬ್ದಾರಿಯುತ ನಡೆಯಾಗದು. ನಿಮ್ಮ ಎಲ್ಲಾ ನ್ಯಾಯಯುತ ಬೇಡಿಕೆಗಳು ಈಡೇರುವ ತನಕ ನಿಮ್ಮ ಹೋರಾಟವನ್ನು ಕೈಬಿಡಬೇಡಿ. ನಿಮ್ಮ ಹೋರಾಟದೊಂದಿಗೆ ನಾವಿದ್ದೇವೆ ಎಂದರು.

ಮುಖ್ಯಮಂತ್ರಿಗಳು ಕೊಟ್ಟ ಮಾತನ್ನು ಮರೆತಿರುವುದರಿಂದ ಆಶಾಗಳಲ್ಲಿ ಆಗುತ್ತಿರುವ ಸಿಟ್ಟು, ಆಕ್ರೋಶ ಹಾಗೂ ವಂಚನೆಯ ಭಾವನೆಗಳನ್ನು ತಾವುಗಳು ಮುಖ್ಯಮಂತ್ರಿಗಳಿಗೆ ತಿಳಿಸಬೇಕು. ನಿಮ್ಮ ಪ್ರತಿಯೊಂದು ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಸಿಕೊಂಡು ಹೋಗವಲ್ಲಿ ಗಣನೀಯ ಪಾತ್ರ ವಹಿಸುವ ಆಶಾಗಳು ಇಂದು ಬೀದಿಯಲ್ಲಿ ಪ್ರತಿಭಟಿಸುತ್ತಿದ್ದಾರೆ. ಇವರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆ ಸ್ಥಳಕ್ಕೆ ಡಿಎಚ್‌ಒ ಡಾ.ಮಹೇಶ್ ಕುಮಾರ್, ಆರ್‌ಸಿಎಚ್‌ಒ ಡಾ.ಸಂತೋಷ್ ಕುಮಾರ್ ಆಗಮಿಸಿ, ಆಶಾಗಳ ಬೇಡಿಕೆಗಳ ಮನವಿ ಪತ್ರವನ್ನು ಸ್ವೀಕರಿಸಿ ಬೇಡಿಕೆಗಳನ್ನು ರಾಜ್ಯ ಸರಕಾರದ ಗಮನಕ್ಕೆ ತರುವುದಾಗಿ ಆಶ್ವಾಸನೆ ನೀಡಿದರು. ತಮ್ಮ ಇಲಾಖೆಯ ವ್ಯಾಪ್ತಿಗೆ ಬರುವ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದರು.

### ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ

**ಚಿಕ್ಕಬಳ್ಳಾಪುರದಲ್ಲಿ ಆಶಾ ಕಾರ್ಯ ಕರ್ತೆಯರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಅಹೋರಾತ್ರಿ ಧರಣಿ ಮುಂದುವರಿಸಿದ್ದಾರೆ. ಮಳೆ, ಚಳಿಯನ್ನೂ ಲೆಕ್ಕಿಸದೆ ಪ್ರತಿಭಟನೆ ನಡೆಸುತ್ತಿದ್ದು, ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ಬೆಂಬಲ ಸೂಚಿಸಿದೆ. ಸಿದ್ದರಾಮಯ್ಯ ಸರ್ಕಾರ 8 ತಿಂಗಳು ಕಳೆದರೂ ನೀಡಿದ ಭರವಸೆ ಈಡೇರಿಸದ ಕಾರಣ ಆಶಾ ಕಾರ್ಯ ಕರ್ತೆಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಆರೋಗ್ಯ ಇಲಾಖೆ ಅಧಿಕಾರಿಗಳು ಮನವಿ ಸ್ವೀಕರಿಸಿ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದ್ದಾರೆ.**

**ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ ರಾಜ್ಯ ಉಪಾಧ್ಯಕ್ಷ ವಿ.ಎನ್.ರಾಜಶೇಖರ್ ಪ್ರತಿಭಟನೆಯ ಸ್ಥಳಕ್ಕೆ ಆಗಮಿಸಿದ್ದ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ನಿಮ್ಮ ಇಲಾಖೆಯ ಅಡಿಯಲ್ಲಿ ದುಡಿಯುವ ಆಶಾ ಕಾರ್ಯ ಕರ್ತೆಯರ ನ್ಯಾಯಯುತ ಬೇಡಿಕೆಗಳು ಈಡೇರಿಸುವ ನಿಟ್ಟಿನಲ್ಲಿ ತಾವು ಮುಖ್ಯಮಂತ್ರಿಗಳನ್ನೂ ಒತ್ತಾಯಿಸಬೇಕು.**

# ಮಿನಿ ನ್ಯೂಸ್

## ಟ್ರೇಡಿಂಗ್ ಲಿಂಕ್ ಒತ್ತಿ 69 ಲಕ್ಷ ರೂ. ಕಳೆದುಕೊಂಡ ದಂಪತಿ

• **ಉದಯವಾಹಿನಿ,ಮೈಸೂರು**

ಶೇರು ವಹಿವಾಟಿನಲ್ಲಿ ಹೆಚ್ಚಿನ ಲಾಭಾಂಶ ಆಮಿಷ ತೋರಿಸಿ ವೃದ್ದ ದಂಪತಿಗೆ 69.67 ಲಕ್ಷ ವಂಚಿಸಿರುವ ಪ್ರಕರಣ ಸೆನ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಶ್ರೀರಾಂಪುರ ನಿವಾಸಿ ಮಹದೇವ್ ಸಿಂಗ್(63), ಇವರ ಪತ್ನಿ ಹಣ ಕಳೆದುಕೊಂಡ ದಂಪತಿ. ಫೇಸ್ ಬುಕ್ ನಲ್ಲಿ ಶೇರು ಟ್ರೇಡಿಂಗ್ ಬಗ್ಗೆ ಬಂದ ಲಿಂಕ್ ನಂಬಿದ ದಂಪತಿ ವಂಚಕರು ಸೂಚಿಸಿದಂತೆ ವಿವಿಧ ಹಂತಗಳಲ್ಲಿ ಹಣ ಹೂಡಿದ್ದಾರೆ. ಮಹದೇವ್ ಸಿಂಗ್ ರವರು ತಮ ಖಾತೆಯಿಂದ 52,27,331 ರೂ. ವರ್ಗಾಯಿಸಿದ್ದಾರೆ. ಇವರ ಪತ್ನಿ ಖಾತೆಯಿಂದ 17,40,000 ರೂ. ವರ್ಗಾಯಿಸಿದ್ದಾರೆ. ಲಾಭದ ಹಣ ಡ್ರಾ ಮಾಡಲು ಮುಂದಾದಾಗ ತೆರಿಗೆ ಹಾಗೂ ಮಾರ್ಜಿನ್ ಹಣ ಕಟ್ಟುವಂತೆ ಒತ್ತಾಯಿಸಿದ್ದಾರೆ. ಆಗ ವಂಚನೆಗೆ ಒಳಗಾಗಿರುವುದು ಖಚಿತವಾಗಿ ಮಹದೇವ್ ಸಿಂಗ್ ರವರು ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

## ನ್ಯಾನೋ ಯೂರಿಯ ಸಿಂಪಡಣೆ ಪ್ರಾತ್ಯಕ್ಷಿಕೆ

• **ಉದಯವಾಹಿನಿ, ಚಿಂತಾಮಣಿ**

ಹರಳು ರೂಪದ ಯೂರಿಯ ಬದಲಾಗಿ ನ್ಯಾನೋ ಯೂರಿಯ ಬಳಸುವುದರಿಂದ ರೈತರಿಗೆ ಹಣ ಮತ್ತು ಶ್ರಮದ ಉಳಿತಾಯದ ಜೊತೆಗೆ ಇಳುವರಿ ಹೆಚ್ಚಾಗಲಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಅಮರನಾರಾಯಣರೆಡ್ಡಿ ಸಲಹೆ ನೀಡಿದರು. ತಾಲ್ಲೂಕಿನ ಮುರಗಮಲ್ಲ ಹೋಬಳಿಯ ಪೆದ್ದೂರು ಗ್ರಾಮದ ವೆಂಕಟರೆಡ್ಡಿ ಜಮೀನಿನಲ್ಲಿ ಕೃಷಿ ಇಲಾಖೆ ಮತ್ತು ಇನ್ನೊ-ಕಿಸಾನ್ ಸಂಸ್ಥೆಯ ಸಹಯೋಗದೊಂದಿಗೆ ಆಯೋಜಿಸಿದ್ದ ಪ್ರಾತ್ಯಕ್ಷಿಕೆಗೆ ಚಾಲನೆ ನೀಡಿ ಮಾತನಾಡಿದರು.

ಹರಳು ರೂಪದ ಯೂರಿಯ ಬಳಕೆಯಿಂದ ಸೂಕ್ಷ್ಮಾಣು ಜೀವಿಗಳು ನಾಶವಾಗುವುದರಿಂದ ಶೇ 60 ರಷ್ಟು ಮಾತ್ರ ಇಳುವರಿ ಹೆಚ್ಚಾಗಲಿದೆ. ನ್ಯಾನೋ ಯೂರಿಯ ಬಳಕೆ ಯಿಂದ ಶೇ 80ರಷ್ಟು ಇಳುವರಿ ಹೆಚ್ಚಾಗಲಿದೆ. ಒಂದು ಎಕರೆ ಸಿಂಪಡಣೆ ಮಾಡಲು ಕೇವಲ 10 ನಿಮಿಷ ಮಾತ್ರ ತೆಗೆದುಕೊಳ್ಳುತ್ತದೆ ಎಂದರು. ರೈತರು ಬೆಳೆದ ಬೆಳೆಗಳಿಗೆ ರೋಗ, ಕೀಟಬಾಧೆ ತಪ್ಪಿಸಲು ನೀರು, ಔಷಧಿಗಳನ್ನು ಸಂಗ್ರಹಿಸಿ ಕೂಲಿಕಾರ್ಮಿಕರನ್ನು ಕರೆತರುವುದು ಅಗತ್ಯವಿಲ್ಲ. ಕ್ಷಣ ಮಾತ್ರದಲ್ಲಿ 4-5 ಜನರ ಕೆಲಸ ಮಾಡಲಿದೆ ಎಂದು ಕೃಷಿ ಅಧಿಕಾರಿ ನಾಗಾರ್ಜುನ ಬಾಬು ತಿಳಿಸಿದರು. ಇನ್ನೊ-ಕಿಸಾನ್ ಸಂಸ್ಥೆಯ ಪ್ರತಾಪ್ ಮಾತನಾಡಿ, ಹತ್ತು ಲಕ್ಷಕ್ಕೂ ಹೆಚ್ಚು ಬೆಲೆ ಬಾಳುವ ಡ್ರೋನ್ ನಿರ್ವಹಣೆಗೆ ಇಬ್ಬರ ತಂಡ ನಿರಂತರ ಕೆಲಸ ಮಾಡಬೇಕಾಗುತ್ತದೆ. ಡ್ರೋನ್ 10 ರಿಂದ 20 ನಿಮಿಷದಲ್ಲಿ ಒಂದು ಎಕರೆಗೆ ಕ್ರಿಮಿನಾಶಕ, ಕಳೆ ನಾಶಕ ಸಿಂಪಡಿಸುವ ಸಾಮರ್ಥ್ಯ ಹೊಂದಿದೆ. 10 ಲೀಟರ್ ನೀರು ಔಷಧ ಸೇರಿ 12 ಲೀಟರ್ ದ್ರಾವಣವನ್ನು ತುಂಬಿಸಿಟ್ಟುಕೊಳ್ಳುವ ಸಾಮರ್ಥ್ಯ ಹೊಂದಿದೆ ಎಂದರು.

## ಪಿಡಿಒಗಳು ಚಳಿ ಬಿಟ್ಟು ಕೆಲಸ ಮಾಡಿ: ಶಾಸಕ ಎಚ್.ಟಿ. ಮಂಜು

• **ಉದಯವಾಹಿನಿ, ಕಿಕ್ಕೇರಿ**

ಗ್ರಾಮ ಪಂಚಾಯಿತಿ ಪಿಡಿಒಗಳಿಗೆ ಕೆಡಿಪಿ ಮೂಲಕ ಕಾರ್ಯವ್ಯಾಪ್ತಿ ವಿಶಾಲವಾಗಿದ್ದು, ಚಳಿ ಬಿಟ್ಟು ಕೆಲಸ ಮಾಡಿ ಎಂದು ಶಾಸಕ ಎಚ್.ಟಿ. ಮಂಜು ತಿಳಿಸಿದರು. ಹೋಬಳಿಯ ಸಾಸಲು ಗ್ರಾಮದಲ್ಲಿ ಬಿ.ಆರ್. ಅಂಬೇಡ್ಕರ್ ಸ್ತ್ರೀಶಕ್ತಿ ಮಹಿಳಾ ಸ್ವಸಹಾಯ ಸಂಘ ಉದ್ಘಾಟಿಸಿ ಮಾತನಾಡಿದರು. ಪಿಡಿಒಗಳು ಅಂಜದೇ ಗ್ರಾಮಾಭಿವೃದ್ಧಿಗೆ ಕೆಲಸ ಮಾಡಿ. ಸಂಘಕ್ಕೆ 5 ಲಕ್ಷ ಅನುದಾನ ಬಂದಿದೆ. ಅನುದಾನ ಹಣವನ್ನು ಹಂಚಿಕೊಳ್ಳದೆ ಮತ್ತಷ್ಟು ಹಣವನ್ನು ಬ್ಯಾಂಕ್‌ಗಳಲ್ಲಿ ಸಾಲವಾಗಿ ಪಡೆಯಿರಿ. ಕುಕ್ಕುಟ ಫಾರಂ ಆರಂಭಿಸಿ. ಸಂಘದ ಅಭಿವೃದ್ಧಿಯೊಂದಿಗೆ ಮಹಿಳೆಯರು ಸ್ವಾವಲಂಬಿಗಳಾಗಲು ಸಾಕಷ್ಟು ಸವಲತ್ತುಗಳಿದ್ದು, ಸದ್ಬಳಕೆ ಮಾಡಿಕೊಳ್ಳಿ ಎಂದರು. ಸಂಘದ ಮಹಿಳೆಯರು ಗ್ರಾಮದಲ್ಲಿ ಸಣ್ಣಪುಟ್ಟ ಸಮಾರಂಭ ಮಾಡಲು ಸಮಸ್ಯೆಯಾಗಿದ್ದು, ಅಂಬೇಡ್ಕರ್ ಸಮುದಾಯ ಭವನ ನಿರ್ಮಿಸಿಕೊಡಿ ಎಂದರು.

ಗ್ರಾಮದ ಬಹುತೇಕ ರಸ್ತೆಗಳು ಗುಂಡಿಬಿದ್ದಿದ್ದು, ಚರಂಡಿ, ಸೇತುವೆ ಮಾಡದೆ ರಸ್ತೆ ಕಾಮಗಾರಿ ಮಾಡಲಾಗಿದೆ. ಹಲವೆಡೆ ಕಾಮಗಾರಿ ಅರ್ಧಕ್ಕೆ ನಿಂತಿದೆ ಎಂದು ಗ್ರಾಮಸ್ಥರು ಅಲವತ್ತುಕೊಂಡರು. ಸೂಕ್ತ ಮಾಹಿತಿ ಪಡೆದು ಲೋಪವಾಗಿರುವುದನ್ನು ಸರಿಪಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಗುವುದು ಎಂದು ಶಾಸಕರು ನುಡಿದರು.

## ಗೌರವ ಪ್ರಶಸ್ತಿಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ಮಡಿಕೇರಿ**

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ 2024 ನೇ ವರ್ಷದ ಗೌರವ ಪ್ರಶಸ್ತಿಗೆ ಅರೆಭಾಷೆ ಸಂಸ್ಕೃತಿ, ಸಾಹಿತ್ಯ, ಕಲೆ, ಅಧ್ಯಯನ ಮುಂತಾದ ಕ್ಷೇತ್ರದಲ್ಲಿ ಅನನ್ಯ ಸೇವೆ ಸಲ್ಲಿಸಿದವರಿಂದ ಅರ್ಜಿ ಆಹ್ವಾನಿಸಲಾಗಿದೆ. ತಲಾ ಒಬ್ಬರಂತೆ 3 ಜನ ಸಾಧಕರನ್ನು ಅಕಾಡೆಮಿ ಗೌರವ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ. ಅರ್ಜಿಗಳನ್ನು ಸ್ವತಃ ಸಾಧಕರು ಸಲ್ಲಿಸುವುದು, ಅವರ ಅಭಿಮಾನಿಗಳು ಶಿಫಾರಸ್ಸು ಮಾಡಿ ಸಲ್ಲಿಸಬಹುದು. ಇವರು ಸಲ್ಲಿಸಿರುವ ಸೇವೆ, ಸಾಧನೆ ಬಗ್ಗೆ ಮಾಹಿತಿಗಳನ್ನು ಅರ್ಜಿಯ ಜೊತೆಗೆ ಅಕಾಡೆಮಿಗೆ ಒದಗಿಸಬೇಕು. ಭರ್ತಿ ಮಾಡಿದ ಅರ್ಜಿಯನ್ನು ವ್ಯಕ್ತಿ ಪರಿಚಯ ಮತ್ತು ಇತ್ತೀಚಿನ ಭಾವಚಿತ್ರದೊಂದಿಗೆ ಅಂಚೆ ಮೂಲಕ, ಖುದ್ದಾಗಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಸೆ.11 ಕೊನೆ ದಿನ. ಪ್ರಶಸ್ತಿಗೆ ಅರ್ಜಿ ಸಲ್ಲಿಸುವವರು ಲಕೋಟೆಯ ಮೇಲೆ ಗೌರವ ಪ್ರಶಸ್ತಿ 2024-ಯೋಜನೆ ಎಂದು ಬರೆದು ಅರ್ಜಿ ವಿವರಗಳನ್ನು ಅಧ್ಯಕ್ಷರು, ರಿಜಿಸ್ಟ್ರಾರ್, ಕರ್ನಾಟಕ ಅರೆಭಾಷೆ ಸಂಸ್ಕೃತಿ, ಸಾಹಿತ್ಯ ಅಕಾಡೆಮಿ, ಕಾಫಿ-ಕೃಪ ಕಟ್ಟಡ, 1, 2 571201. 08272-223055, 6362522677 5 ವಿಳಾಸಕ್ಕೆ ಕಳುಹಿಸಿಕೊಡಬೇಕು. ಮಾಹಿತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಅರೆಭಾಷೆ ಸಂಸ್ಕಂತಿ, ಸಾಹಿತ್ಯ ಅಕಾಡೆಮಿ ಕಚೇರಿಯಿಂದ ಪಡೆದು ಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

## ವಿದ್ಯುತ್ ಗ್ರಾಹಕರ ಸಂವಾದ ಸಭೆ

• **ಉದಯವಾಹಿನಿ, ಶಿಡ್ಲಘಟ್ಟ**



ಆಗಸ್ಟ್ 16ರ ಶನಿವಾರ ಮಧ್ಯಾಹ್ನ 3 ಗಂಟೆಯಿಂದ ಸಂಜೆ 5 ಗಂಟೆವರೆಗೆ ನಗರದ ಬೆಸ್ಕಾಂ ಕಚೇರಿ ಸಭಾಂಗಣದಲ್ಲಿ ಗ್ರಾಹಕರ ಸಂವಾದ ಸಭೆ ಮತ್ತು ವಿದ್ಯುತ್ ಸುರಕ್ಷತಾ ಸಭೆ ಹಮ್ಮಿಕೊಳ್ಳಲಾಗಿದೆ. ರೈತರು, ವಿದ್ಯುತ್ ಗ್ರಾಹಕರು, ಜನಪ್ರತಿನಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿ ವಿದ್ಯುತ್ ಪೂರೈಕೆ, ಇನ್ನಿತರೆ ವಿಚಾರಗಳ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಬಿ.ಪ್ರಭು ಮನವಿ ಮಾಡಿದ್ದಾರೆ.

ಅಂತರಾಳದಿಂದ..
EDITORIAL

# ಬೀದಿನಾಯಿಗಳಿಗೆ ಆಶ್ರಯ ಕೇಂದ್ರ: ತೀರ್ಪು ಪರಿಶೀಲನೆಗೆ ಒಳಪಡಲಿ



ಬೀದಿನಾಯಿಗಳನ್ನು ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಬೇಕು ಎನ್ನುವ ಸುಪ್ರೀಂ ಕೋರ್ಟ್ ನಿರ್ದೇಶನ ಹೊಸ ಸಮಸ್ಯೆಗಳಿಗೆ ಕಾರಣ ಆಗಬಹುದು. ತೀರ್ಪಿನ ತ್ವರಿತ ಪರಿಶೀಲನೆ ಅಗತ್ಯ. ಈ ಕಾನೂನುಗಳು ಮನುಷ್ಯರ ಹಿತರಕ್ಷಣೆ ಹಾಗೂ ಪ್ರಾಣಿಗಳ ಹಕ್ಕುಗಳ ನಡುವೆ ಸಮತೋಲನ ಸಾಧಿಸುವುದು ಹೇಗೆ ಎನ್ನುವುದರ ಬಗ್ಗೆಯೂ ತಿಳಿಸುತ್ತವೆ. ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ಹಾಗೂ ಲಸಿಕೆ ನೀಡುವ ಜವಾಬ್ದಾರಿಯನ್ನು ನಿರ್ವಹಿಸುವುದು ಆಡಳಿತ ಸಂಸ್ಥೆಗಳ ಹೊಣೆಗಾರಿಕೆಯಾಗಿದೆ. ಅಧಿಕಾರಿಗಳ ಹೊಣೆಗಾರಿಕೆಯ ವೈಫಲ್ಯದಿಂದಾಗಿಯೇ ಬೀದಿನಾಯಿಗಳ ಸಂಖ್ಯೆ ಹೆಚ್ಚಾಗಿದ್ದು, ಆಡಳಿತದಲ್ಲಿನ ಲೋಪಕ್ಕಾಗಿ ಬೀದಿನಾಯಿಗಳು ದಂಡ ತೆರುವಂತೆ ಆಗಬಾರದು.ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದೀವಾಲಾ ಮತ್ತು ಆರ್. ಮಹಾದೇವನ್ ಅವರನ್ನೊಳಗೊಂಡ ವಿಭಾಗೀಯ ಪೀಠ ನೀಡಿರುವ ತೀರ್ಪಿನಲ್ಲಿ ಪ್ರಾಣಿಪ್ರಿಯರು ಮತ್ತು ಹೋರಾಟಗಾರರ ಬಗ್ಗೆ ಕಠಿಣ ನುಡಿಗಳನ್ನಾಡಲಾಗಿದೆ. ನಾಯಿ ಕಡಿತದಿಂದ ಸಾವಿಗೀಡಾಗಿರುವ ಮಕ್ಕಳನ್ನು ಜೀವಂತಗೊಳಿಸುವುದು ಸಾಧ್ಯವಿಲ್ಲವಾದ್ದರಿಂದ, ನಾಯಿಗಳನ್ನು ಆಶ್ರಯ ತಾಣಗಳಿಗೆ ತಳ್ಳುವ ಪ್ರಕರಣದಲ್ಲಿ ಪ್ರಾಣಿ ಪ್ರಿಯರ ಭಾವನೆಗಳಿಗೆ ಯಾವುದೇ ಬೆಲೆಯಿಲ್ಲ ಎಂದು ನ್ಯಾಯಪೀಠ ಹೇಳಿದೆ. ಆದರೆ, ಸುಪ್ರೀಂ ಕೋರ್ಟ್‌ನ ಈ ತೀರ್ಮಾನದಲ್ಲಿ ಸಮರ್ಪಕ ತರ್ಕ ಅಥವಾ ಕಾನೂನಿನ ನೆಲೆಗಟ್ಟು ಇರುವಂತಿಲ್ಲ. ತೀರ್ಪು ನೀಡುವ ಮುನ್ನ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಮತ್ತು ಪ್ರಾಣಿ ಸಂರಕ್ಷಣಾ ಸಂಸ್ಥೆಗಳ ಅಭಿಪ್ರಾಯಗಳನ್ನು ನ್ಯಾಯಪೀಠ ಆಲಿಸಿಲ್ಲ. ಸರ್ಕಾರವನ್ನು ಪ್ರತಿನಿಧಿಸುವ ಸಾಲಿಸಿಟರ್ ಜನರಲ್ ಅವರು ಕೂಡ ಕಠಿಣ ನಿಲುವನ್ನು ತಳೆದುದರಿಂದ, ಆರಂಭದಲ್ಲಿ ದೆಹಲಿಗಷ್ಟೇ ಸೀಮಿತವಾಗಿದ್ದ ಬೀದಿ ನಾಯಿಗಳನ್ನು ಆಶ್ರಯ ತಾಣಗಳಿಗೆ ಅಟ್ಟುವ ಆದೇಶವು, ಇಡೀ ಎನ್‌ಸಿಆರ್‌ಗೆ ವಿಸ್ತರಣೆಗೊಂಡಿತು. ಆದರೆ, ನಾಯಿಗಳ ಜನನ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಎಬಿಸಿ ಕಾನೂನುಗಳು ಮಾತ್ರವೇ ತರ್ಕಬದ್ಧ. ವೈಜ್ಞಾನಿಕ, ಏಕೈಕ ಪರಿಹಾರವಾಗಿವೆ ಎಂದು ಕೇಂದ್ರ ಸರ್ಕಾರ ಕಳೆದ ಏಪ್ರಿಲ್‌ನಲ್ಲಿ ಲೋಕಸಭೆಗೆ ತಿಳಿಸಿತ್ತು. ಸುಪ್ರೀಂ ಕೋರ್ಟ್ ಕೂಡ ಈ ಮೊದಲು ಎಬಿಸಿ ಕಾನೂನುಗಳನ್ನು ಎತ್ತಿಹಿಡಿದಿದೆ ಹಾಗೂ ನಿರ್ಬಂಧ ಅಥವಾ ಸ್ಥಳಾಂತರದ ಬದಲು ನಾಯಿಗಳಿಗೆ ಆಹಾರ ಒದಗಿಸುವಂತೆ ಹೇಳಿದೆ. ಈಗ ವ್ಯತಿರಿಕ್ತ ನಿಲುವು ತಳೆದಿರುವ ನ್ಯಾಯಪೀಠ, ತನ್ನ ಆದೇಶ ಅನುಷ್ಠಾನಕ್ಕೆ ತರುವಲ್ಲಿ ಎದುರಾಗುವ ಯಾವುದೇ ಪ್ರತಿರೋಧವನ್ನು ನ್ಯಾಯಾಂಗ ನಿಂದನೆ ಎಂದು ಪರಿಗಣಿಸುವುದಾಗಿ ಎಚ್ಚರಿಸಿದೆ. ದೆಹಲಿಯ ಬೀದಿಗಳಲ್ಲಿ ಸುಮಾರು 10 ಲಕ್ಷ ನಾಯಿಗಳಿವೆ. ಅವುಗಳಿಗೆ ಆಶ್ರಯ ತಾಣಗಳನ್ನು ಕಲ್ಪಿಸುವುದು ಕೋಟ್ಯಂತರ ರೂಪಾಯಿಗಳ ವೆಚ್ಚಕ್ಕೆ ಕಾರಣವಾಗುತ್ತದೆ. ಆಶ್ರಯ ತಾಣಗಳಿಗಾಗಿ ಜಾಗ, ಕಟ್ಟಡಗಳ ನಿರ್ಮಾಣ, ಸಿಬ್ಬಂದಿಗೆ ಸಂಬಳ ಭರಿಸಬೇಕಾಗುತ್ತದೆ. ಸಂತ್ರಸ್ತರ ಶಿಬಿರಗಳಂತೆ ಈ ಕೇಂದ್ರಗಳನ್ನು ನಡೆಸಬೇಕಾಗುತ್ತದೆ. ಆಶ್ರಯ ಕೇಂದ್ರಗಳಿಗೆ ರವಾನೆಯಾಗುವ ನಾಯಿಗಳಿಂದ ತೆರವಾಗುವ ಬೀದಿಗಳಲ್ಲಿ, ಲಸಿಕೆ ಹಾಗೂ ಸಂತಾನ ನಿಯಂತ್ರಣ ಶಸ್ತ್ರಚಿಕಿತ್ಸೆಗೆ ಒಳಪಡದ ಪಕ್ಕದ ರಾಜ್ಯಗಳ ನಾಯಿಗಳು ತುಂಬಿಕೊಳ್ಳಲೂಬಹುದು. ಹೀಗೆ ಬೇರೆ ರಾಜ್ಯಗಳಿಂದ ಬರುವ ನಾಯಿಗಳನ್ನು ಗಡಿಗಳಲ್ಲಿ ತಡೆದು ಆಶ್ರಯ ಕೇಂದ್ರಗಳಿಗೆ ರವಾನಿಸಲು ಸಾಧ್ಯವಿದೆಯೆ ಲಭ್ಯ ಅಂಕಿ ಅಂಶಗಳ ಪ್ರಕಾರ, ನಾಯಿ ಕಡಿತಗಳ ಸಂಖ್ಯೆಯಲ್ಲಿ ಹೆಚ್ಚಳವಾಗಿರುವುದು ನಿಜ. ಆದರೆ, ನಾಯಿಗಳನ್ನು ಊರಿನಿಂದ ಹೊರಗೆ ದೊಡ್ಡಿಗಳಂಥ ಕೇಂದ್ರಗಳಲ್ಲಿ ಕೂಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಅಮಾನವೀಯ ಹಾಗೂ ಪ್ರಾಯೋಗಿಕವಲ್ಲದ ಪರಿಹಾರಗಳಿಂದ ಸಮಸ್ಯೆಗಳೇ ಹೆಚ್ಚು. ಬೀದಿನಾಯಿಗಳನ್ನು ಆಶ್ರಯ ಕೇಂದ್ರಗಳಲ್ಲಿ ಇರಿಸುವ ನ್ಯಾಯಪೀಠದ ತೀರ್ಪಿನ ಪರಿಶೀಲನೆ ನಡೆಸುವುದಾಗಿ ಮುಖ್ಯ ನ್ಯಾಯಮೂರ್ತಿ ಆರ್.ಬಿ. ಗವಾಯಿ ಹೇಳಿದ್ದಾರೆ. ಪರಿಶೀಲನೆ ತ್ವರಿತಗತಿಯಲ್ಲಿ ನಡೆದು, ಬೀದಿನಾಯಿಗಳಿಂದ ಉಂಟಾಗುತ್ತಿರುವ ಸಮಸ್ಯೆಗೆ ಕಾನೂನಿನ ಚೌಕಟ್ಟಿನಲ್ಲಿ, ಪ್ರಾಯೋಗಿಕ ಮಾನವೀಯ ಪರಿಹಾರ ಕಂಡುಕೊಳ್ಳುವಂತಾಗಲಿ.

**ದೆಹಲಿ ಮತ್ತು ರಾಷ್ಟ್ರ ರಾಜಧಾನಿಯ ಸುತ್ತಮುತ್ತಲಿನ ಪ್ರದೇಶಗಳ ಬೀದಿನಾಯಿಗಳನ್ನು ಹಿಡಿದು, ಅವುಗಳನ್ನು ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸುವಂತೆ ದೆಹಲಿ ರಾಷ್ಟ್ರ ರಾಜಧಾನಿ ಪ್ರದೇಶದ (ಎನ್‌ಸಿಆರ್) ಅಧಿಕಾರಿಗಳಿಗೆ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನ, ಈ ಹಿಂದಿನ ನ್ಯಾಯಾಲಯದ ತೀರ್ಪುಗಳಿಗೆ ಹಾಗೂ ಜಾರಿಯಲ್ಲಿರುವ ಕಾನೂನುಗಳಿಗೆ ವಿರುದ್ಧವಾದುದಾಗಿದೆ. ವಿಭಾಗೀಯ ಪೀಠದ ನಿರ್ದೇಶನದ ಹಿಂದೆ, ಭೂಮಿಯ ಮೇಲೆ ವಾಸಿಸಲು ಮನುಷ್ಯನಿಗಷ್ಟೇ ಹಕ್ಕಿದೆ ಎನ್ನುವ ಮನಃಸ್ಥಿತಿ ಇರುವಂತಿದೆ. ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯ್ದೆ- 1960 ಹಾಗೂ ಪ್ರಾಣಿಗಳ ಜನನ ನಿಯಂತ್ರಣ ನಿಯಮಗಳು- 2023 (ಎಬಿಸಿ) ರೀತಿಯ ಕಾನೂನುಗಳು, ಪ್ರಾಣಿಗಳು ಮತ್ತು ಸಾಕುಪ್ರಾಣಿಗಳನ್ನು ನಾವು ಹೇಗೆ ನಡೆಸಿಕೊಳ್ಳಬೇಕು ಎನ್ನುವುದನ್ನು ಸ್ಪಷ್ಟಪಡಿಸುತ್ತವೆ.**

# 79ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆ ಭಾರತದ ಗರ್ವದ ಕ್ಷಣ



☛ ವಿಶ್ವಾಸ್.ಡಿ.ಗೌಡ

ಪ್ರತಿ ವರ್ಷ ಆಗಸ್ಟ್ 15ರಂದು ಭಾರತವು ತನ್ನ ಸ್ವಾತಂತ್ರ್ಯವನ್ನು ಸಂಭ್ರಮದಿಂದ ಆಚರಿಸುತ್ತದೆ. ಈ ಬಾರಿ, 2025ರಲ್ಲಿ, ನಾವು 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. 1947ರ ಆಗಸ್ಟ್ 15ರಂದು ಬ್ರಿಟಿಷರ 200ಕ್ಕೂ ಹೆಚ್ಚು ವರ್ಷದ ಆಳ್ವಿಕೆಗೆ ಅಂತ್ಯವಿಟ್ಟು ಭಾರತವು ಸ್ವತಂತ್ರ ರಾಷ್ಟ್ರವಾಯಿತು. ಆ ದಿನದ ಬೆಳಗಿನಿಂದಲೇ ನಮ್ಮ ರಾಷ್ಟ್ರವು ಹೊಸ ಉದಯವನ್ನು ಕಂಡಿತು ಸ್ವಾಭಿಮಾನ, ಸ್ವಯಂನಿರ್ಣಯ, ಮತ್ತು ಜನತಾಂತ್ರಿಕ ಬದುಕಿನ ಪ್ರಾರಂಭ.

**ಇತಿಹಾಸದ ನೆನಪು:** ಸ್ವಾತಂತ್ರ್ಯದ ಹಾದಿ ಸುಲಭವಾಗಿರಲಿಲ್ಲ. 1857ರ ಮೊದಲ ಸ್ವಾತಂತ್ರ್ಯ ಸಮರದಿಂದ ಆರಂಭವಾಗಿ, ಅನೇಕ ಹೋರಾಟಗಾರರ ತ್ಯಾಗ, ಜೈಲು ಜೀವನ, ಅಹಿಂಸಾ ಸತ್ಯಾಗ್ರಹ, ಕ್ರಾಂತಿಕಾರರ ಶೌರ್ಯ ಇವೆಲ್ಲವೂ ಈ ದಿನದ ಆಧಾರ ಕಲ್ಲುಗಳಾಗಿವೆ. ಮಹಾತ್ಮ ಗಾಂಧೀಜಿಯ ಅಹಿಂಸಾ ಮಾರ್ಗ, ನೆಹರೂ, ಪಟೇಲ್, ಭಗತ್ ಸಿಂಗ್, ಸುಭಾಷ್ ಚಂದ್ರ ಬೋಸ್ ಅನೇಕ ಗಣ್ಯರು ನೀಡಿದ ಶ್ರಮವು ಇಂದಿನ ಸ್ವತಂತ್ರ ಭಾರತದ ಮೂಲ ಕಾರಣ.

**ಇಂದಿನ ಆಚರಣೆ:** ಸ್ವಾತಂತ್ರ್ಯ ದಿನದಂದು, ದೇಶದಾದ್ಯಂತ ಶಾಲೆ-ಕಾಲೇಜುಗಳು, ಸರ್ಕಾರಿ ಕಚೇರಿಗಳು, ಸಾರ್ವಜನಿಕ ಸ್ಥಳಗಳಲ್ಲಿ ಧ್ವಜಾ ರೋಹಣ ನಡೆಯುತ್ತದೆ. ದೆಹಲಿಯ ಕೆಂಪು ಕೋಟೆಯಲ್ಲಿ ಪ್ರಧಾನ ಮಂತ್ರಿ ರಾಷ್ಟ್ರಧ್ವಜ ಹಾರಿಸಿ, ದೇಶದ ಜನತೆಗೆ ಸಂದೇಶ ನೀಡುತ್ತಾರೆ. ಪಥ ಸಂಚಲನ, ದೇಶಭಕ್ತಿಗೀತೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ವಿದ್ಯಾರ್ಥಿಗಳ ಭಾಷಣಗಳು ಇವೆಲ್ಲವೂ ದೇಶ ಪ್ರೇಮವನ್ನು ಮತ್ತಷ್ಟು ಗಾಢಗೊಳಿಸುತ್ತವೆ.

**ಸ್ವಾತಂತ್ರ್ಯದ ಅರ್ಥ ಇಂದಿನ ಪೀಳಿಗೆಗೆ:** ಸ್ವಾತಂತ್ರ್ಯ ಎಂದರೆ ಕೇವಲ ರಾಜಕೀಯ ಮುಕ್ತಿಯಲ್ಲ; ಅದು ಆರ್ಥಿಕ, ಸಾಮಾಜಿಕ, ಸಾಂಸ್ಕೃತಿಕ ಹಾಗೂ ವೈಯಕ್ತಿಕ ಸ್ವಾತಂತ್ರ್ಯವನ್ನು ಒಳಗೊಂಡಿದೆ. ಇಂದಿನ ಯುವ ಪೀಳಿಗೆಗೆ, ಇದು ಜವಾಬ್ದಾರಿಯ ಸಂಕೇತ ಭ್ರಷ್ಟಾಚಾರ, ಅಸಮಾನತೆ, ಅಜ್ಞಾನ, ಪರಿಸರ ಹಾನಿ ಮುಂತಾದ ಸಮಸ್ಯೆಗಳನ್ನು ನಿವಾರಿಸಿ ರಾಷ್ಟ್ರದ ಅಭಿವೃದ್ಧಿಗೆ ತಮ್ಮ ಕೊಡುಗೆಯನ್ನು ನೀಡುವ ಹೊಣೆ.

**ಪ್ರೇರಣಾದಾಯಕ ಸಂದೇಶ:** ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳುವುದು ಅದನ್ನು ಗೆಲ್ಲುವಷ್ಟೇ ಮುಖ್ಯ. ಶೌರ್ಯ, ಶ್ರಮ, ಸತ್ಯ, ಅಹಿಂಸಾ ಮತ್ತು ಏಕತೆಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಿಜವಾದ ಸ್ವಾತಂತ್ರ್ಯ ಅನುಭವಿಸಬಹುದು.

ಈ 79ನೇ ಸ್ವಾತಂತ್ರ್ಯ ದಿನಾಚರಣೆಯಂದು, ನಾವೆಲ್ಲರೂ ರಾಷ್ಟ್ರ ಮೊದಲ, ನಾನು ನಂತರ'' ಎಂಬ ಮನೋಭಾವದೊಂದಿಗೆ ಕಾರ್ಯನಿರ್ವಹಿಸೋಣ.

**ಜೈ ಹಿಂದುಸ್ತಾನ್ ವಂದೇ ಮಾತರಂ**



# ಶ್ರೀ ರಾಘವೇಂದ್ರ ಗುರುಸಾರ್ವಭೌಮರ 354ನೇ ಆರಾಧನಾ ಮಹೋತ್ಸವ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಬೆಂಗಳೂರು**

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶದಂತೆ ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಕಳೆದ ಆರು ದಿನಗಳಿಂದ ಜರುಗುತ್ತಿರುವ ಶ್ರೀ ರಾಘವೇಂದ್ರ ಗುರುಸಾರ್ವಭೌಮರ 354ನೇ ಆರಾಧನಾ ಮಹೋತ್ಸವದ ಅಂಗವಾಗಿ ಆರನೇ ದಿನದಂದು ಹೆಸರಾಂತ ಗಾಯಕರಾದ ಡಾ|| ರಾಯಚೂರು ಶೇಷಗಿರಿದಾಸ್ ಸಂಗಡಿಗರಿಂದ ಹರಿದಾಸ ವಾಣಿ ಜರುಗಿತು ಎಂದು ಶ್ರೀ ಮಠದ ಪುರೋಹಿತರಾದ ನಂದ ಕಿಶೋರಾಚಾರ್ಯರು ತಿಳಿಸಿದರು,

ಈ ಕಾರ್ಯಕ್ರಮದ ಕೊನೆಯ ಹಂತದಲ್ಲಿ ಶ್ರೀ ರಾಯಚೂರು ಶೇಷಗಿರಿದಾಸರು ಮಾತನಾಡುತ್ತಾ ನನ್ನ ಸೋದರ ಸಮಾನರಾದ ಶ್ರೀ ವಾದೀಂದ್ರಾಚಾರ್ಯರು ಹಾಗೂ ನಂದಕಿಶೋರ್ ಆಚಾರ್ಯರು ನನ್ನ ಮೇಲೆ ಅಭಿಮಾನದಿಂದ ನನಗೆ ಕಾರ್ಯಕ್ರಮ ನೀಡಿದ್ದಕ್ಕೆ ತುಂಬಾ ಧನ್ಯವಾದಗಳು ಎಂದರು.

ಈ ವಿಶೇಷ ಕಾರ್ಯಕ್ರಮದಲ್ಲಿ ದಾಸಸಾಹಿತ್ಯಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಆಲಿಸಿ, ರಾಯರ ದರ್ಶನ ಪಡೆದು, ಪ್ರಸಾದ ಮಂತ್ರಾಕ್ಷತೆ ಸ್ವೀಕರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು ರಾಯರ ಬೃಂದಾವನಕ್ಕೆ ವಿಶೇಷ ಅಲಂಕಾರ ಮತ್ತು ಸ್ವಸ್ತಿವಾಚನ ಕಾರ್ಯಕ್ರಮವು ನೆರವೇರಿತು

# ಕೇಸರಿ, ಬಿಳಿ, ಹಸಿರು.. ಈ ರೀತಿ ತಿಂಡಿ ಮಾಡೋಕೆ 5 ನಿಮಿಷ ಸಾಕು!

**ರುಚಿಕರ ಬಾತ್ ಮಾಡಲು ಯಾವೆಲ್ಲಾ ವಸ್ತುಗಳು ಬೇಕು?**

- ರವೆ
- ಸಕ್ಕರೆ
- ಕೇಸರಿ ಬಣ್ಣ
- ಹಸಿರು ಬಣ್ಣ
- ತುಪ್ಪ
- ಏಲಕ್ಕಿ ಪುಡಿ

ಸ್ವಾತಂತ್ರ್ಯೋತ್ಸವದಲ್ಲಿ ಇಡೀ ದೇಶ ಸಂಭ್ರಮದಿಂದ ಹಬ್ಬ ಆಚರಿಸಲಿದೆ. ಅದ್ರಲ್ಲೂ ಎಲ್ಲಾ ಸರ್ಕಾರಿ ಕಚೇರಿಗಳು, ಸಾರ್ವಜನಿಕ ಸ್ಥಳಗಳು ಸೇರಿ ಹಲವು ಕಡೆಗಳಲ್ಲಿ ನಾವು ತ್ರಿವರ್ಣ ಧ್ವಜ ಹಾರುವುದು ನೋಡಬಹುದು. ಹಾಗೆ ಮನೆಯಲ್ಲಿ ಮಕ್ಕಳಿದ್ದರೆ ಅವರಿಗಾಗಿ ಇಷ್ಟದ ತಿಂಡಿಗಳ ಮಾಡಿ ಸವಿಯಬಹುದು.

ಸರ್ಕಾರಿ ರಜಾ ದಿನದ ಹಿನ್ನೆಲೆ ಮಕ್ಕಳು ಮನೆಯಲ್ಲಿದ್ದರೆ ಅವರಿಗಾಗಿ ರುಚಿ ರುಚಿಯಾಗಿ ಹಾಗೆ ಸಿಹಿಯಾದ ಖಾದ್ಯವನ್ನು ಮಾಡಿ ಸವಿದು ನೋಡಿ. ಇನ್ನು ಹಬ್ಬದಲ್ಲಿ ತ್ರಿವರ್ಣ ಧ್ವಜದಂತಹ ಬಣ್ಣದಲ್ಲಿ ಮಾಡುವ ತಿಂಡಿಗಳು ಮಕ್ಕಳ ಗಮನ ಸೆಳೆಯುತ್ತವೆ. ಹಾಗೆ ಅದು ನೋಡಲು ಮಾತ್ರವಲ್ಲ ಸವಿಯಲು ಕೂಡ ಬಹಳ ರುಚಿಯಾಗಿರಲಿದೆ. ಆದ್ರೆ, ಸ್ವಾತಂತ್ರದ ದಿನಕ್ಕೆ ಯಾವೆಲ್ಲಾ ರೀತಿಯ ತಿಂಡಿ ಮಾಡಿ ಸವಿಯಬಹುದು ಎಂಬುದು ಕೂಡ ನೀವು ತಿಳಿದಿದ್ದೀರಿ. ಆದ್ರೆ, ನಾವಿಂದು ತ್ರಿವರ್ಣ ಧ್ವಜದಲ್ಲಿನ ಬಣ್ಣವನ್ನು ಹೋಲುವ ಬಾತ್ ಮಾಡಿ ಸವಿದು ನೋಡೋಣ.

ಈ ಬಾತ್ ಅನ್ನು ಕೇಸರಿ, ಬಿಳಿ, ಹಸಿರು ಬಣ್ಣಗಳೊಂದಿಗೆ ಮಾಡಲಾಗುತ್ತದೆ. ರುಚಿಯಲ್ಲಿ ಅದ್ಭುತವಾಗಿ ಹಾಗೆ ನೋಡಲು ಕೂಡ ವಿಶೇಷ ರೀತಿಯಲ್ಲಿರಲಿದೆ.

ಹಾಗಾದ್ರೆ ಈ ರುಚಿ ರುಚಿ ಬಾತ್ ಮನೆಯಲ್ಲಿ ಮಾಡೋದು ಹೇಗೆ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು ಮಾಡುವ ವಿಧಾನವೇನು ಎಂಬುದನ್ನು ಇಂದು ತಿಳಿದಿಕೊಳ್ಳೋಣ.



**ತ್ರಿವರ್ಣ ಧ್ವಜ ಹೋಲುವ ರುಚಿಕರ ಬಾತ್ ಮಾಡುವುದು ಹೇಗೆ?:** ಮೊದಲು ಒಲೆ ಮೇಲೆ ಒಂದು ಬಾಣಲೆ ಇಟ್ಟು ಅದಕ್ಕೆ 2 ಸ್ಪೂನ್ ತುಪ್ಪ ಹಾಕಿ ಬಳಿಕ 1 ಕಪ್ ರವೆಯನ್ನು ಹಾಕಿಕೊಂಡು ಚೆನ್ನಾಗಿ ಹುರಿದುಕೊಳ್ಳಬೇಕು. ಗೋಲ್ಡನ್ ಬ್ರೌನ್ ಕಲರ್ ತಿರುಗುವವರೆಗೂ ಹುರಿದುಕೊಳ್ಳಿ. ನಂತರ ತೆಗೆದು ಒಂದು ಬೌಲ್‌ಗೆ ಹಾಕಿಟ್ಟುಕೊಳ್ಳಿ. ಈಗ ಒಲೆ ಮೇಲೆ ಒಂದು ಪಾತ್ರೆ ಇಟ್ಟು ಅದಕ್ಕೆ 3 ಕಪ್ ನೀರು ಹಾಕಿ ಕುದಿಯಲು ಬಿಡಿ.

ನೀರು ಕುದಿಬರುವಾಗ ಮೊದಲು ಹುರಿದಿಟ್ಟುಕೊಂಡಿದ್ದ ರವೆಯನ್ನು ಇದಕ್ಕೆ ಹಾಕಿಕೊಳ್ಳಿ. ನಂತರ ನಿಧಾನವಾಗಿ ಮಿಕ್ಸ್ ಮಾಡುತ್ತಾ 1 ನಿಮಿಷ ಬಿಡಿ. 1 ನಿಮಿಷದ ಬಳಿಕ ಅರ್ಧ ಕಪ್ ಸಕ್ಕರೆ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಹಾಗೆ ಏಲಕ್ಕಿ ಪುಡಿ ಹಾಗೆ ಕೇಸರಿ ಪುಡಿ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈಗ ಒಂದು ಊಟದ ಬಾಕ್ಸ್‌ನಂತರ ವೃತ್ತಾಕಾರದ ಬಾಕ್ಸ್ ತೆಗೆದುಕೊಂಡು ತಳಕ್ಕೆ ತುಪ್ಪ ಅಥವಾ ಎಣ್ಣೆ ಸವರಿಕೊಂಡು ಬಳಿಕ ಈ ಕೇಸರಿ ಬಾತ್ ಅನ್ನು ಈ ಪಾತ್ರೆಗೆ ಸುರಿದು ಮೇಲೆ ಮೆತ್ತಗೆ ಒತ್ತಿಕೊಳ್ಳಿ. ಈಗ ಉಳಿದ ಬಿಳಿ ಹಾಗೂ ಹಸಿರು ಬಣ್ಣದ ಬಾತ್‌ಗೂ ಕೂಡ ಇದೇ ರೀತಿಯಾಗಿ ಕ್ರಮದಲ್ಲಿ ಮಾಡಿ. ಬಿಳಿ ಬಣ್ಣಕ್ಕೆ ಕೇವಲ ರವೆ ಹಾಕಿ ಬಳಿಕ ಕೇಸರಿ ರವೆಯ ಬಳಿಕ ಬಿಳಿ ರವೆಯ ಬಾತ್ ಹಾಕಿ ಮೇಲಿನಿಂದ ಒತ್ತಿಡಿ. ಹಾಗೆ ಹಸಿ ಬಣ್ಣ ಹಾಕಿ ರವೆ ಸಕ್ಕರೆ ಹಾಕಿ ನಂತರ ಅದನ್ನು ಕೂಡ ಬಾಕ್ಸ್‌ಗೆ ಹಾಕಿ ಮೇಲೆ ತುಪ್ಪ ಸವರಿ ಹಾಕಿಡಿ. ಈಗ ಒಂದು ತಟ್ಟೆಗೆ ಮತ್ತೆ ತುಪ್ಪ ಸವರಿ ಈ ಮೂರು ಬಾತ್‌ಗಳು ಸ್ವಲ್ಪ ಗಟ್ಟಿಯಾಗಾದಾಗ ಬಾಕ್ಸ್ ಅನ್ನು ಉಲ್ಟಾ ಮಾಡಿ ಬಾಕ್ಸ್ ತೆಗೆಯಿರಿ. ಈಗ ಬರಿ ಬಾತ್ ಮಾತ್ರ ಉಳಿಯುವಂತೆ ಮಾಡಿ ನಂತರ ಇದನ್ನು ಕತ್ತರಿಸಿದರೆ ಕೇಸರಿ ಬಿಳಿ ಹಸಿರು ಬಣ್ಣದ ತಿಂಡಿ ರೆಡಿಯಾಗಿರುತ್ತದೆ.



# ಎದೆಯಲ್ಲಿ ಕಟ್ಟಿಕೊಂಡಿರುವ ಕಫವನ್ನು ಸಡಿಲಗೊಳಿಸಲು ಸುಲಭ ಮನೆಮದ್ದು

ಶೀತವಾದಾಗ ಕ್ರಮೇಣ ಕಫ ಉಂಟಾಗಲಾರಂಭಿಸುತ್ತದೆ. ಕಫ ಹೆಚ್ಚಾದಾಗ ಉಸಿರಾಡಲೂ ಕಷ್ಟವಾಗುತ್ತದೆ. ಅಂತಹ ಪರಿಸ್ಥಿತಿಯಲ್ಲಿ ಕಫವನ್ನು ನಿವಾರಿಸಲು ಕೆಲವೊಂದು ಮನೆಮದ್ದು ಇಲ್ಲಿದೆ. ಎದೆಯಲ್ಲಿ ಲೋಳೆಯ ದಟ್ಟಣೆಯು ವಾಯುಮಾರ್ಗಗಳಲ್ಲಿ ಲೋಳೆಯ ಅಧಿಕತೆಯನ್ನು ಸೂಚಿಸುವ ಸಾಮಾನ್ಯ ಲಕ್ಷಣವಾಗಿದೆ. ಇದು ಹೆಚ್ಚಾಗಿ ಉಸಿರಾಟದ ಸೋಂಕುಗಳು ಅಥವಾ ಇತರ ಸ್ಥಿತಿಗಳಿಂದ ಉಂಟಾಗುತ್ತದೆ. ಈ ಶೇಖರಣೆಯು ಉಸಿರಾಟವನ್ನು ಕಷ್ಟಕರವಾಗಿಸುತ್ತದೆ ಮತ್ತು ಕೆಮ್ಮಿಗೆ ಕಾರಣವಾಗುತ್ತದೆ. ಈ ಕಫದ ಸಮಸ್ಯೆಯನ್ನು ಸುಲಭವಾಗಿ ನಿವಾರಿಸಬಲ್ಲ ಕೆಲವೊಂದು ಮನೆಮದ್ದನ್ನು ಇಲ್ಲಿ ತಿಳಿಸಲಾಗಿದೆ.

**ಎದೆಯಲ್ಲಿ ಲೋಳೆಗೆ ಕಾರಣಗಳು:** ಸೋಂಕುಗಳು: ಸಾಮಾನ್ಯ ಶೀತಗಳು, ಜ್ವರ, ಬ್ರಾಂಕೈಟಿಸ್, ನ್ಯುಮೋನಿಯಾಗಳು ಲೋಳೆಯ ಉತ್ಪಾದನೆ, ಎದೆಯ ದಟ್ಟಣೆಯನ್ನು ಹೆಚ್ಚಿಸಬಹುದು.

**ಅಲರ್ಜಿಗಳು:** ಕಾಲೋಚಿತ ಅಲರ್ಜಿಗಳು ಹೆಚ್ಚುವರಿ ಲೋಳೆಯ ಉತ್ಪಾದನೆಯನ್ನು ಪ್ರಚೋದಿಸಬಹುದು.

**ದೀರ್ಘಕಾಲದ ಶ್ವಾಸಕೋಶದ ಕಾಯಿಲೆಗಳು:** ದೀರ್ಘಕಾಲದ ಬ್ರಾಂಕೈಟಿಸ್, ಎಂಫಿಸೆಮಾ ಸೇರಿದಂತೆ, ಸಿಸ್ಟಿಕ್ ಫೈಬ್ರೋಸಿಸ್, ಬ್ರಾಂಕಿಯಕ್ಟಾಸಿಸ್, ಓಪಿಡಿ ಶ್ವಾಸಕೋಶದ ಕಾಯಿಲೆಯಂತಹ ಪರಿಸ್ಥಿತಿಗಳು ನಿರಂತರ ಲೋಳೆಯ ಶೇಖರಣೆಗೆ ಕಾರಣವಾಗಬಹುದು.

**ಧೂಮಪಾನ:** ಧೂಮಪಾನವು ವಾಯು ಮಾರ್ಗಗಳನ್ನು ಕೆರಳಿಸುತ್ತದೆ, ಲೋಳೆಯ ಉತ್ಪಾದನೆಯನ್ನು ಹೆಚ್ಚಿಸುತ್ತದೆ.

**ಇತರ ಅಂಶಗಳು:** ಅಸ್ತಮಾ, ವಾಯು ಮಾಲಿನ್ಯ ಮತ್ತು ಕೆಲವು ಔಷಧಿಗಳು ಸಹ ಎದೆಯ ದಟ್ಟಣೆಗೆ ಕಾರಣವಾಗಬಹುದು.

**ಶುಂಠಿ, ಜೇನುತುಪ್ಪದ ಸೇವನೆ:** ಶುಂಠಿಯಲ್ಲಿರುವ ಉರಿಯೂತ ನಿವಾರಕ ಗುಣಗಳು ಗಂಟಲಿನ ಉರಿಯೂತವನ್ನು ಕಡಿಮೆ ಮಾಡುತ್ತದೆ. ಜೇನುತುಪ್ಪವು ಗಂಟಲನ್ನು ಆವರಿಸುವ ಮೂಲಕ ಕಫವನ್ನು ಸಡಿಲಗೊಳಿಸುತ್ತದೆ. ಒಂದು ಚಮಚ ಶುಂಠಿ ರಸ ಮತ್ತು ಒಂದು ಚಮಚ ಜೇನುತುಪ್ಪವನ್ನು ಬೆರೆಸಿ ದಿನಕ್ಕೆ ಎರಡು ಬಾರಿ ಸೇವಿಸುವುದರಿಂದ ಕಫ ಕರಗುತ್ತದೆ.

**ತುಳಸಿ ಮತ್ತು ಶುಂಠಿ ಚಹಾ:**

**ತುಳಸಿ ಮತ್ತು ಶುಂಠಿ ಎರಡೂ ಗಂಟಲಿಗೆ ಔಷಧವಾಗಿ ಕಾರ್ಯನಿರ್ವಹಿಸುತ್ತವೆ. ತುಳಸಿ ಎಲೆಗಳು ಮತ್ತು ಶುಂಠಿಯನ್ನು ನೀರಿನಲ್ಲಿ ಕುದಿಸಿ ಚಹಾ ಮಾಡಿ ಮತ್ತು ಅದನ್ನು ಬೆಚ್ಚಗೆ ಇರುವಾಗಲೇ ಕುಡಿಯಬೇಕು. ಇದು ಕಫವನ್ನು ತ್ವರಿತವಾಗಿ ಕರಗಿಸುವುದಲ್ಲದೆ ಕಫವನ್ನು ಹೊರಹಾಕಲು ಸಹಾಯ ಮಾಡುತ್ತದೆ.**



**ಉಗುರು ಬೆಚ್ಚಗಿನ ನೀರಿನಿಂದ ಬಾಯಿ ಮುಕ್ಕಳಿಸಿ:** ಉಗುರು ಬೆಚ್ಚಗಿನ ನೀರಿಗೆ ಒಂದು ಚಿಟಿಕೆ ಉಪ್ಪು ಸೇರಿಸಿ ಗಾರ್ಗಲ್ ಮಾಡೋದ್ರಿಂದ ಗಂಟಲು ನೋವು ಕಫ ಎರಡರಿಂದಲೂ ಪರಿಹಾರ ಸಿಗುತ್ತದೆ. ಕಫವನ್ನು ಸಡಿಲಗೊಳಿಸಲು ಮತ್ತು ಬ್ಯಾಕ್ಟೀರಿಯಾವನ್ನು ತೊಡೆದುಹಾಕಲು ಇದು ಸುಲಭವಾದ ಮಾರ್ಗವಾಗಿದೆ.ಈ ರೀತಿ ಮಾಡೋದ್ರಿಂದ ಕಫ ಸ್ವಲ್ಪ ಸ್ವಲನೇ ಕರಗಿ ಹೊರಬರಲಾರಂಭಿಸುತ್ತದೆ.

**ಆವಿ ಇನ್ಹಲೇಷನ್:** ಬಿಸಿ ನೀರಿನ ಹಬೆಯಲ್ಲಿ ಪುದೀನಾ ಅಥವಾ ಓಂಕಾಳನ್ನು ಹಾಕಿ 5 ನಿಮಿಷಗಳ ಕಾಲ ಉಸಿರಾಡಿ. ಇದು ಗಂಟಲು ಮತ್ತು ಮೂಗಿನಲ್ಲಿ ಸಂಗ್ರಹವಾಗಿರುವ ಕಫವನ್ನು ಕರಗಿಸಲು ಸಹಾಯ ಮಾಡುವುದಲ್ಲದೆ ಉಸಿರಾಟವನ್ನು ಸುಲಭವಾಗಿಸುತ್ತದೆ. ಯಾವಾಗಲೂ ನಿಮಗೆ ಶೀತ ಅಥವಾ ಕಫ ಉಂಟಾಗಿದ್ದಲ್ಲಿ ಈ ರೀತಿ ಸ್ಟೀಮ್ ತೆಗೆದುಕೊಳ್ಳಿ.

**ನಿಂಬೆ ಮತ್ತು ಬೆಚ್ಚಗಿನ ನೀರಿನ ಸೇವನೆ:** ನಿಂಬೆಯಲ್ಲಿರುವ ವಿಟಮಿನ್ ಸಿ ರೋಗ ನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ ಮತ್ತು ಗಂಟಲಿನಲ್ಲಿ ಸಿಲುಕಿರುವ ಲೋಳೆಯನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಉಗುರು ಬೆಚ್ಚಗಿನ ನೀರಿನಲ್ಲಿ ನಿಂಬೆ ರಸ ಮತ್ತು ಸ್ವಲ್ಪ ಜೇನುತುಪ್ಪವನ್ನು ಬೆರೆಸಿ ಕುಡಿಯಿರಿ. ಇದು ಎದೆಯಲ್ಲಿರುವ ಕಫವನ್ನು ಕರಗಿಸುತ್ತದೆ.



# ರಾಮಾಯಣ

**ಅನಸೂಯಾ ಸೀತಾದೇವಿಯರ ಸಂಭಾಷಣೆ**

• ಹಿಂದಿನ ಸಂಚಿಕೆಯಿಂದ

## 116 ನೆಯ ಅಧ್ಯಾಯ

ಸೀತಾದೇವಿಯು ಅತಿಹರ್ಷಪಟ್ಟು ತಪೋಬಲ ಸಾಮರ್ಥ್ಯವುಳ್ಳ ಅನಸೂಯಾದೇವಿಯನ್ನು ಕುರಿತು ಮುಗುಳುನಗೆಯಿಂದ ತಾಯೆ, ನೀನು ಕೊಡುವುದಾಗಿ ನುಡಿದಾಗಲೇ ಸಮಸ್ತ ಕಾರ್ಯವೂ ಸಫಲವಾಯಿತು ಎಂದು ನುಡಿದಳು. ಆ ಮಾತನ್ನು ಕೇಳಿ ಅನುಸೂಯಾದೇವಿಯು ಅತ್ಯಂತ ಸಂತುಷ್ಟ ಚಿತ್ತಳಾಗಿ ಸೀತಾದೇವಿ. ಈ ಪುಷ್ಪಮಾಲಿಕೆಯನ್ನೂ ದಿವ್ಯಾಭರಣಗಳನ್ನೂ ದಿವ್ಯಗಂಧಾನುಲೇಪನವನ್ನೂ ತೆಗೆದುಕೊ. ಈ ಗಂಧವನ್ನು ಅನುಲೇಪನ ಮಾಡಿಕೊಂಡರೆ ಅತಿರಮ್ಯವಾಗಿ ನಿತ್ಯವೂ ಹೊಸ ಅನುಲೇಪನ ಮಾಡಿದಂತಿರುವುದು. ನೀನು ಈ ಗಂಧಲೇಪನವನ್ನು ಮಾಡಿಕೊಂಡರೆ ಮಹಾಲಕ್ಷ್ಮಿಯು ಅದಿಪುರುಷನಾದ ನಾರಾಯಣನಿಗೆ ಪ್ರಿಯಳಾಗಿರುವಂತೆ ಶ್ರೀರಾಮನಿಗೆ ಪ್ರಿಯಳಾಗಿರುವೆ ಎಂದು ನುಡಿದು ದೇವತಾನಿರ್ಮಿತವಾಗಿ ತನ್ನ ವಶದಲ್ಲಿದ್ದ ಅಂಗರಾಗವನ್ನೂ ದಿವ್ಯವಾದ ಪುಷ್ಪ ಮಾಲಿಕೆಯನ್ನೂ ದಿವ್ಯಾಭರಣಗಳನ್ನೂ ಉಡುಗೊರೆಯಾಗಿ ಕೊಟ್ಟಳು. ಸೀತಾದೇವಿಯು ಅನಸೂಯಾದೇವಿಯು ಉಡುಗೊರೆಯಾಗಿ ಕೊಟ್ಟ ಪುಷ್ಪಮಾಲಿಕೆಯೇ ಮೊದಲಾದ ವಸ್ತುಗಳನ್ನು ತೆಗೆದುಕೊಂಡು ಆ ದೇವಿಯ ಸಮೀಪದಲ್ಲಿ ಕೈ ಮುಗಿದುಕೊಂಡು ಕುಳಿತಳು. ಆಗ ಪತಿವ್ರತೆಯಾದ ಅನಸೂಯಾದೇವಿಯು ಸೀತಾದೇವಿಯನ್ನು ನೋಡಿ ಸೀತೆ, ಶ್ರೀರಾಮನು ನಿನ್ನನ್ನು ಸ್ವಯಂವರದಲ್ಲಿ ವಿವಾಹವಾದನೆಂದು ಕೇಳಿದೆನು. ಆ ಕಥಾವೃತ್ತಾಂತವನ್ನು ಕೇಳಬೇಕೆಂಬ ಇಚ್ಛೆಯುಂಟಾಗಿದೆ. ಅದನ್ನು ವಿಸ್ತಾರವಾಗಿ ಹೇಳು ಎಂದು ಕೇಳಿದಳು.

ಸೀತಾದೇವಿಯು ಆಕೆಯನ್ನು ಕುರಿತು ದೇವಿ, ನನ್ನ ತಂದೆಯಾದ ಜನಕಮಹಾರಾಯನು ಮಹಾಧರ್ಮಾತ್ಮನು. ಪರಾಕ್ರಮಿಯು. ರಾಜಧರ್ಮದಿಂದ ರಾಜ್ಯವನ್ನಾಳುತ್ತಿರುವವನು- ಆರಾಯನು ಒಂದು ಸಮಯದಲ್ಲಿ ಅಶ್ವಮೇಧಯಾಗವನ್ನು ಮಾಡುವುದಕ್ಕಾಗಿ ಯಾಗಸ್ಥಾನವನ್ನು ಸಮ ಮಾಡು ವುದಕ್ಕೆ ನೇಗಿಲಿನಿಂದ ಉಳುತ್ತಿದ್ದನು. ಆ ಸಮಯದಲ್ಲಿ ಒಂದು ಸ್ವರ್ಣಪೇಟಿಕೆಯು ಹೊರಗೆ ಕಾಣಿಸಲು ಅದನ್ನು ತೆಗೆದು ನೋಡಿದನು. ಆ ಪೆಟ್ಟಿಗೆಯಲ್ಲಿ ನನ್ನನ್ನು ಕಂಡು ತೆಗೆದಪ್ಪಿ ತೊಡೆಯಮೇಲೆ ಕುಳ್ಳಿರಿಸಿಕೊಂಡು ನನ್ನ ಮೈಮೇಲಿದ್ದ ಧೂಳನ್ನು ತೊಡೆದು ಸಂತಾನವಿಲ್ಲದಿದ್ದ ತನಗೆ ಒಬ್ಬ ಕುಮಾರಿಯಾದಳೆಂದು ಅತಿಹರ್ಷದಿಂದಿದ್ದನು. ಆ ಸಮಯದಲ್ಲಿ ಅಂತರಿಕ್ಷಮಾರ್ಗದಲ್ಲಿ ಎಳ್ಳೆ ಜನಕರಾಜನೆ. ಈ ಕುಮಾರಿಯು ನಿನ್ನ ಮಗಳು. ನೀನು ಈ ಮಗುವನ್ನು ಧರ್ಮದಿಂದ ಪರಿಪಾಲಿಸು. ನಿನ್ನ ಮನೆಗೆ ಕರೆದುಕೊಂಡು ಹೋಗು ಎಂದು ಶಬ್ಧವುಂಟಾಯಿತು. ಜನಕರಾಜನು ಅತಿಹರ್ಷವಟ್ಟು ನನ್ನನ್ನು ಮಗಳಾಗಿ ಪಡೆದು ಅತ್ಯಂತ ಐಶ್ವರ್ಯವನ್ನು ಪಡೆದಂತೆ ತನ್ನ ಪತ್ನಿಯನ್ನು ಕರೆದು ಶಿಶುವಾಗಿದ್ದ ನನ್ನನ್ನು ತನ್ನ ಸಂತಾನದಂತೆ ಧರ್ಮದಿಂದ ಚೆನ್ನಾಗಿ ರಕ್ಷಿಸಬೇಕೆಂದು ಕೊಟ್ಟನು. ಆ ದೇವಿಯು ಹರ್ಷದಿಂದ ನನ್ನನ್ನು ಪರಿಗ್ರಹಿಸಿ ರಕ್ಷಿಸಿದಳು.

ಆ ಬಳಿಕ ನನಗೆ ಯೌವನೋದಯವಾಗಲು ನನ್ನ ತಂದೆಯು ನನ್ನನ್ನು ಯಾವ ಪುರುಷನಿಗೆ ಕೊಡುವುದೆಂದು ಬಹಳವಾಗಿ ಚಿಂತಿಸ ಲಾರಂಭಿಸಿದನು.

ಮುಂದುವರಿಯುವುದು...

# 79ನೇ ಸ್ವಾತಂತ್ರ್ಯೋತ್ಸವ ಆಚರಣೆ

☛ - ವಿ.ಎಂ.ಎಸ್.ಗೋಪಿ



ಬೆಂಗಳೂರಿನ ಬಹುತೇಕ ಮಳಿಗೆಗಳು ಸೇರಿದಂತೆ ವ್ಯಾಪಕ ಕೇಂದ್ರಗಳು ಸೇಲ್‌ಗಳ ಪೈಪೋಟಿಯಲ್ಲಿ ತೊಡಗಿವೆ. ದೊಡ್ಡ ದೊಡ್ಡ ಮಾಲ್‌ಗಳು ನವವಧುವಿನಂತೆ ಕಂಗೊಳಿಸುತ್ತ ಶೃಂಗಾರಗೊಂಡಿವೆ. ಒಂದು ಕೊಂಡರೆ ಇನ್ನೊಂದು ಉಚಿತ ಅಷ್ಟು ರಿಯಾಯಿತಿ ಇಷ್ಟು ರಿಯಾಯಿತಿ ಅದು ಕೊಂಡರೆ ಇದು ಫ್ರೀ.. ಎಂಬ ಟಿವಿ ಜಾಯಿರಾತು ಮತ್ತು ಬ್ಯಾನರ್ ಗಳಿಂದ ಪ್ರಚಾರವಾಗುತ್ತಿವೆ. ಸ್ವಾತಂತ್ರ್ಯ ದಿನಾಚರಣೆ ಮತ್ತು ಗೌರಿ ಗಣೇಶ ಹಬ್ಬದ ಸಡಗರ. ಪ್ರತಿ ವರ್ಷ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಡಗರ ಸಂಭ್ರಮದಿಂದ ನಾವು ಆಚರಿಸುತ್ತೇವೆ. ನಾವೆಲ್ಲರೂ ಭಾರತೀಯರು ಎಂದು ಜಾತಿ, ಮತ, ಭೇದವಿಲ್ಲದೆ ಸಂಭ್ರಮಿಸುವ ದಿನವಿದು 78 ವಸಂತಗಳನ್ನು ಪೂರೈಸಿ 79ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸುತ್ತಿದ್ದೇವೆ.



ಈ ದಿನಾಚರಣೆಯ ದಿನದಂತ ದೇಶಭಕ್ತಿಯ ಹಾಡುಗಳು ಭಾಷಣಗಳು ಕಲೆ ಸಂಸ್ಕೃತಿ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಾರುವ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯುತ್ತವೆ.

ನಾವೆಲ್ಲರೂ ಭಾರತೀಯರು ಧರ್ಮ, ಜಾತಿ ಭಾಷೆ ಕುಲಗೋತ್ರ ಬಡವ, ಶ್ರೀಮಂತರು ವಿದ್ಯಾವಂತ ಅವಿದ್ಯಾವಂತ ಎಂಬ ಭೇದವಿಲ್ಲದೇ ನಮ್ಮ ಭಾರತ ದೇಶವನ್ನು ಪ್ರತಿಯೊಬ್ಬ ಪ್ರಜೆಯು ಪ್ರೀತಿಸುತ್ತಾನೆ. ಪ್ರೀತಿಸಲೇಬೇಕು, ಏಕೆಂದರೆ ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಪ್ರಾಣಗಳನ್ನೇ ಬಲಿದಾನ ಮಾಡಿದ್ದಾರೆ. ಸ್ವಾತಂತ್ರ್ಯನಂತರ ನಾವು ಸಾಕಷ್ಟು ಪ್ರಗತಿಯನ್ನು ಸಾಧಿಸಿದ್ದೇವೆ. ಕೃಷಿ ವಿದ್ಯೆ, ಆರೋಗ್ಯ, ಕೈಗಾರಿಕೆ, ಕಲೆ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಸಿನಿಮಾ, ಕ್ರೀಡೆ ಇತ್ಯಾದಿ ರಂಗದಲ್ಲಿ ನಮ್ಮ ದೇಶ ಮುಂದುವರೆದ ರಾಷ್ಟ್ರಗಳ ಶ್ರೇಣಿಯಲ್ಲಿ ಇದೆ. ಪ್ರಗತಿ ಪಥದಲ್ಲಿರುವ ಈ ದೇಶದ ಪ್ರಗತಿ ನಮ್ಮ ಪ್ರಗತಿ ಎಂಬ ಭಾವನೆ ಸದಾ ನಮ್ಮಲ್ಲಿರಬೇಕು.

ಸತ್ಯಮೇವ ಜಯತೇ ಇದು ನಮ್ಮ ರಾಷ್ಟ್ರೀಯ ಧ್ಯೇಯವಾಕ್ಯ, ಈ ಧ್ಯೇಯವಾಕ್ಯದ ಪರಿಪಾಲನೆ ಎಷ್ಟಾಗುತ್ತಿದೆ. ಎಲ್ಲಾ ಕಡೆ ಸುಳ್ಳು ವ್ಯಾಪಿಸಿಕೊಂಡು ಬಿಟ್ಟಿದೆ. ವಂಚನೆ, ಮೋಸ ಲಂಚ ಇಲ್ಲದೇ ಇಂದು ಯಾವ ವ್ಯವಹಾರಗಳು ಕೂಡಾ ನಡೆಯುತ್ತಿಲ್ಲ. ಸ್ವಾತಂತ್ರ್ಯ ಹೋರಾಟದಲ್ಲಿ ಅನೇಕ ಮಹಿಳೆಯರು ಕೂಡ ಹೋರಾಡಿದ್ದಾರೆ. ದೇಶವನ್ನು ಗೌರವಿಸುವ ನಾವು ಮಹಿಳೆಯರನ್ನು ಗೌರವಿಸಬೇಕು. ತಾಯಿ ಎಂಬ ಗೌರವ, ಮಗಳೆಂಬ ವಾತ್ಸಲ್ಯ. ಅತ್ತೆ ಎಂಬ ಅಭಿಯಾನ. ಸೊಸೆ ಎಂಬ ಪ್ರೀತಿ ಸಹೋದರ ಸಹೋದರಿಯರ ಪ್ರೀತಿ ಭಾಂದವ್ಯ. ನಾವೆಲ್ಲರೂ ಒಂದೇ ನಮ್ಮೆಲ್ಲರ ಸೃಷ್ಟಿಕರ್ತನು ಒಬ್ಬನೆ ಆಗಿರುವಾಗ ನಾವೆಲ್ಲರೂ ಒಂದೇ ಸಹೋದರ ಸಹೋದರಿಯಾಗಿ ಒಂದೇ ದೇಶದ ನಿವಾಸಿಗಳಾಗಿ ಜಾತಿ ಮತ ಧರ್ಮ ಭಾಷೆ ಭೇದವಿಲ್ಲದೇ ನಾವು ಭಾರತೀಯರು ಎಂಬ ಒಗ್ಗಟ್ಟು, ಏಕತೆಯನ್ನು ಪ್ರದರ್ಶಿಸಬೇಕಾಗಿದೆ.

ಸ್ವಾತಂತ್ರ್ಯ ದಿನಾಚರಣೆ ಎನ್ನುವುದು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದ ನಾವೆಲ್ಲರು ಒಂದೇ ಎಂಬ ಭಾವನೆಯನ್ನು ಗಟ್ಟಿಗೊಳಿಸೋಣ ಸ್ವಾತಂತ್ರ್ಯ ದಿನಾಚರಣೆಯ ಎಲ್ಲಾರು ಸಡಗರ ಸಂಭ್ರಮದಿಂದ ಆಚರಿಸೋಣ.

# ರಾಷ್ಟ್ರಧ್ವಜಕ್ಕಾಗುವ ಅಪಮಾನವನ್ನು ತಡೆಗಟ್ಟಿ ರಾಷ್ಟ್ರೀಯ ಚಿಹ್ನೆಗಳ ಗೌರವ ಕಾಪಾಡಿ !



• **ಉದಯವಾಹಿನಿ ಬೆಂಗಳೂರು**

ಸ್ವಾತಂತ್ರ್ಯ ದಿನಾಚರಣೆಯ ನಿಮಿತ್ತ ರಾಷ್ಟ್ರಧ್ವಜಕ್ಕಾಗುವ ಅಪಮಾನವನ್ನು ತಡೆಗಟ್ಟಿ ರಾಷ್ಟ್ರೀಯ ಚಿಹ್ನೆಗಳ ಗೌರವ ಕಾಪಾಡಬೇಕೆಂದು ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಬೆಂಗಳೂರಿನ ವಿವಿಧೆಡೆಗಳಲ್ಲಿ ಅಭಿಯಾನ ನಡೆಸಲಾಯಿತು. ಅಭಿಯಾನದ ಅಂತರ್ಗತ ಜಿಲ್ಲಾಧಿಕಾರಿಗಳ ಕಚೇರಿ, ತಾಲ್ಲೂಕು ಕಚೇರಿಗಳಲ್ಲಿ, 10ಕ್ಕೂ ಹೆಚ್ಚು ಪೊಲೀಸ್ ಠಾಣೆಗಳಲ್ಲಿ ಹಾಗೂ 80ಕ್ಕೂ ಅಧಿಕ ಶಾಲೆಗಳಲ್ಲಿ ಮನವಿ ಸಲ್ಲಿಸಲಾಯಿತು. 20ಕ್ಕೂ ಅಧಿಕ ಕಡೆಗಳಲ್ಲಿ 'ರಾಷ್ಟ್ರಧ್ವಜದ ಗೌರವ ಕಾಪಾಡಿ' ಈ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ಪ್ರಭೋದನೆ ಮಾಡಲಾಯಿತು. ಇದರ ಮೂಲಕ ಸಾವಿರಾರು ವಿದ್ಯಾರ್ಥಿಗಳು ಈ ಬಾರಿಯ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಪ್ಲಾಸ್ಟಿಕ್ ಧ್ವಜದ ಬಳಕೆ ಮಾಡುವುದಿಲ್ಲವೆಂದು ಪ್ರತಿಜ್ಞೆ ಸ್ವೀಕರಿಸಿದರು. ಈ ವೇಳೆ ಹಿಂದೂ ಜನಜಾಗೃತಿ ಸಮಿತಿಯ ಕಾರ್ಯಕರ್ತರು ಹಾಗೂ ಧರ್ಮ ಪ್ರೇಮಿಗಳು ಉಪಸ್ಥಿತರಿದ್ದರು.

ರಾಷ್ಟ್ರಧ್ವಜವು ರಾಷ್ಟ್ರದ ಆತ್ಮಾಭಿಮಾನವಾಗಿದೆ.15 ಆಗಸ್ಟ್, 26 ಜನವರಿಯಂದು ಈ ರಾಷ್ಟ್ರಧ್ವಜವನ್ನು ಅಭಿಮಾನದೊಂದಿಗೆ ಪ್ರದರ್ಶಿಸಲಾಗುತ್ತದೆ. ಆದರೆ ಅದೇ ದಿನ ಇದೇ ಕಾಗದ/ಪ್ಲಾಸ್ಟಿಕ್‌ನ ಚಿಕ್ಕ ಚಿಕ್ಕ ರಾಷ್ಟ್ರಧ್ವಜಗಳು ರಸ್ತೆಗಳ ಮೇಲೆ, ಕಸದ ತೊಟ್ಟಿ ಮತ್ತು ಚರಂಡಿಗಳಲ್ಲಿ ಹರಿದ ಅವಸ್ಥೆಯಲ್ಲಿ ಬಿದ್ದಿರುವುದು ಕಂಡು ಬರುತ್ತದೆ. ಪ್ಲಾಸ್ಟಿಕ್ ಧ್ವಜಗಳು ಕೂಡಲೇ ನಾಶವಾಗುವುದಿಲ್ಲ, ಆದುದರಿಂದ ಅನೇಕ ದಿನಗಳವರೆಗೆ ಈ ರಾಷ್ಟ್ರಧ್ವಜಗಳ ಅನಾದರವಾಗುವುದನ್ನು ನೋಡಬೇಕಾಗುತ್ತದೆ. ಅದಕ್ಕಾಗಿ ನಾವೆಲ್ಲರೂ ನಮ್ಮ ರಾಷ್ಟ್ರ ಧ್ವಜದ ಅಪಮಾನವನ್ನು ತಡೆದು ಮತ್ತು ರಾಷ್ಟ್ರ ಧ್ವಜದ ಗೌರವವನ್ನು ಕಾಪಾಡೋಣ' ಎಂದು ಸ್ವಾತಂತ್ರ್ಯೋತ್ಸವದ ನಿಮಿತ್ತ ಅಭಿಯಾನದ ಮೂಲಕ ರಾಷ್ಟ್ರದ ನಾಗರಿಕರಿಗೆ ಹಿಂದೂ ಜನಜಾಗೃತಿ ಸಮಿತಿಯು ಕರೆ ನೀಡಿದೆ.



# ಬೇಡರ ನಾಯಕನಾಗಿ ಡಾಲಿ ಧನಂಜಯ್

ಡಾಲಿ ಧನಂಜಯ್ ನಾಯಕನಾಗಿ ನಟಿಸುತ್ತಿರುವ 'ಹಲಗಲಿ' ಚಿತ್ರದ ಫಸ್ಟ್ ಲುಕ್ ಗುರುವಾರ ಸಂಜೆ ಅದ್ದೂರಿಯಾಗಿ ಬಿಡುಗಡೆ ಆಗಿದೆ. ಅದಕ್ಕೂ ಮುನ್ನ ಸಿನಿಮಾದ ಗ್ಲಿಂಪ್ಸ್ ರಿಲೀಸ್ ಮಾಡಿದೆ ಚಿತ್ರತಂಡ. ಆ ಗ್ಲಿಂಪ್ಸ್ ನಾನಾ ಅರ್ಥಗಳನ್ನು ನೀಡುತ್ತಿದೆ. ಡಾಲಿ ಅಭಿಮಾನಿಗಳು ಅದನ್ನು ಹಬ್ಬದ ರೀತಿಯಲ್ಲಿ ಆಚರಿಸುತ್ತಿದ್ದಾರೆ. ಬ್ರಿಟಿಷರ ವಿರುದ್ಧ ಮೊಟ್ಟ ಮೊದಲ ಗೆರಿಲ್ಲಾ ವಾರ್ ಮಾಡಿದ ಹಲಗಲಿ ವೀರರ ಕುರಿತು ಈ ಚಿತ್ರದಲ್ಲಿ ಡಾಲಿ ಅವರು ಬೇಡರ ನಾಯಕನಾಗಿ ಕಾಣಿಸಿಕೊಂಡಿದ್ದಾರೆ. ಚಿತ್ರದ ಗ್ಲಿಂಪ್ಸ್ ಬಿಡುಗಡೆಗೂ ಮುನ್ನವೇ ಚಿತ್ರತಂಡ ಹಂಚಿಕೊಂಡಿರುವ ಈ ಎರಡೂ ಫೋಟೋಗಳು ಸಾಕಷ್ಟು ಕುತೂಹಲ ಮೂಡಿಸಿದೆ. ಸುಕೇಶ್ ನಾಯಕ್ ನಿರ್ದೇಶನದ ಈ ಚಿತ್ರವನ್ನು ಕಲ್ಯಾಣ್ ಚಕ್ರವರ್ತಿ ಡಿ ಅವರು 80 ಕೋಟಿ ವೆಚ್ಚದಲ್ಲಿ ನಿರ್ಮಿಸುತ್ತಿದ್ದಾರೆ. ಕನ್ನಡದ ಜತೆಗೆ ತೆಲುಗು, ತಮಿಳು, ಹಿಂದಿ ಹಾಗೂ ಮಲಯಾಳಂ ಭಾಷೆಯಲ್ಲಿ ಮೂಡಿ ಬರುತ್ತಿರುವ ಚಿತ್ರ ಇದಾಗಿದೆ. ಮೊಟ್ಟ ಮೊದಲ ಬಾರಿಗೆ ಡಾಲಿ ಧನಂಜಯ್ ಅವರು ಐತಿಹಾಸಿಕ ಕತೆಯಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 1857ರಲ್ಲಿ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚು ಹೊತ್ತಿದಾಗ ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕಿನ ಹಲಗಲಿ ಗ್ರಾಮದ ಬೇಡರು, ಬ್ರಿಟಿಷರ ವಿರುದ್ಧ ಸಮರ ಸಾರಿದ್ದರು. ಸ್ವಾತಂತ್ರ್ಯ ಸಂಗ್ರಾಮದ ಸಂದರ್ಭದಲ್ಲಿ ಬ್ರಿಟಿಷರಿಗೆ ಗೆರಿಲ್ಲಾ ವಾರ್ ಮೂಲಕ ಸಿಂಹಸ್ವಪ್ನವಾಗಿ ಕಾಡಿದ ಹಲಗಲಿ ಬೇಡರ ಈ ಚರಿತ್ರಿಕ ಕಥನವನ್ನು ದಾಖಲಿಸುವ ನಿಟ್ಟಿನಲ್ಲಿ ಈ ಚಿತ್ರ ಮೂಡಿ ಬರುತ್ತಿದೆ.






# ಕೂಲಿ ಸಿನಿಮಾದಲ್ಲಿ ಉಪೇಂದ್ರ

## ಬ್ಲ್ಯಾಕ್ ಔಟ್‌ಫಿಟ್‌ನಲ್ಲಿ ರಿಯಲ್‌ಸ್ಟಾರ್ ಮಸ್ತ್ ಲುಕ್

ಕೂಲಿ ಸಿನಿಮಾದಲ್ಲಿ ಉಪೇಂದ್ರ ರೋಲ್ ಹೇಗಿದೆ ಉಪ್ಪಿ ಪಾತ್ರಕ್ಕೆ ಈ ಚಿತ್ರದಲ್ಲಿ ಎಷ್ಟು ಮಹತ್ವ ಇದೆ ಎಂಟ್ರಿ ಸೀನ್ ಹೇಗಿದೆ ವಿವರ ಇಲ್ಲಿದೆ ಓದಿ. ಕೂಲಿ ಚಿತ್ರದಲ್ಲಿ ರಿಯಲ್ ಸ್ಟಾರ್ ಉಪೇಂದ್ರ, ಯಾವ ರೀತಿ ಪಾತ್ರ ಮಾಡಿದ್ದಾರೆ. ಇವರ ಈ ಒಂದು ಪಾತ್ರಕ್ಕೆ ಈ ಚಿತ್ರದಲ್ಲಿ ಯಾವ ರೀತಿ ಮಹತ್ವ ಇದೆ. ಗೆಸ್ಟ್ ರೋಲ್ ಇದಾಗಿದ್ದರೂ ಇವರ ಎಂಟ್ರಿ ಹೇಗಿದೆ. ಉಪ್ಪಿ ಪಾತ್ರದ ಖದರ್ ಈ ಚಿತ್ರದಲ್ಲಿ ಯಾವ ರೀತಿ ಇರುತ್ತದೆ. ಸೋಷಿಯಲ್ ಮೀಡಿಯಾದಲ್ಲಿ ಇವರ ಪಾತ್ರ ಯಾವ ದೃಶ್ಯದ ವಿಡಿಯೋ ಶೇರ್ ಆಗುತ್ತಿದೆ. ಕೂಲಿ ಚಿತ್ರದಲ್ಲಿ ಉಪೇಂದ್ರ ಅಭಿನಯ ಭರ್ಜರಿ ಆಗಿದೆ. ಎಂಟ್ರಿನೂ ಜೋರಾಗಿಯೇ ಇದೆ. ಫೈಟ್ ಸೀನ್ ಮೂಲಕವೇ ಉಪೇಂದ್ರ ಎಂಟ್ರಿ ಆಗಿದೆ. ಇದನ್ನ ನೋಡಿದ ಉಪ್ಪಿ ಫ್ಯಾನ್ಸ್ ಹಾಗೂ ಕನ್ನಡ ಸಿನಿಮಾ ಫ್ಯಾನ್ಸ್ ವಿಡಿಯೋ ಶೇರ್ ಮಾಡಿಕೊಂಡಿದ್ದಾರೆ. ಆ ವಿಡಿಯೋವನ್ನೆ ವಿವರಿಸುವುದಾದ್ರೆ, ಇಲ್ಲಿ ಉಪ್ಪಿ ಜಬರ್‌ದಸ್ತ್ ಎಂಟ್ರಿನೇ ಆಗಿದೆ.



# ತೆರೆಗೆ ಬರಲು ಸಜ್ಜಾದ ಜಾಹ್ನವಿ

**ಚಿತ್ರದಲ್ಲಿ ಪ್ರೇಮಕಥೆ ಜತೆಗೆ ಸಂಘರ್ಷ**

ಸಿದ್ಧಾರ್ಥ್ ಮಲ್ಹೋತ್ರಾ, ಜಾಹ್ನವಿ ಕಪೂರ್ ಅವರ ಅಭಿನಯನದ 'ಪರಮ ಸುಂದರಿ' ಚಿತ್ರವು ತೆರೆ ಕಾಣಲು ಸಜ್ಜಾಗಿದೆ. ಈ ಹಿನ್ನೆಲೆಯಲ್ಲಿ ಚಿತ್ರದ ಟ್ರೇಲರ್ ಬಿಡುಗಡೆಗೊಂಡಿದ್ದ ಅಭಿಮಾನಿಗಳ ಗಮನ ಸೆಳೆದಿದೆ. ಇದೇ ಆಗಸ್ಟ್ 29ಕ್ಕೆ ಈ ಸಿನಿಮಾ ಬಿಡುಗಡೆಯಾಗಲಿದೆ.

'ದಸ್ವಿ' ಖ್ಯಾತಿಯ ತುಷಾರ್ ಜಲೋಟಾ ಅವರು ಈ ಚಿತ್ರವನ್ನು ನಿರ್ದೇಶಿಸಿದ್ದಾರೆ. ಈ ಚಿತ್ರದಲ್ಲಿ ಪ್ರೇಮಕಥೆ ಜತೆಗೆ ಸಂಘರ್ಷವೂ ಇರಲಿದ್ದು, ಚಿತ್ರ ವಿಭಿನ್ನವಾಗಿ ಮೂಡಿಬರಲಿದೆ ಎಂದು ಚಿತ್ರತಂಡ ಹೇಳಿದೆ.ಚಿತ್ರ ನಿರ್ಮಾಣ ಸಂಸ್ಥೆ ಈ ಚಿತ್ರವನ್ನು ನಿರ್ಮಿಸಿದೆ. ಕೇರಳದ ಸುಂದರ ಸ್ಥಳಗಳು ಸೇರಿದಂತೆ ವಿವಿಧ ಕಡೆ ಚಿತ್ರೀಕರಣ ನಡೆದಿದೆ. ಇತ್ತೀಚೆಗೆ ಜೂನಿಯರ್ ಎನ್‌ಟಿಆರ್ ಜತೆಯಾಗಿ 'ದೇವರ' ಚಿತ್ರದ ಮೂಲಕ ಬಾಲಿವುಡ್ ನಟಿ ಜಾಹ್ನವಿ ಕಪೂರ್ ವಿಶೇಷ ಪಾತ್ರದಲ್ಲಿ ಸದ್ದು ಮಾಡಿದ್ದರು. ಪರಮ ಸುಂದರಿಯಾಗಿ ಜಾಹ್ನವಿ ಕಪೂರ್ ಮೋಡಿ ಮಾಡಲಿದ್ದಾರೆಯೇ ಎಂಬುದನ್ನು ಕಾದು ನೋಡಬೇಕಿದೆ.



ಸಿನಿ ವಾಹಿನಿ

# ಪತಿ ವಿರುದ್ಧ ಉದ್ಯಮಿಗೆ 60 ಕೋಟಿ ರೂ. ವಂಚನೆ

ಮುಂಬೈ ಮೂಲದ ಉದ್ಯಮಿಯೊಬ್ಬರಿಗೆ 60 ಕೋಟಿ ರೂ. ವಂಚನೆ ಆರೋಪದಲ್ಲಿ ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ, ಪತಿ ರಾಜ್ ಕುಂದ್ರಾ ವಿರುದ್ಧ ಆರೋಪ ಕೇಳಿಬಂದಿದೆ. ಸೆಲೆಬ್ರಿಟಿ ದಂಪತಿಯ ಈಗ ನಿಷ್ಕ್ರಿಯವಾಗಿರುವ ಬೆಸ್ಟ್ ಡೀಲ್ ಟಿವಿ ಪ್ರೈವೇಟ್ ಲಿಮಿಟೆಡ್‌ಗಾಗಿ ಸಾಲ ಮತ್ತು ಹೂಡಿಕೆ ಒಪ್ಪಂದಕ್ಕೆ ಸಂಬಂಧಿಸಿದ ಪ್ರಕರಣ ಇದಾಗಿದೆ.

ಉದ್ಯಮಿ ದೀಪಕ್ ಕೊಠಾರಿ ಅವರು 2015-2023 ರ ಸುಮಾರಿಗೆ ವ್ಯವಹಾರ ವಿಸ್ತರಣೆಗಾಗಿ ತಮಗೆ 60.48 ಕೋಟಿ ರೂ.ಗಳನ್ನು ನೀಡಿದ್ದೆ. ಆದರೆ, ಅದನ್ನು ವೈಯಕ್ತಿಕ ವೆಚ್ಚಗಳಿಗೆ ಖರ್ಚು ಮಾಡಿಕೊಂಡಿದ್ದಾರೆ ಎಂದು ನಟಿ ಹಾಗೂ ಪತಿ ವಿರುದ್ಧ ಆರೋಪ ಮಾಡಿದ್ದಾರೆ. ಆರ್ಯ ಕಂಪನಿಗೆ ವಾರ್ಷಿಕ ಶೇ.12 ರಷ್ಟು ಬಡ್ಡಿದರದಲ್ಲಿ 75 ಕೋಟಿ ರೂ. ಸಾಲ ಕೇಳಿದ್ದರು. ಆದರೆ, ಹೆಚ್ಚಿನ ತೆರಿಗೆಗಳನ್ನು ತಪ್ಪಿಸಲು ಆ ಮೊತ್ತವನ್ನು ಹೂಡಿಕೆ ಎಂದು ಪರಿಗಣಿಸುವಂತೆ ಸೂಚಿಸಿದ್ದರು ಎಂದು ಉದ್ಯಮಿ ಆರೋಪಿಸಿದ್ದಾರೆ. ಸಭೆ ನಡೆಸಿ, ಹಣವನ್ನು ಸಮಯಕ್ಕೆ ಹಿಂದಿರುಗಿಸುವ ಭರವಸೆಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಕೊಠಾರಿ, 2015 ರ ಏಪ್ರಿಲ್‌ನಲ್ಲಿ ಮೊದಲ ಕಂತಿನ ಸುಮಾರು 31.95 ಕೋಟಿ ರೂ. ಕಳುಹಿಸಿದ್ದೆ.

ಆದರೆ ತೆರಿಗೆ ಸಮಸ್ಯೆ ಹಾಗೆಯೇ ಉಳಿದು ಸೆಪ್ಟೆಂಬರ್‌ನಲ್ಲಿ ಎರಡನೇ ಒಪ್ಪಂದಕ್ಕೆ ಸಹಿ ಹಾಕಲಾಯಿತು. 2015 ಮಾರ್ಚ್ ಮತ್ತು 2016 ರ ಮಾರ್ಚ್ ನಡುವೆ ಅವರು 28.54 ಕೋಟಿ ರೂ. ವರ್ಗಾಯಿಸಿಕೊಂಡಿದ್ದರೆಂದು ಉದ್ಯಮಿ ತಿಳಿಸಿದ್ದಾರೆ.

60.48 ಕೋಟಿ ರೂ.ಗೂ ಹೆಚ್ಚು ಹಣವನ್ನು ವರ್ಗಾಯಿಸಿದ್ದಾರೆ. ಜೊತೆಗೆ 3.19 ಲಕ್ಷ ರೂ. ಸ್ಟಾಂಪ್ ಡ್ಯೂಟಿಯಾಗಿ ಪಾವತಿಸಿದ್ದಾರೆ. 2016ರ ಏಪ್ರಿಲ್‌ನಲ್ಲಿ ಶೆಟ್ಟಿ ಅವರು ವೈಯಕ್ತಿಕ ಗ್ಯಾರಂಟಿ ಕೂಡ ನೀಡಿದ್ದರು ಎಂದು ಕೊಠಾರಿ ಹೇಳಿದ್ದಾರೆ.

# ಕಾನೂನಿನ ಮುಂದೆ ಎಲ್ಲರೂ ಒಂದೇ

**ಬೇಲ್ ರದ್ದು ಬಗ್ಗೆ ನಟಿ ರಮ್ಯಾ ಪೋಸ್ಟ್**



ರೇಣುಕಾಸ್ವಾಮಿ ಕೇಸ್‌ಲ್ಲಿ ನಟ ದರ್ಶನ್ ಸೇರಿ ಏಳು ಆರೋಪಿಗಳ ಜಾಮೀನನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದ ಬೆನ್ನಲ್ಲೇ ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ಸ್ಟೋರಿ ಹಂಚಿಕೊಂಡಿದ್ದಾರೆ.

ಈ ಕುರಿತು ಇನ್‌ಸ್ಟಾಗ್ರಾಂನಲ್ಲಿ ಸ್ಟೋರಿ ಹಾಕಿಕೊಂಡಿರುವ ಅವರು, ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಮತ್ತು ಇತರರಿಗೆ ಜಾಮೀನು ರದ್ದುಗೊಳಿಸಿದ ಸುಪ್ರೀಂ ಕೋರ್ಟ್ ತೀರ್ಪು ಇಂದು ಬಲವಾದ ಸಂದೇಶವನ್ನು ರವಾನಿಸಿದೆ. ಕಾನೂನಿನ ಮುಂದೆ ಎಲ್ಲರೂ ಸಮಾನರು. ಎಲ್ಲರಿಗೂ ನಾನು ಹೇಳುವುದೇನೆಂದರೆ ನ್ಯಾಯಯುತ ಪ್ರಕ್ರಿಯೆಯನ್ನು ಅನುಸರಿಸಿ, ಕಾನೂನು ವ್ಯವಸ್ಥೆಯಲ್ಲಿ ನಂಬಿಕೆ ಇರಿಸಿ. ಕಾನೂನನ್ನು ನಿಮ್ಮ ಕೈಗೆ ತೆಗೆದುಕೊಳ್ಳಬೇಡಿ, ಎಲ್ಲರಿಗೂ ನ್ಯಾಯ ಸಿಕ್ಕೇ ಸಿಗುತ್ತದೆ ಎಂದು ಬರೆದುಕೊಂಡಿದ್ದಾರೆ. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಸೇರಿ ಎಲ್ಲಾ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ಜಾಮೀನು ನೀಡಿತ್ತು. ಈ ಜಾಮೀನು ಆದೇಶವನ್ನು ಪ್ರಶ್ನಿಸಿ ರಾಜ್ಯ ಪೊಲೀಸ್ ಇಲಾಖೆ ಸುಪ್ರೀಂ ಕೋರ್ಟ್ ಮೊರೆ ಹೋಗಿತ್ತು. ವಾದ-ಪ್ರತಿವಾದ ಆಲಿಸಿದ ಸುಪ್ರೀಂ ಗುರುವಾರ (ಆ.14) ಜಾಮೀನು ಅರ್ಜಿಯನ್ನು ರದ್ದುಗೊಳಿಸಿ, ಕೂಡಲೇ ಎಲ್ಲಾ 7 ಆರೋಪಿಗಳು ಸರೆಂಡರ್ ಆಗಬೇಕೆಂದು ಸೂಚನೆ ನೀಡಿತ್ತು.

# ವೈರಲ್ ಫೋಟೋ ಬಗ್ಗೆ ಮೌನ ಮುರಿದ ಕರುಣ್ ನಾಯರ್

**ವೈರಲ್ ಆಗಿರುವ ಫೋಟೋ ನಿಜವಲ್ಲ**



ಭಾರತ-ಇಂಗ್ಲೆಂಡ್ ಟೆಸ್ಟ್ ಸರಣಿಯಲ್ಲಿ ಕರುಣ್ ನಾಯರ್ ಅವರ ಪ್ರದರ್ಶನ ನಿರಾಶಾದಾಯಕವಾಗಿದ್ದರೂ, ಓವಲ್ ಪಂದ್ಯದಲ್ಲಿ ಅವರ ಅರ್ಧಶತಕ ಗಮನ ಸೆಳೆಯಿತು. ಅಲ್ಲದೆ ಸೋಷಿಯಲ್ ಮೀಡಿಯಾದಲ್ಲಿ ಅವರ ಒಂದು ಫೋಟೋ ವೈರಲ್ ಆಯಿತು. ಆದರೆ ಕರುಣ್, ಅದು ಎಐನಿಂದ ರಚಿಸಲ್ಪಟ್ಟದ್ದು ಎಂದು ಹೇಳಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ಭಾರತ ಹಾಗೂ ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿ 2-2 ರಿಂದ ಸಮಬಲದೊಂದಿಗೆ ಅಂತ್ಯವಾದರೂ, ಕನ್ನಡಿಗ ಕರುಣ್ ನಾಯರ್‌ಗೆ ಮಾತ್ರ ಈ ಸರಣಿ ದುಸ್ವಪ್ನವಾಗಿ ಕಾಡಿತು ಎಂದರೆ ತಪ್ಪಾಗಲಾರದು. ಬರೋಬ್ಬರಿ 8 ವರ್ಷಗಳ ಬಳಿಕ ಟೀಂ ಇಂಡಿಯಾದಲ್ಲಿ ಸ್ಥಾನ ಪಡೆದಿದ್ದ ಕರುಣ್ ಈ ಸರಣಿಯಲ್ಲಿ ಅರ್ಧಶತಕದ ಒಂದೇ ಒಂದು ಇನ್ನಿಂಗ್ಸ್ ಆಡಿದ್ದನ್ನು ಬಿಟ್ಟರೆ, ಉಳಿದ ಇನ್ನಿಂಗ್ಸ್‌ಗಳಲ್ಲಿ ನೀರಸ ಪ್ರದರ್ಶನ ನೀಡಿದರು. ಅದರಲ್ಲೂ ಉತ್ತಮ ಆರಂಭ ಸಿಕ್ಕ ಬಳಿಕ ವಿಕೆಟ್ ಒಪ್ಪಿಸಿದ್ದು, ಕರುಣ್ ವೃತ್ತಿಜೀವನಕ್ಕೆ ಅಂತ್ಯಹಾಡುತ್ತಿರುವಂತೆ ಕಾಣುತ್ತಿತ್ತು. ಇದೆಲ್ಲದರ ನಡುವೆ ಓವಲ್ ಟೆಸ್ಟ್ ಪಂದ್ಯದ ವೇಳೆ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದ ಆದೊಂದು ಫೋಟೋ, ಕರುಣ್ ಇನ್ನೇನು ಅಂತರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಬಹುದು ಎಂಬ ವದಂತಿಗಳನ್ನು ಎಬ್ಬಿಸಿತ್ತು.




ವಾಸ್ತವವಾಗಿ ಓವಲ್‌ನಲ್ಲಿ ನಡೆದ ಐದನೇ ಮತ್ತು ಅಂತಿಮ ಟೆಸ್ಟ್ ಪಂದ್ಯವನ್ನು 6 ರನ್‌ಗಳಿಂದ ಗೆಲ್ಲುವ ಮೂಲಕ ಭಾರತ ತಂಡ ಸರಣಿಯನ್ನು ಸಮಬಲಗೊಳಿಸಿತು. ಈ ಸರಣಿಯ ಕೊನೆಯ ಪಂದ್ಯದಲ್ಲಿ ಆಡುವ ಅವಕಾಶ ಪಡೆದಿದ್ದ ಕರುಣ್ ನಾಯರ್ ಮೊದಲ ಇನ್ನಿಂಗ್ಸ್‌ನಲ್ಲಿ ಅರ್ಧಶತಕ ಬಾರಿಸಿ ತಂಡವನ್ನು ಸಂಕಷ್ಟದಿಂದ ಪಾರು ಮಾಡಿದ್ದರು. ಆದಾಗ್ಯೂ, ಎರಡನೇ ಇನ್ನಿಂಗ್ಸ್‌ನಲ್ಲಿ ಕರುಣ್‌ಗೆ ಹೆಚ್ಚಿನದನ್ನು ಮಾಡಲು ಸಾಧ್ಯವಾಗಿರಲಿಲ್ಲ. ಈ ವೇಳೆ ಡ್ರೆಸ್ಸಿಂಗ್ ಕೋಣೆಯಲ್ಲಿ ಕುಳಿತಿದ್ದ ಕರುಣ್ ಅಳುತ್ತಿರುವಂತೆ ಮತ್ತು ಕೆಎಲ್ ರಾಹುಲ್ ಅವರನ್ನು ಸಮಾಧಾನಪಡಿಸುತ್ತಿರುವಂತೆ ಬಿಂಬಿಸುವ ಫೋಟೋವೊಂದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು.

ಇದೀಗ ಆ ವೈರಲ್ ಫೋಟೋ ಬಗ್ಗೆ ಕರುಣ್ ನಾಯರ್ ಮೌನ ಮುರಿದಿದ್ದು, 'ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿರುವ ಕ್ರೀಡಾಂಗಣದ ಬಾಲ್ಕನಿಯಲ್ಲಿ ರಾಹುಲ್ ಜೊತೆಗಿನ ತಮ್ಮ ಫೋಟೋವನ್ನು ಎಐ ರಚಿಸಿದೆ. ಅದು ಎಐ ರಚಿಸಿದ ವೀಡಿಯೊ ಎಂದು ನಾನು ಭಾವಿಸುತ್ತೇನೆ. ಅದರಲ್ಲಿ ಯಾವುದೇ ಸತ್ಯಾಂಶವಿಲ್ಲ. ಹೌದು, ನಾವು ಖಂಡಿತವಾಗಿಯೂ ಬಾಲ್ಕನಿಯಲ್ಲಿ ಕುಳಿತಿದ್ದೆವು, ಆದರೆ ಈಗ ವೈರಲ್ ಆಗಿರುವ ಫೋಟೋ ನಿಜವಲ್ಲ' ಎಂದು ನಾಯರ್ ಹೇಳಿದ್ದಾರೆ.

# ಅರ್ಜುನ್ ಮದುವೆಯಾಗಲಿರುವ ಸಾನಿಯಾ

ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ಪುತ್ರ ಅರ್ಜುನ್ ತೆಂಡೂಲ್ಕರ್ ಹಠಾತ್ತನೆ ನಿಶ್ಚಿತಾರ್ಥ ಮಾಡಿಕೊಳ್ಳುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದ್ದಾರೆ. ಖಾಸಗಿ ಸಮಾರಂಭವೊಂದರಲ್ಲಿ, ಅವರು ಮುಂಬೈ ಉದ್ಯಮಿ ರವಿ ಘಾಯ್ ಅವರ ಮೊಮ್ಮಗಳು ಸಾನಿಯಾ ಚಂದೋಕ್ ಅವರೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡರು. ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್ ಅವರ ಪುತ್ರ, ಅರ್ಜುನ್ ತೆಂಡೂಲ್ಕರ್ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ ಎಂದು ವರದಿಯಾಗಿದೆ. ಅರ್ಜುನ್ ನಿಶ್ಚಿತಾರ್ಥ ಮಾಡಿಕೊಂಡಿರುವ ಹುಡುಗಿ ಸಾನಿಯಾ ಚಂದೋಕ್. ಮಾಧ್ಯಮ ವರದಿಗಳ ಪ್ರಕಾರ, ನಿಶ್ಚಿತಾರ್ಥವು ಖಾಸಗಿ ಆಗಿ ನಡೆದಿದೆ. ಇಲ್ಲಿ ಎರಡೂ ಕುಟುಂಬಗಳ ಪ್ರಮುಖ ವ್ಯಕ್ತಿಗಳು ಮಾತ್ರ ಹಾಜರಿದ್ದರು. 25 ವರ್ಷದ ಅರ್ಜುನ್ ತೆಂಡೂಲ್ಕರ್ ಇನ್ನೂ ಭಾರತ ಕ್ರಿಕೆಟ್



ತಂಡದ ಪರ ಆಡಲು ಅವಕಾಶ ಪಡೆದಿಲ್ಲ. ಆದರೆ ಅವರು ಐಪಿಎಲ್‌ನಲ್ಲಿ ಪಾದಾರ್ಪಣೆ ಮಾಡಿದ್ದಾರೆ.

ಅರ್ಜುನ್ ತೆಂಡೂಲ್ಕರ್ ಮುಂಬೈ ಇಂಡಿಯನ್ಸ್ ಪರ ಐಪಿಎಲ್‌ಗೆ ಪಾದಾರ್ಪಣೆ ಮಾಡಿ, ಇಲ್ಲಿಯವರೆಗೆ 5 ಪಂದ್ಯಗಳನ್ನು ಆಡಿದ್ದಾರೆ, ಅದರಲ್ಲಿ 3 ವಿಕೆಟ್‌ಗಳನ್ನು ಅವರು ಕಬಳಿಸಿದ್ದಾರೆ. ಇದು ಅರ್ಜುನ್ ತೆಂಡೂಲ್ಕರ್ ಬಗ್ಗೆ, ಈಗ ನಾವು ಅವರ ವಧು ಸಾನಿಯಾ ಚಂದೋಕ್ ಯಾರು ಎಂಬುದನ್ನು ನೋಡುವುದಾದರೆ ಸಾನಿಯಾ ಚಂದೋಕ್ ಮುಂಬೈ ಮೂಲದ ಉದ್ಯಮಿ ರವಿ ಘಾಯ್ ಅವರ ಮೊಮ್ಮಗಳು. ರವಿ ಘಾಯ್ ಬ್ರೂಕ್ಲಿನ್ ಕ್ರೀಮರಿಯ ಮೂಲ ಕಂಪನಿಯಾದ ಗ್ರಾವಿಸ್ ಗ್ರೂಪ್‌ನ ಅಧ್ಯಕ್ಷರು. ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದ ದಾಖಲೆಗಳ ಪ್ರಕಾರ, ಸಾನಿಯಾ ಮುಂಬೈ ಮೂಲದ ಮಿಸ್ಟರ್ ಪಾವ್ಸ್ ಪೆಟ್ ಸ್ಪಾ ಸ್ಟೋರ್ ಎಲ್‌ಎಲ್‌ಪಿಯಲ್ಲಿ ನಿಯೋಜಿತ ಪಾಲುದಾರ ಮತ್ತು ನಿರ್ದೇಶಕಿಯೂ ಆಗಿದ್ದಾರೆ. ಇವರು ಅರ್ಜುನ್ ತೆಂಡೂಲ್ಕರ್ ಅವರ ಬಾಲ್ಯದ ಗೆಳತಿಕೂಡ ಹೌದು. ಸಾನಿಯಾ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್‌ನಿಂದ ಪದವಿ ಪಡೆದಿದ್ದಾರೆ. ಇಂಡಿಯಾ ಟುಡೇ ವರದಿಯ ಪ್ರಕಾರ, ಆತಿಥ್ಯ ಮತ್ತು ಆಹಾರ ವಲಯದಲ್ಲಿ ಪ್ರಸಿದ್ಧ ಹೆಸರಾಗಿರುವ ಘಾಯ್ ಕುಟುಂಬವು ಖಾಸಗಿಯಾಗಿ ನಿಶ್ಚಿತಾರ್ಥ ಸಮಾರಂಭವನ್ನು ನಡೆಸಿತು. ಕುಟುಂಬವು ಇಂಟರ್‌ಕಾಂಟಿನೆಂಟಲ್ ಹೋಟೆಲ್ ಮತ್ತು ಬ್ರೂಕ್ಲಿನ್ ಕ್ರೀಮರಿಯಂತಹ ವ್ಯವಹಾರಗಳನ್ನು ಹೊಂದಿದೆ. ಇದಲ್ಲದೆ, ಸಾನಿಯಾ ತನ್ನ ಸ್ಟೈಲಿಶ್ ಪರ್ಸನಾಲಿಟಿ, ಫ್ಯಾಷನ್ ಸೆನ್ಸ್‌ನಿಂದ ಸಾಮಾಜಿಕ ಮಾಧ್ಯಮದಲ್ಲಿ ಸಾಕಷ್ಟು ಜನಪ್ರಿಯರಾಗಿದ್ದಾರೆ.



# ಏಷ್ಯಾಕಪ್‌ನಲ್ಲಿ ಭಾರತ ನಮ್ಮನ್ನು ಹೀನಾಯವಾಗಿ ಸೋಲಿಸುತ್ತೆ

**ಏಕದಿನ ಸರಣಿ ಸೋತ ಪಾಕ್**

2025ರ ಏಷ್ಯಾಕಪ್‌ನಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ಪಂದ್ಯದ ಬಗ್ಗೆ ಅನಿಶ್ಚಿತತೆ ಮುಂದುವರೆದಿದೆ. ಪಾಕಿಸ್ತಾನದ ಮಾಜಿ ಬ್ಯಾಟ್ಸ್‌ಮನ್ ಬಸಿತ್ ಅಲಿ, ಭಾರತ ತಮ್ಮ ತಂಡದ ವಿರುದ್ಧ ಆಡದಿರಲು ಮನವಿ ಮಾಡಿದ್ದಾರೆ. ಇತ್ತೀಚೆಗೆ ವೆಸ್ಟ್ ಇಂಡೀಸ್ ವಿರುದ್ಧ




ಪಾಕಿಸ್ತಾನದ ಸೋಲು ಈ ಮನವಿಯ ಹಿನ್ನೆಲೆಯಾಗಿದೆ.

2025 ರ ಏಷ್ಯಾಕಪ್ ಆರಂಭಕ್ಕೆ ಸುಮಾರು ಒಂದು ತಿಂಗಳು ಬಾಕಿ ಇದೆ. ಈಗಾಗಲೇ ಈ ಟೂರ್ನಿಯ ವೇಳಾಪಟ್ಟಿ ಪ್ರಕಟವಾಗಿದ್ದು, ಪಂದ್ಯಾವಳಿಯ ಹೈವೋಲ್ಟೇಜ್ ಪಂದ್ಯ ಸೆಪ್ಟೆಂಬರ್ 14 ರಂದು ಭಾರತ ಮತ್ತು ಪಾಕಿಸ್ತಾನ ನಡುವೆ ನಡೆಯಲಿದೆ. ಆದರೆ ಈ ಪಂದ್ಯ ನಡೆಯುವ ಬಗ್ಗೆ ಈಗಲೂ ಯಾವುದೇ ಸ್ಪಷ್ಟತೆ ಸಿಕ್ಕಿಲ್ಲ.

ಒಂದೆಡೆ, ಭಾರತೀಯ ಅಭಿಮಾನಿಗಳು ಭಾರತ, ಪಾಕಿಸ್ತಾನ ವಿರುದ್ಧ ಪಂದ್ಯವನ್ನು ಆಡಬಾರದು ಎನ್ನುತ್ತಿದ್ದಾರೆ. ಮತ್ತೊಂದೆಡೆ, ಪಾಕಿಸ್ತಾನದ ಮಾಜಿ ಬ್ಯಾಟ್ಸ್‌ಮನ್ ಬಸಿತ್ ಅಲಿ, ಟೀಂ ಇಂಡಿಯಾ ನಮ್ಮ ತಂಡದ ವಿರುದ್ಧದ ಪಂದ್ಯವನ್ನು ನಿರಾಕರಿಸುವಂತೆ ಮನವಿ ಮಾಡಿ ಎಲ್ಲರಲ್ಲೂ ಅಚ್ಚರಿ ಮೂಡಿಸಿದ್ದಾರೆ. ವಾಸ್ತವವಾಗಿ ಇತ್ತೀಚೆಗಷ್ಟೇ ವೆಸ್ಟ್ ಇಂಡೀಸ್ ಹಾಗೂ ಪಾಕಿಸ್ತಾನದ ನಡುವೆ ಮೂರು ಪಂದ್ಯಗಳ ಏಕದಿನ ಸರಣಿ ನಡೆಯಿತು. ಈ ಸರಣಿಯನ್ನು ಆತಿಥೇಯ ವೆಸ್ಟ್ ಇಂಡೀಸ್ ಗೆದ್ದುಕೊಂಡಿತು. ಮೊಹಮ್ಮದ್ ರಿಜ್ವಾನ್ ನೇತೃತ್ವದ ಪಾಕ್ ತಂಡ ಏಕದಿನ ಸರಣಿಯಲ್ಲಿ 1- 2 ಅಂತರದಿಂದ ಹೀನಾಯ ಸೋಲು ಕಂಡಿತು. ಈ ಮೂಲಕ ವಿಂಡೀಸ್ ತಂಡ 33 ವರ್ಷಗಳ ನಂತರ ಪಾಕಿಸ್ತಾನದ ವಿರುದ್ಧ ಏಕದಿನ ಸರಣಿ ಗೆದ್ದ ಸಾಧನೆ ಮಾಡಿತ್ತು. ಅದರಲ್ಲೂ ಸರಣಿಯ ಕೊನೆಯ ಪಂದ್ಯದಲ್ಲಿ ಪಾಕಿಸ್ತಾನ ನೀಡಿದ ಪ್ರದರ್ಶನ ತೀರ ಕಳಪೆಯಾಗಿತ್ತು. 294 ರನ್‌ಗಳ ಗುರಿ ಬೆನ್ನಟ್ಟಿದ ಪಾಕ್ ತಂಡ ಕೇವಲ 92 ರನ್‌ಗಳಿಗೆ ಆಲೌಟ್ ಆಗುವ ಮೂಲಕ 202 ರನ್‌ಗಳ ಸೋಲುಂಡಿತ್ತು.

**ಹೀನಾಯವಾಗಿ ಸೋಲ್ತೀವಿ**

ಇದೀಗ ತಂಡದ ಕಳಪೆ ಪ್ರದರ್ಶನದಿಂದ ಆಘಾತಕ್ಕೊಳಗಾಗಿರುವ ಪಾಕ್ ತಂಡದ ಮಾಜಿ ಬ್ಯಾಟ್ಸ್‌ಮನ್ ಬಸಿತ್ ಅಲಿ ಭಾರತದ ವಿರುದ್ಧದ ಏಷ್ಯಾಕಪ್ ಪಂದ್ಯದಲ್ಲಿ ಪಾಕಿಸ್ತಾನದ ಸೋಲು ಖಚಿತ ಎಂದಿದ್ದಾರೆ. ದಿ ಗೇಮ್ ಪ್ಲಾನ್ (ಯೂಟ್ಯೂಬ್ ಚಾನೆಲ್) ನಲ್ಲಿ ಮಾತನಾಡಿದ ಬಸಿತ್ ಅಲಿ, 'ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್‌ನಲ್ಲಿ ಮಾಡಿದಂತೆ ಏಷ್ಯಾಕಪ್‌ನಲ್ಲಿ ಪಾಕಿಸ್ತಾನದ ವಿರುದ್ಧ ಆಡಲು ಭಾರತ ನಿರಾಕರಿಸಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಏಕೆಂದರೆ ಟೀಂ ಇಂಡಿಯಾ, ನಮ್ಮ ತಂಡವನ್ನು ನೀವು ಊಹಿಸಲೂ ಸಾಧ್ಯವಾಗದಷ್ಟು ಕೆಟ್ಟದಾಗಿ ಸೋಲಿಸುತ್ತಾರೆ. ಹೀಗಾಗಿ ಹೀನಾಯ ಸೋಲಿನ ಅವಮಾನಕ್ಕೆ ಒಳಗಾಗುವ ಬದಲು ಟೀಂ ಇಂಡಿಯಾವೇ ನಮ್ಮ ತಂಡದ ವಿರುದ್ಧ ಆಡುವುದನ್ನು ನಿರಾಕರಿಸಬೇಕು' ಎಂದಿದ್ದಾರೆ.

# ಅಂತರರಾಷ್ಟ್ರೀಯ ಪಂದ್ಯವಾಡದ ಆಟಗಾರನಿಗೆ ಕೋಚ್ ಪಟ್ಟ

**ಶಾರ್ದೂಲ್ ತಂಡದಿಂದ ಶಾಕಿಂಗ್ ನಿರ್ಧಾರ**




ಮುಂಬರುವ ದುಲೀಪ್ ಟ್ರೋಫಿ ಋತುವು ಆಗಸ್ಟ್ 28 ರಿಂದ ಪ್ರಾರಂಭವಾಗಲಿದ್ದು, ಸೆಪ್ಟೆಂಬರ್ 11 ರಂದು ಫೈನಲ್ ಪಂದ್ಯ ನಡೆಯಲಿದೆ. ಟೂರ್ನಿ ಆರಂಭವಾಗುವ ಮುನ್ನ ಪಶ್ಚಿಮ ವಲಯ ಒಂದು ದೊಡ್ಡ ನಿರ್ಧಾರ ತೆಗೆದುಕೊಂಡಿದೆ. ಈ ಋತುವಿನಲ್ಲಿ ಭಾರತದ ಮಾಜಿ ದೇಶೀಯ ಕ್ರಿಕೆಟಿಗ ಕಿರಣ್ ಪವಾರ್ ಅವರನ್ನು ತಂಡದ ತರಬೇತುದಾರರನ್ನಾಗಿ ನೇಮಿಸಲಾಗಿದೆ. ಪವಾರ್ ದೇಶೀಯ ಕ್ರಿಕೆಟ್‌ನಲ್ಲಿ ಮುಂಬೈ ತಂಡವನ್ನು ಪ್ರತಿನಿಧಿಸಿದ್ದಾರೆ. ಆದರೆ ಅವರಿಗೆ ಭಾರತಕ್ಕಾಗಿ ಒಂದೇ ಒಂದು ಪಂದ್ಯವನ್ನು ಆಡಲು ಅವಕಾಶ ಸಿಗಲಿಲ್ಲ. ಈ ಋತುವಿನ ದುಲೀಪ್ ಟ್ರೋಫಿಯಲ್ಲಿ ಶಾರ್ದೂಲ್ ಠಾಕೂರ್ ಪಶ್ಚಿಮ ವಲಯದ ನಾಯಕತ್ವ ವಹಿಸಿಕೊಳ್ಳಲಿದ್ದಾರೆ. ಇದರೊಂದಿಗೆ, ಪಶ್ಚಿಮ ವಲಯವು ಸಂಪೂರ್ಣ ಕೋಚಿಂಗ್ ಸಿಬ್ಬಂದಿಯನ್ನು ಸಹ ಪ್ರಕಟಿಸಿದೆ. ಕಿರಣ್ ಪವಾರ್ ಹೊರತುಪಡಿಸಿ, ಪಲ್ಲವ್ ವೋರಾ ಸಹಾಯಕ ಕೋಚ್ ಪಾತ್ರದಲ್ಲಿ ತಂಡವನ್ನು ಸೇರಿಕೊಳ್ಳಲಿದ್ದಾರೆ. ಡಾ. ಜಯದೇವ್ ಪಾಂಡ್ಯ ಭೌತಶಾಸ್ತ್ರಜ್ಞರಾಗಿ ತಂಡವನ್ನು ಸೇರಿಕೊಳ್ಳಲಿದ್ದಾರೆ. ಮಹೇಶ್ ಪಾಟೀಲ್ ತಂಡದ ಶಕ್ತಿ ಮತ್ತು ಕಂಡೀಷನಿಂಗ್ ಕೋಚ್ ಆಗಿರುತ್ತಾರೆ. ಪ್ರದೀಪ್ ಸಿಂಗ್ ಚಂಪಾವತ್ ತಂಡದ ವಿಶ್ಲೇಷಕರಾಗಿರುತ್ತಾರೆ. ದತ್ತಾ ಮಿಥ್ಬಾವ್ಕರ್ ಪಶ್ಚಿಮ ವಲಯದ ವ್ಯವಸ್ಥಾಪಕರಾಗಿರುತ್ತಾರೆ. ತಂಡದ ತರಬೇತುದಾರರ ಪಟ್ಟಿಯನ್ನು ಪ್ರಕಟಿಸಿದ ಪಶ್ಚಿಮ ವಲಯದ ಸಂಚಾಲಕ ಅಭಯ್ ಹಡಪ್, ಈ ಋತುವಿನಲ್ಲಿ ತಂಡವನ್ನು ಅನುಭವಿ ವೃತ್ತಿಪರರು ಮುನ್ನಡೆಸಲಿದ್ದಾರೆ ಎಂದು ಹೇಳಿದರು. ಈ ಋತುವಿನಲ್ಲಿ ಆಟಗಾರರು ಈ ಪ್ರತಿಷ್ಠಿತ ದೇಶೀಯ ಸ್ಪರ್ಧೆಗೆ ಸಂಪೂರ್ಣವಾಗಿ ಸಿದ್ಧರಾಗಿರುವುದನ್ನು ಅವರು ಖಚಿತಪಡಿಸಿಕೊಳ್ಳುತ್ತಾರೆ. ಶಾರ್ದೂಲ್ ಠಾಕೂರ್ ಹೊರತುಪಡಿಸಿ, ಯಶಸ್ವಿ ಜೈಸ್ವಾಲ್, ಶ್ರೇಯಸ್ ಅಯ್ಯರ್, ಸರ್ಫರಾಜ್ ಖಾನ್ ಅವರಂತಹ ಕೆಲವು ದೊಡ್ಡ ಆಟಗಾರರು ಈ ಋತುವಿನಲ್ಲಿ ಪಶ್ಚಿಮ ವಲಯ ತಂಡದಲ್ಲಿದ್ದಾರೆ. ಪಶ್ಚಿಮ ವಲಯ ತಂಡವು ಸೆಮಿಫೈನಲ್‌ಗೆ ನೇರ ಪ್ರವೇಶ ಪಡೆದಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966